ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 153 ಸಂಚಿಕೆ- 153 | PAGE-8 ಪುಟ-8 | ಭಾನುವಾರ 27.07.2025 | RS.2/- ಬೆಲೆ 2/-




## ಬಿಜೆಪಿಯವರಿಗಿಂತ ಜಾಸ್ತಿ ಕೆಲಸ ಮಾಡಿದ್ದೇವೆ:ಸಿಎಂ

ಮಲ್ಲಮ್ಮನುಡಿವಾರ್ತೆ ಹಾಸನ:ಜು.26: ನಾವು ಬಿಜೆಪಿಯವರಿಗಿಂತ ಜಾಸ್ತಿ ಕೆಲಸ ಮಾಡಿದ್ದೇವೆ. ಬಿಜೆಪಿಯವರು ಏನು ಮಾಡಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಹಾಸನದಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ ವೇಳೆ, ಅಭಿವೃದ್ಧಿ ಕೆಲಸದಲ್ಲಿ ನಮ್ಮ ತಂದೆ ನಾಲ್ವಡಿ ಕೃಷ್ಣರಾಜ ಒಡೆಯರ್ ರೀತಿ ಕೆಲಸ ಮಾಡಿದ್ದಾರೆ ಎಂಬ ಯತೀಂದ್ರಅವರಹೇಳಿಕೆವಿಚಾರವಾಗಿ ಪ್ರತಿಕ್ರಿಯಿಸಿದರು. ಬಿಜೆಪಿಯವರು ಏನು ಮಾಡಿಲ್ಲ, ಎಲ್ಲಾ ನಾವು ಮಾಡಿದ್ದೇವೆ ಎಂದಿದ್ದಾರೆ.ದೆಹಲಿ ಭೇಟಿ ವಿಚಾರವಾಗಿ, ಹಿಂದುಳಿದ ವರ್ಗಗಳ ಸಮ್ಮೇಳನ ಇತ್ತು ಅದಕ್ಕೆ ಹೋಗಿದ್ದೆ.ನಾನುಹಿಂದುಳಿದವರ್ಗಗಳ ಸಲಹಾ ಸಮಿತಿ ಸದಸ್ಯ ಅದಕ್ಕಾಗಿ ಹೋಗಿದ್ದೆ ಎಂದು ತಿಳಿಸಿದ್ದಾರೆ. ಮೈಸೂರಿನಲ್ಲಿ ಶುಕ್ರವಾರ ಯತೀಂದ್ರ ಮಾತನಾಡುವಾಗ, ಮೈಸೂರು

(2ನೇ ಪುಟ ನೋಡಿ)

## 2011ರಿಂದಲೂ ಚುನಾವಣೆಯಲ್ಲಿ ಅಕ್ರಮ ನಡೆಯುತ್ತಲಿದೆ: ರಾಮಲಿಂಗಾ ರೆಡ್ಡಿ



ಬೆಂಗಳೂರು:ಜು.26: ಕಾಂಗ್ರೆಸ್ ನಾಯಕರು,ರಾಜ್ಯದಲ್ಲಿ ಅದರಲ್ಲೂ ಬೆಂಗಳೂರಿನಲ್ಲಿ ಚುನಾವಣೆಯಲ್ಲಿ ಅಕ್ರಮ ನಡೆದಿದೆ ಎಂಬ ಹೇಳಿಕೆಗೆ ಸಚಿವ ರಾಮಲಿಂಗಾ ರೆಡ್ಡಿ ಪ್ರತಿಕ್ರಿಯೆ ನೀಡಿದ್ದು ಇದು 2011ರಿಂದಲೂ ನಡೆಯುತ್ತಿರುವ ಅಕ್ರಮ ಎಂದು ಹೇಳಿದ್ದಾರೆ.

ಅವರು, ಜರ್ಮನಿ, ಜಪಾನ್ ದೇಶದಲ್ಲಿ ಇವಿಎಂ ಮಿಷನ್‌ಗಳನ್ನು ತಯಾರು ಮಾಡುತ್ತಾರೆ. ಆದರೆ ಅಲ್ಲೇ ಇದನ್ನ ಬಳಕೆ ಮಾಡಲ್ಲ. ಹಾಗೆಯೇ ಅಮೆರಿಕ ಲಂಡನ್ನಲ್ಲೂ ಇವಿಎಂ ಬಳಕೆ ಮಾಡಲ್ಲ. ನಮ್ಮ ದೇಶದಲ್ಲಿ ಇವಿಎಂ ಬಳಕೆಯನ್ನ ನಮ್ಮ ಪಕ್ಷವೇ ಜಾರಿಗೆ ತಂದಿದ್ದು, ಆದರೆ ಅದನ್ನ ಬಿಜೆಪಿಯವರು ಅಕ್ರಮಕ್ಕೆ ಬಳಕೆ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು.

2011ರಿಂದಲೂ ಇವಿಎಂಗಳನ್ನು ದುರ್ಬಳಕೆ ಮಾಡಿಕೊಂಡೇ ಬರುತ್ತಿದ್ದಾರೆ. ಬರೀ ಇವಿಎಂ ಮಾತ್ರವಲ್ಲ ಚುನಾವಣೆ ಅಂದರೆ ಬಿಜೆಪಿಯವರಿಗೆ ಅಕ್ರಮ. ಪ್ರತಿ ಹಂತದಲ್ಲೂ ಅಕ್ರಮ ಮಾಡಿಕೊಂಡು ಬರುತ್ತಿದ್ದಾರೆ ಎಂದರು.

# ರಾಜ್ಯ ತಲಾ ಆದಾಯದಲ್ಲಿ ದೇಶದಲ್ಲೇ ನಂಬರ್ ಒನ್: ಗ್ಯಾರಂಟಿ ಯೋಜನೆಗಳೇ ಕಾರಣ: ಸಿಎಂ



ಮಲ್ಲಮ್ಮನುಡಿವಾರ್ತೆ ಹಾಸನ:ಜು.26: ಕರ್ನಾಟಕ ರಾಜ್ಯ ತಲಾ ಆದಾಯದಲ್ಲಿ ಇಡೀ ದೇಶದಲ್ಲಿ ನಂಬರ್ ಒನ್ ಆಗಿದೆ. ಇದಕ್ಕೆ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳೇ ಪ್ರಮುಖ ಕಾರಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶನಿವಾರ ಹೇಳಿದರು.

ಅರಸೀಕೆರೆ ವಿಧಾನಸಭಾ ಕ್ಷೇತ್ರದಲ್ಲಿ ನಡೆದ ಹಲವು ಅಭಿವೃದ್ಧಿ ಕಾರ್ಯಗಳಿಗೆ ಉದ್ಘಾಟನೆ ಹಾಗೂ ಶಂಕುಸ್ಥಾಪನೆನೆರವೇರಿಸಿ ಮಾತನಾಡಿದ ಮುಖ್ಯಮಂತ್ರಿ, ಕರ್ನಾಟಕ ರಾಜ್ಯ ತಲಾ ಆದಾಯದಲ್ಲಿ ಇಡೀ ದೇಶದಲ್ಲಿ ನಂಬರ್ ಒನ್ ಆಗಿದೆ. ಇದಕ್ಕೆ ಪ್ರಮುಖ ಕಾರಣ ಜನರ ಕೊಳ್ಳುವ ಶಕ್ತಿ ಹೆಚ್ಚಾಗಿರುವುದು. ಕೊಳ್ಳುವ ಶಕ್ತಿ ಹೆಚ್ಚಾಗಲು ನಮ್ಮ ಗ್ಯಾರಂಟಿ ಯೋಜನೆಗಳು ಪ್ರಮುಖ ಕಾರಣ ಎಂದು ಸಮರ್ಥಿಸಿಕೊಂಡರು.


ಬಿಜೆಪಿಯವರಿಗೆ ಆರ್ಥಿಕತೆ ಅರ್ಥ ಆಗುವುದಿಲ್ಲ. ಅದಕ್ಕೇ ರಾಜ್ಯ ಸರ್ಕಾರದ ಬಳಿ ಅಭಿವೃದ್ಧಿಗೆ ಹಣ ಇಲ್ಲ ಎಂದು ಸುಳ್ಳು, ಅಪಪ್ರಚಾರ ಮಾಡುತ್ತಿದ್ದಾರೆ. ರಾಜಕೀಯ ಪ್ರೇರಿತ ಸುಳ್ಳುಗಳನ್ನು ಹೇಳಿ ರಾಜ್ಯದ ಜನರ ದಾರಿ ತಪ್ಪಿಸುವ ಯತ್ನ ಮಾಡಿದರೂ ರಾಜ್ಯದ ಜನತೆ ಯಾಮಾರುವುದಿಲ್ಲ ಎಂದರು.

ಸರ್ಕಾರದ ಸಾಧನಾ ಸಮಾವೇಶದಲ್ಲಿ ಲಕ್ಷ ಲಕ್ಷ ಜನ ಫಲಾನುಭವಿಗಳು ಸೇರಿ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸುತ್ತಿದ್ದಾರೆ. ಅಭಿವೃದ್ಧಿ ಯೋಜನೆಗಳಿಗೆ 1.20 ಲಕ್ಷ ಕೋಟಿ ಖರ್ಚು ಮಾಡುವುದರ ಜೊತೆಗೆ ಗ್ಯಾರಂಟಿ ಯೋಜನೆಗಳಿಗೆ 56 ಸಾವಿರ ಕೋಟಿ ಖರ್ಚು ಮಾಡಿ ಜನರ ಮನೆ ಬಾಗಿಲಿಗೆ ಅಭಿವೃದ್ಧಿ ಕಾರ್ಯಗಳನ್ನು ತಲುಪಿಸಿದ್ದೇವೆ. ಕಾಂಗ್ರೆಸ್ ಸಾಮಾಜಿಕ ನ್ಯಾಯ ಮತ್ತು ಬಡವರ ಪ್ರಗತಿಗಾಗಿ, ಸಂವಿಧಾನದ ಮೌಲ್ಯಗಳ ಈಡೇರಿ-ಕೆಗಾಗಿ ಕಾರ್ಯಕ್ರಮ ರೂಪಿಸಿ ಜಾರಿ ಮಾಡುವ ಏಕೈಕ ಪಕ್ಷ. ದೇಶದಲ್ಲಿ, ರಾಜ್ಯದಲ್ಲಿ ಸಾಮಾಜಿಕ ನ್ಯಾಯದ ಕಾರ್ಯಗಳನ್ನು ಜಾರಿ ಮಾಡಿರುವುದು ನಮ್ಮ ಪಕ್ಷ ಮಾತ್ರ ಎಂದು ಹೇಳಿದರು.

ದೆಹಲಿಯಲ್ಲಿ ನಡೆದ ಹಿಂದುಳಿದ ವರ್ಗಗಳ ನಾಯಕರ ಸಮ್ಮೇಳನದಲ್ಲಿ ರಾಹುಲ್ ಗಾಂಧಿಯವರು ಹಿಂದುಳಿದ ಸಮುದಾಯಗಳ ಬಗ್ಗೆ ತಮ್ಮ ಗ್ರಹಿಕೆಯನ್ನು ಸ್ಪಷ್ಟಪಡಿಸಿದ್ದಾರೆ". ಹಿಂದುಳಿದ ವರ್ಗಗಳು, ಮಹಿಳೆಯರು, ದಲಿತರು, ಶೋಷಿತರು, ಎಲ್ಲಾ ಜಾತಿಯ ಬಡವರ ಬದುಕಿಗೆ ಬೇಕಾದ ಕಾರ್ಯಕ್ರಮಗಳನ್ನು ಸರ್ಕಾರ ರೂಪಿಸಿದೆ ಎಂದು ಹೇಳಿದರು.

ಶಿವಲಿಂಗೇಗೌಡರಿಗೆ ರಾಜಕೀಯ ಭವಿಷ್ಯವಿದೆ. ಮಂತ್ರಿಯಾಗುವ ಎಲ್ಲಾ ಅರ್ಹತೆ ಹೊಂದಿದ್ದಾರೆ. ಜೊತೆಗೆ ಕ್ಷೇತ್ರದ ಜನರ ಆಶೀರ್ವಾದವೂ ಗಟ್ಟಿಯಾಗಿದೆ. ಈ ಕಾರಣ-ಕ್ಕೇ ನಾಲ್ಕು ಬಾರಿ ಗೆದ್ದಿರುವ ಶಿವಲಿಂಗೇಗೌಡರು ಮುಂದಿನ ಬಾರಿಯೂ ಗೆದ್ದು ಬರುತ್ತಾರೆ. ಆದರೆ ಕೆಲವೊಂದು ರಾಜಕೀಯ ಸಂಗತಿಗಳನ್ನು ಬಹಿರಂಗವಾಗಿ ಚರ್ಚಿಸಲು ಸಾಧ್ಯವಿಲ್ಲ ಎಂದರು.

## ಕೇಂದ್ರದಿಂದ 1.50 ಲಕ್ಷ ಟನ್ ರಸಗೊಬ್ಬರ ಕೊರತೆ: ಸಚಿವ ಚಲುವರಾಯಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.26: ನಮಗೆ ಒಟ್ಟು 6 ಲಕ್ಷದ 88 ಸಾವಿರ ಟನ್ ರಸಗೊಬ್ಬರ ಸಪ್ಲೈ ಆಗಬೇಕಿತ್ತು. ಅದರಲ್ಲಿ 5 ಲಕ್ಷದ 27 ಸಾವಿರ ಟನ್ ಸಪ್ಲೈ ಆಗಿದೆ. ಉಳಿದ 1 ಲಕ್ಷದ 50 ಸಾವಿರ ಟನ್ ಬರಬೇಕಿದೆ ಎಂದು ಸಚಿವ ಎನ್.ಚಲುವರಾಯಸ್ವಾಮಿ ಹೇಳಿದರು.

ಕಳೆದ ಒಂದೂವರೆ ತಿಂಗಳಿಂದ ಮಳೆ ಚೆನ್ನಾಗಿ ಆಗ್ತಿದೆ ಮುಂಗಾರು ಬೇಗ ಆರಂಭವಾಗಿದೆ ಡ್ಯಾಮ್‌ಗಳು ಬೇಗ ತುಂಬಿದ್ದರಿಂದ ಸ್ವಲ್ಪ ಸಮಸ್ಯೆ ಆಗಿದೆ. ಜೊತೆಗೆ 2 ಲಕ್ಷ ಹೆಕ್ಟೇರ್ ಜಾಸ್ತಿ ಬೇಸಾಯದ ಏರಿಯಾ ಜಾಸ್ತಿ ಆಗಿದೆ. ಈ ಕಾರಣಗಳಿಂದ ರಸಗೊಬ್ಬರಕ್ಕೆ ಬೇಡಿಕೆ ಹೆಚ್ಚಾಗಿದೆ. ಟೀಕೆ ಟಿಪ್ಪಣಿಗಿಂತ ಹೆಚ್ಚಾಗಿ ರೈತರ ಸಮಸ್ಯೆ ಬಗೆಹರಿಸಬೇಕು ಅಂತ ಮುಖ್ಯಮಂತ್ರಿಗಳಿಗೆ ನಾನೇ ಮನವಿ ಮಾಡಿದೆ ಪತ್ರ ಬರೆಯಿರಿ ಅಂತ ಹೇಳಿದೆ. ಆದರೆ ಈ ಸಂದರ್ಭವನ್ನು ಉಪಯೋಗಿಸಿಕೊಂಡು ಜೋಶಿಯವರು ಮಾತನಾಡುತ್ತಿದ್ದಾರೆ ಅಂತ ಅಸಮಾಧಾನ ಹೊರಹಾಕಿದರು.

ಇರಾನ್ ಯುದ್ಧದ ಕಾರಣಕ್ಕೆ ಯೂರಿಯಾ ಸಪ್ಲೈ ಬರ್ತಿಲ್ಲ:

ನಾನೇ ಜೋಶಿಯವರಿಗೆ ಪತ್ರ ಬರೆದಿದ್ದೇನೆ. ರಾಜ್ಯದ ಎಲ್ಲಾ ಸಂಸದರಿಗೂ ಹಾಗೂ ರಾಜ್ಯ ಪ್ರತಿನಿಧಿಸುವ ಸಚಿವರಿಗೆ ಪತ್ರ ಬರೆದಿದ್ದೇನೆ. ಆದ್ರೆ ಅದರ ಕಡೆ ಗಮನ ಹರಿಸದೇ ಸಿದ್ದರಾಮಯ್ಯರ ಬಗ್ಗೆ ಟೀಕೆ ಮಾಡಿದ್ದಾರೆ. ಜೋಶಿಯವರು ಕೃಷಿ ವಿಚಾರದಲ್ಲಿ ಹೀಗೆಲ್ಲಾ ರಾಜ-ಕಾರಣ ಮಾಡ್ತಾರೆ ಅಂತ ನಾನು ಅಂದುಕೊಂಡಿರಲಿಲ್ಲ. ರಸಗೊಬ್ಬರವನ್ನ ಟೈಮ್ ಟು ಟೈಮ್ ಕೊಡ್ತಾ-ರೆ. ನಾವು ಕಳೆದ ಬಾರಿ ಹೆಚ್ಚು ದಾಸ್ತಾನು ಮಾಡಿಕೊಳ್ಳುತ್ತಿದ್ದೆವು. ಆದರೆ ಕೇಂದ್ರ ಸರ್ಕಾರದಲ್ಲಿ 2-3 ಪ್ರಾಬ್ಲಂ ಇದೆ. ಇರಾನ್‌ನ ಯುದ್ಧದ ಕಾರಣಕ್ಕೆ ಯೂರಿಯಾ ಸಪ್ಲೈ ಬರ್ತಿಲ್ಲ, ಚೀನಾದಿಂದ ಸಂಪೂರ್ಣ ಸ್ಥಗಿತವಾಗಿದೆ. ರಾಷ್ಟ ಮಟ್ಟದಲ್ಲಿ ಉತ್ಪಾದನೆ ಕಡಿಮೆ ಆಗಿದೆ. ಇದೆಲ್ಲ ಕೇಂದ್ರ ಸರ್ಕಾರದವರೆ ಕೊಡಬೇಕು ಅಂತ ಹೇಳಿದರು.

ನಾವು ಟೀಕೆ ಟಿಪ್ಪಣಿಗೆ ಹೋಗಲ್ಲ. ಹಳೇ ಬ್ಯಾಲೆನ್ಸ್ ಸೇರಿ ತಗೆದು-ಕೊಂಡು ರೈತರಿಗೆ ಕೊಡುವ ಪ್ರಯತ್ನ ಮಾಡುತ್ತಿದ್ದೇವೆ. ರೈತರಿಗೆ

(2ನೇ ಪುಟ ನೋಡಿ)

## ಬೀದರ್ ಜಿಲ್ಲೆಯಾದ್ಯಂತ 4ನೇ ದಿನವೂ ಮುಂದುವರೆದ ಮಳೆ; ಜನಜೀವನ ಅಸ್ತವ್ಯಸ್ತ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜು. 26 : ಜಿಲ್ಲೆಯಾದ್ಯಂತ ಮಳೆ ಮುಂದುವರೆದಿದ್ದು, ಸತತ ಮಳೆಗೆ ಜನಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ.

ನಾಲ್ಕನೇ ದಿನವಾದ ಶನಿವಾರವೂ ಮಳೆ ಸುರಿಯುತ್ತಿದೆ. ನಿರಂತರವಾಗಿ ಜಿಟಿಜಿಟಿ ಮಳೆಯಾಗುತ್ತಿದ್ದು, ನಡು ನಡುವೆ ಜೋರಾಗಿ ಬೀಳುತ್ತಿದೆ. ಶನಿವಾರ ಬೆಳಕು ಹರಿಯುತ್ತಿದ್ದಂತೆ ಗಂಟೆಗೂ ಹೆಚ್ಚು ಕಾಲ ಬಿರುಸಿನ ಮಳೆಯಾಯಿತು. ಬಳಿಕ ಜಿಟಿ-ಜಿಟಿಯಾಗಿ ಮುಂದುವರೆದಿದೆ.

ದೈನಂದಿನ ಕೆಲಸ, ಶಾಲಾ-ಕಾಲೇಜುಗಳಿಗೆ ಹೋಗುವವರು ಕೊಡೆ ಹಿಡಿದು, ರೇನ್ ಕೋಟ್ ಧರಿಸಿಕೊಂಡು ಮಳೆಯಲ್ಲೇ ಹೆಜ್ಜೆ ಹಾಕಿದರು. ಎಪಿಎಂಸಿ, ಗಾಂಧಿ ಗಂಜ್‌ನಲ್ಲಿ ವ್ಯಾಪಾರ ವಹಿವಾಟಿನ ಮೇಲೆ ಪರಿಣಾಮ ಬೀರಿತು. ಬೀದಿ ಬದಿ ವ್ಯಾಪಾರಿಗಳು ಸಮಸ್ಯೆ ಎದುರಿಸಿದರು.

ಸತತ ಮಳೆಗೆ ಹಲವು ತಗ್ಗುಪ್ರದೇಶಗಳು, ಗದ್ದೆಗಳಲ್ಲಿ ಅಪಾರ ಮಳೆನೀರು ಸಂಗ್ರಹಗೊಂಡಿದೆ. ನಗರದ ಹಾರೂರಗೇರಿ, ಬೊಮ್ಮಗೊಂಡೇಶ್ವರ ವೃತ್ತ, ಚಿದ್ರಿ ರಸ್ತೆಯಲ್ಲಿ ನೀರು ಸಂಗ್ರಹಗೊಂಡಿದ್ದು, ವಾಹನಗಳು ನಿಧಾನ ಗತಿಯಲ್ಲಿ ಸಂಚರಿಸುತ್ತಿವೆ. ಇನ್ನೂ ಬಹುತೇಕ ಒಳ ರಸ್ತೆಗಳಲ್ಲಿ ಆಳುದ್ದದ ಗುಂಡಿಗಳು ಬಿದ್ದಿದ್ದು, ಜನ ಸಮಸ್ಯೆ ಎದುರಿಸುತ್ತಿದ್ದಾರೆ. ಸತತ ಮಳೆಗೆ ಶುಕ್ರವಾರ ಔರಾದ್ ತಾಲ್ಲೂಕಿನಲ್ಲಿ 4, ಕಮಲನಗರ ತಾಲ್ಲೂಕಿನಲ್ಲಿ ಒಂದು ಮನೆಗೆ ಹಾನಿ ಉಂಟಾಗಿತ್ತು.

'ಜಿಲ್ಲೆಯಾದ್ಯಂತ ಮಳೆ ಸು-ರಿಯುತ್ತಿದೆ. ಕೃಷಿ ಇಲಾಖೆಯವರು ಸಮೀಕ್ಷೆ ನಡೆಸುತ್ತಿದ್ದಾರೆ. ಸಮೀಕ್ಷೆ ಪೂರ್ಣಗೊಂಡ ನಂತರ ಎಲ್ಲೆಲ್ಲಿ ಎಷ್ಟು ಬೆಳೆ ಹಾನಿಯಾಗಿದೆ ಎಂಬುದರ ಕುರಿತು ಮಾಹಿತಿ ಲಭ್ಯವಾಗಲಿದೆ' ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ ತಿಳಿಸಿದ್ದಾರೆ.

## ಕಾರಿನ ಮೇಲೆ ಲಾರಿ ಹರಿದು ಇಬ್ಬರ ಸಾವು



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಜು.26-ಎದುರಿಗೆ ಬಂದ ಬೈಕ್ ಅಪಘಾತ ತಪ್ಪಿಸಲು ಹೋಗಿ ನಿಯಂತ್ರಣ ತಪ್ಪಿದ ಲಾರಿ ಕಾರೊಂದರ ಮೇಲೆ ಹರಿದು ಪಲ್ಟಿಯಾಗಿ ಬೈಕಿಗೂ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಮೃತಪಟ್ಟ ಘಟನೆ ನಗರಕ್ಕೆ ಸಮೀಪದ ಸೀಮಿಕೇರಿ ಬಳಿ ಶನಿವಾರ ನಡೆದಿದೆ.

ಹುಬ್ಬಳ್ಳಿ-ಸೋಲಾಪೂರ ರಾಷ್ಟ್ರೀಯ ಹೆದ್ದಾರಿ 218 ರಲ್ಲಿ ಸೀಮಿಕೇರಿ ಬಳಿ ಮುಂಜಾನೆ ಈ ಘಟನೆ ನಡೆದಿದ್ದು, ಲಾರಿ ಹರಿದ ಪರಿಣಾಮ ಕಾರು ಸಂಪೂರ್ಣವಾಗಿ ಅಪ್ಪಚ್ಚಿಯಾಗಿದ್ದು, ಕಾರಿನಲ್ಲಿದ್ದ ಕೇಸನೂರ ಗ್ರಾಮದ ರಮೇಶ ಹೂಗಾರ(45) ಹಾಗೂ ಸಿಂಧನೂರಿನ ಅಕ್ಬರ್ ಚೇರ್ಮನ್(33) ಮೃತಪಟ್ಟಿದ್ದಾರೆ. ಬೈಕ ಸವಾರನಿಗೂ ಪೆಟ್ಟಾಗಿದ್ದು, ಅತನನ್ನು ಆಸ್ಪತ್ರೆಗೆ ಚಿಕಿತ್ಸೆಗೆ ದಾಖಲಾಗಿಸಲಾಗಿದೆ. ಲಾರಿ ಹುಬ್ಬಳ್ಳಿ ಕಡೆಯಿಂದ ರಸಗೊಬ್ಬರ ತುಂಬಿಕೊಂಡು ವಿಜಯಪುರದ ಕಡೆಗೆ ಹೊರಟಿದ್ದು, ಕಾರು ಮತ್ತು ಬೈಕ್ ಹುಬ್ಬಳ್ಳಿ ಕಡೆಗೆ ಹೊರಟಿದ್ದವು. ಕಲಾದಗಿ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬ್ಯಾಂಕಿನ ರಜತ ಮಹೋತ್ಸವ-ಅಧ್ಯಕ್ಷ ಎಸ್.ಆರ್.ಪಾಟೀಲ ಹೇಳಿಕೆ ಬೀಳಗಿ ಪಟ್ಟಣ ಬ್ಯಾಂಕಿನ ಪ್ರಗತಿಗೆ ಸಿದ್ದೇಶ್ವರ ಶ್ರೀಗಳ ಆಶೀರ್ವಾದವೇ ಶ್ರೀರಕ್ಷೆ



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಜು.26-ನಡೆದಾಡುವ ದೇವರು,ವಿಜಯಪುರಜ್ಞಾನಯೋಗಾಶ್ರಮದ ಪೂಜ್ಯ ಸಿದ್ದೇಶ್ವರ ಮಹಾಸ್ವಾಮಿಗಳ ಅಮೃತ ಹಸ್ತದಿಂದ 1997ರಲ್ಲಿ ಪ್ರಾರಂಭವಾದ ಬೀಳಗಿ ಪಟ್ಟಣ ಸಹಕಾರಿ ಬ್ಯಾಂಕ್ ಪ್ರಸ್ತುತ ರಜತ ಮಹೋತ್ಸವ ಆಚರಿಸುವುದಕ್ಕೆ ಪೂಜ್ಯರ ಆಶೀರ್ವಾದವೇ ಶ್ರೀರಕ್ಷೆಯಾಗಿದೆ ಎಂದು ಬೀಳಗಿ ಪಟ್ಟಣ ಸಹಕಾರಿ ಬ್ಯಾಂಕ್ ಅಧ್ಯಕ್ಷರು, ಮಾಜಿ ಸಚಿವ ಎಸ್.ಆರ್. ಪಾಟೀಲ ಹೇಳಿದರು.

ಜಿ ಲ್ಲೆಯ ಬೀಳಗಿ ತಾಲೂಕಿನ ಬಾಡಗಂಡಿಯ ಎಸ್.ಆರ್.ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಬಾಡಗಂಡಿ ಗ್ರಾಮದ ಎಸ್. ಆರ್.ಪಾಟೀಲ ಸಮೂಹ ಸಂಸ್ಥೆಗಳ ಅಡಿಯಲ್ಲಿ ಬೀಳಗಿ ಪಟ್ಟಣ ಸಹಕಾರಿ ಬ್ಯಾಂಕಿನ ರಜತ ಮಹೋತ್ಸವದ ಅಂಗವಾಗಿ ಬ್ಯಾಂಕಿನ ನವೀಕೃತ ಕಟ್ಟಡ, ಶಾಖಾ ನೂತನ ಕಟ್ಟಡ ಮತ್ತು ಎಸ್. ಆರ್. ಪಾಟೀಲ ಶಿಕ್ಷಣ ಪ್ರತಿಷ್ಠಾನದ ವಿವಿಧ ಕಟ್ಟಡಗಳ ಉದ್ಘಾಟನೆ ಹಾಗೂ ಶಿಲಾನ್ಯಾಸ ಕಾರ್ಯಕ್ರಮದಲ್ಲಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

11 ಲಕ್ಷ ರೂಪಾಯಿ ಶೇರು ಬಂಡವಾಳದೊಂದಿಗೆ ಆರಂಭವಾದ ಬ್ಯಾಂಕು ಇಂದು ಸುಮಾರು 900 ಕೋಟಿ ಬಂಡವಾಳ ಹೊಂದಿದೆ. ಹತ್ತು ಸಾವಿರದಷ್ಟು ಪೂರಕ ಉದ್ಯೋಗಗಳನ್ನು ನಮ್ಮ ಬ್ಯಾಂಕ್ ಒದಗಿಸಿದೆ ಎಂದು ಹೇಳಿ, ಬ್ಯಾಂಕ್ ಸಿಬ್ಬಂದಿಗಳಿಗೆ ಜನೇವರಿ 2026 ರಿಂದ 7ನೇ ವೇತನ ಜಾರಿಗೊಳಿಸುವುದಾಗಿ ಘೋಷಣೆ ಮಾಡಿದರು.

ಕಾರ್ಗಿಲ್ ಯುದ್ಧದಲ್ಲಿ ನಮ್ಮ ದೇಶ ವಿಜಯಸಾಧಿಸಿದ ದಿನವಿದು. ಇಂತಹ ಮಹತ್ವದ ಘಳಿಗೆಯ ಶುಭ ದಿನದಂದೇ ನಮ್ಮ ಬ್ಯಾಂಕಿನ ರಜತ ಮಹೋತ್ಸವ ಕಾರ್ಯಕ್ರಮ ಜರುಗುತ್ತಿರುವುದು ನಮ್ಮ ಭಾಗ್ಯ ಎಂದ ಪಾಟೀಲ, ಶತಮಾನಗಳಷ್ಟು ಹಳೆಯದಾದ ಬ್ಯಾಂಕ್‌ಗಳ ಪೈಪೋಟಿಗಳನ್ನು ಎದುರಿಸಿ ಇವತ್ತು ರಜತ ಮಹೋತ್ಸವ ಆಚರಿಸುವ ಮಟ್ಟಕ್ಕೆ ನಮ್ಮ ಬ್ಯಾಂಕ್ ಬೆಳೆದಿರುವುದು ಸಣ್ಣ ವಿಚಾರವಲ್ಲ, ಇದರ ಹಿಂದೆ ಸಾಕಷ್ಟು ಜನರ ಪರಿಶ್ರಮ ಇದೆ. ಇದಕ್ಕೆ ಅವರೆಲ್ಲರೂ ಅಭಿನಂದನಾರ್ಹರು ಎಂದರು.

ಬೀಳಗಿ ಪಟ್ಟಣ ಸಹಕಾರಿ ಬ್ಯಾಂಕ್ ನಾವು ಕಟ್ಟಿದ ಮೊದಲ ಸಂಸ್ಥೆ ಆಗಿದೆ. ಅಲ್ಲಿಂದ ನಾವು ಹಿಂತಿರುಗಿ ನೋಡಲೇ ಇಲ್ಲ. ಇವತ್ತು ಬ್ಯಾಂಕು 18 ಶಾಖೆಗಳನ್ನು ಹಾಗೂ ಎಲ್‌ಕೆಜಿಯಿಂದ ವೈದ್ಯಕೀಯ ಕಾಲೇಜ್ ಹಂತಕ್ಕೆ ಎಸ್.ಆರ್.ಪಾಟೀಲ ಸಮೂಹ ಸಂಸ್ಥೆಗಳು ಬೃಹತ್ ಮಟ್ಟಕ್ಕೆ ಬೆಳೆಯಲು ಬೀಳಗಿ ಪಟ್ಟಣ ಬ್ಯಾಂಕು ನಮಗೆ ತಳಪಾಯವಾಗಿದೆ ಎಂದು ಸ್ಮರಿಸಿದರು.

ನಮ್ಮ ಸಮೂಹ ಸಂಸ್ಥೆಗಳು ಪಕ್ಷಾತೀತ, ಜಾತ್ಯಾತೀತ, ಧರ್ಮಾತೀತ ಪರಿಕಲ್ಪನೆಯ ಹಾದಿಯಲ್ಲಿ ಕಾರ್ಯನಿರ್ವಹಿಸುತ್ತೀವೆ. ನಮ್ಮ ಸಂಸ್ಥೆಗಳಲ್ಲಿ ಯಾವತ್ತೂ ಕೂಡ ನಾವು ಮೇಲು, ಕೀಳು, ಭೇದಬಾವ ಮಾಡುವುದಿಲ್ಲ. ಮನುಷ್ಯ ಭೂಮಿಗೆ ಬಂದ ಮೇಲೆ ಜನ್ಮ ಕೊಟ್ಟ ತಂದೆ-ತಾಯಿಗಳ, ವಿದ್ಯೆ ಕೊಟ್ಟ ಗುರುಗಳ, ಜನ್ಮ ನೀಡಿದ ಭೂಮಿತಾಯಿ ಕೊನೆಗೆ ನಾವು ಹುಟ್ಟಿದ ಊರು, ಈ ನಾಡಿನ ಋಣ ತೀರಿಸುವ ಕೆಲಸ ಮಾಡಿದಾಗ ಮಾತ್ರವೇ ನಾವು ಮನುಷ್ಯರಾಗಿ ಹುಟ್ಟಿದ್ದಕ್ಕೂ ಸಾರ್ಥಕ ಎಂದು ನಾನು ಭಾವಿಸಿದ್ದೇನೆ. ಈ ಸಮಾಜದ ಅಭಿವೃದ್ಧಿಗೆ ನಾನು ಜೀವಂತ ಇರುವ ತನಕವೂ ನನ್ನ ಕೈಲಾದ ಸೇವೆ ಮಾಡುತ್ತೇನೆ ಎಂದು ಎಸ್.ಆರ್.ಪಾಟೀಲ ಹೇಳಿದರು.

ಗದಗ-ಡಂಬಳದ ಡಾ.ತೋಂಟದ ಸಿದ್ದರಾಮ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಸಚಿವರುಗಳಾದ ಕೆ. ಎಚ್.ಮುನಿಯಪ್ಪ, ಎಚ್.ಕೆ.ಪಾಟೀಲ, ಸತೀಶ ಜಾರಕಿಹೊಳಿ, ಶಿವಾನಂದ ಪಾಟೀಲ, ಆರ್. ಬಿ. ತಿಮ್ಮಾಪೂರ, ಸಂಸದ ಪಿ. ಸಿ. ಗದ್ದಿಗೌಡರ, ಶಾಸಕರಾದ ಎಚ್. ವೈ. ಮೇಟಿ, ಭೀಮಸೇನ ಚಿಮ್ಮನಕಟ್ಟಿ, ವಿಧಾನ ಪರಿಷತ್ತ ಸದಸ್ಯರುಗಳಾದ ಪಿ.ಎಚ್. ಪೂಜಾರ, ಹನಮಂತ ನಿರಾಣಿ, ಬಸವಪ್ರಭು ಸರನಾಡಗೌಡ, ಎಸ್. ಎಸ್.ಹಳ್ಳೂರ, ಎಲ್.ಬಿ.ಕುರ್ತಕೋಟಿ, ಸತ್ಯಪ್ಪ ಮೇಲ್ನಾಡ, ಉಮಾ ಪಾಟೀಲ, ಎಂ. ಎನ್. ಪಾಟೀಲ, ಜಿ. ಎಸ್. ಬನ್ನಟ್ಟಿ, ಬ್ಯಾಂಕಿನ ನಿರ್ದೇಶಕರು ಮತ್ತಿತರಿದ್ದರು.

## ಏಷ್ಯಾ ಕಪ್ ಟೂರ್ನಿಗೆ ದಿನಾಂಕ ಪ್ರಕಟ




ಮಲ್ಲಮ್ಮ ನುಡಿ ವಾರ್ತೆ ನವದೆಹಲಿಇಸ್ಲಾಮಾಬಾದ್:ಜು.26: ಬಹುನಿರೀಕ್ಷಿತ 2025ರ ಟಿ20 ಏಷ್ಯಾ ಕಪ್ ಟೂರ್ನಿಯ ದಿನಾಂಕ ಪ್ರಕಟವಾಗಿದೆ. ಮುಂದಿನ ಸೆಪ್ಟೆಂಬರ್ 9 ರಿಂದ 28ರ ವರೆಗೆ ಯುಎಇಯಲ್ಲಿ ನಡೆಯಲಿದೆ. ಜುಲೈ 24 ರಂದು ನಡೆದ ಏಷ್ಯನ್ ಕ್ರಿಕೆಟ್ ಕೌನ್ಸಿಲ್ ಸಭೆಯಲ್ಲಿ ಟೂರ್ನಿಯ ಸ್ಥಳವನ್ನ ಅಧಿಕೃತಗೊಳಿಸಲಾಯಿತು. ಎಲ್ಲಾ 25 ಸದಸ್ಯ ರಾಷ್ಟಗಳು ಸಭೆಯಲ್ಲಿ ಭಾಗವಹಿಸಿದ್ದವು. ಸಭೆಯ ಬಳಿಕ ಪಾಕಿಸ್ತಾನ ಕ್ರಿಕೆಟ್ ಬೋರ್ಡ್ ಅಧ್ಯಕ್ಷರೂ ಆಗಿರುವ ಏಷ್ಯನ್ ಕ್ರಿಕೆಟ್ ಕೌನ್ಸಿಲ್ ಅಧ್ಯಕ್ಷ ಮೊಹ್ಸಿನ್ ನಖ್ವಿ ಈ ಕುರಿತು ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ. ಈ ಬಾರಿ ಟೂರ್ನಿಯ ಹಕ್ಕು ಬಿಸಿಸಿಐನದ್ದೇ (ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ) ಆಗಿದೆ. ಆದ್ರೆ ಭಾರತ ಮತ್ತು ಪಾಕ್ ನಡುವಿನ ಉದ್ವಿಗ್ನತೆಯಿಂದಾಗಿ 2027ರ ವರೆಗೂ ತಟಸ್ಥ ಸ್ಥಳಗಳಲ್ಲಿ ಟೂರ್ನಿ ನಡೆಸಲು ನಿರ್ಧರಿಸಲಾಗಿದೆ. ಸೆ.9 ರಿಂದ ಸೆ.28ರ ವರೆಗೆ ಟೂರ್ನಿ ನಿಗದಿಯಾಗಿದ್ದು, ಭಾರತ ಮತ್ತು ಪಾಕ್ ನಡುವಿನ ಪಂದ್ಯ ಸೆ.14ರಂದು ನಡೆಯಲಿದೆ. ಈ ಬಾರಿ 8 ತಂಡಗಳು ಇಷ್ಟು ವರ್ಷ 6 ತಂಡಗಳ ನಡುವೆ ನಡೆಯುತ್ತಿದ್ದ ಹಣಾಹಣಿ ಈ ಬಾರಿ 8 ತಂಡಗಳ ನಡುವೆ ನಡೆಯಲಿದೆ. ಭಾರತ ಮತ್ತು ಪಾಕಿಸ್ತಾನ ಒಂದೇ ಗುಂಪಿನಲ್ಲಿ ಇರಲಿವೆ. ಎಲ್ಲವೂ ಅಂದುಕೊಂಡಂತೆ ನಡೆದ-ರೆ ಭಾರತ ಮತ್ತು ಪಾಕಿಸ್ತಾನ ತಂಡಗಳು ಮೂರು ಬಾರಿ ಮುಖಾಮುಖಿಯಾಗುವ ಸಾಧ್ಯತೆಗಳೂ ಇವೆ. ಲೀಗ್ ಹಂತ, ಸೂಪರ್ ಸಿಕ್ಸ್ ಹಾಗೂ ಪ್ರಶಸ್ತಿ ಸುತ್ತಿಗೆ ತಲುಪಿದ್ರೆ ಮೂರು ಬಾರಿ ಮುಖಾಮುಖಿ ಆಗುವ ಸಾಧ್ಯತೆಗಳು ಇವೆ. ಕಳೆದ ಬಾರಿ ಪಾಕ್ ಮತ್ತು ಶ್ರೀಲಂಕಾ ಆತಿಥ್ಯದಲ್ಲಿ ಏಕದಿನ ಮಾದರಿಯಲ್ಲಿ ಏಷ್ಯಾಕಪ್ ಟೂರ್ನಿ ನಡೆದಿತ್ತು. ಭಾರತ ಚಾಂಪಿಯನ್ ಆಗಿ ಹೊರಹೊಮ್ಮಿತ್ತು. ಈ ಬಾರಿ ಟಿ20 ಮಾದರಿಯಲ್ಲಿ ಏಷ್ಯಾಕಪ್ ಟೂರ್ನಿ ನಡೆಯಲಿದೆ. ಇದು 2026ರ ವಿಶ್ವಕಪ್ ಟೂರ್ನಿಗೂ ಅನುಕೂಲವಾಗಲಿದೆ. ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆಯಿಂದಾಗಿ ಏಷ್ಯಾ ಕಪ್ 2025ರ ಭವಿಷ್ಯ ಅತಂತ್ರವಾಗಿತ್ತು. ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಭಾರತದ 'ಆಪರೇಷನ್ ಸಿಂಧೂರ' ಪ್ರತೀಕಾರ ದಾಳಿಯಿಂದಾಗಿ ಎರಡೂ ದೇಶಗಳ ರಾಜತಾಂತ್ರಿಕ ಸಂಬಂಧ ಹದಗೆಟ್ಟಿತು. ಇದ-ರಿಂದಾಗಿ ಭಾರತವು ಟೂರ್ನಿಯಲ್ಲಿ ಭಾಗವಹಿಸುವುದಿಲ್ಲ ಎಂದು ವರದಿಯಾಗಿತ್ತು. ಆದ್ರೆ ಬಿಸಿಸಿಐ ಮತ್ತು ಎಸಿಸಿ ಪಾಲಿಗೆ ಚಿನ್ನದ ಮೊಟ್ಟೆಯಾಗಿರುವ ಭಾರತ-ಪಾಕ್ ಪಂದ್ಯ ನಡೆಸಲು ಎಸಿಸಿ ಮನವೊಲಿಸಿದೆ.

## ಒಂದನೇ ಪುಟದಿಂದ

# ಕೊರತೆ: ಸಚಿವ ಚಲುವರಾಯಸ್ವಾಮಿ

ನ್ಯಾನೋ ಯೂರಿಯಾ ಬಳಸಲು ಸಹಾ ಹೇಳಿದ್ದೇವೆ. ಅವರು ಸಹ ಹೋಗಿ ನಡ್ಡಾ ಅವರ ಜೊತೆ ಕುಳಿತು ಎಷ್ಟು ಸಾಧ್ಯವೋ ಅಷ್ಟು ಬೇಗ ಸಪ್ಲೈ ಕೊಡಿ ಅಂತ ಹೇಳೋದು ಬಿಟ್ಟು ಟೀಕೆ ಟಿಪ್ಪಣಿ ಮಾಡಿದರೆ ಹೇಗೆ? ಅಂತ ಪ್ರಶ್ನಿಸಿದರು.

ನನಗೂ ರಾಜಕೀಯವಾಗಿ 35 ವರ್ಷ ಆಗಿದೆ. ನಾನು ಟೀಕೆ ಮಾಡಬಹುದು, ಆದ್ರೆ ನನ್ನದು ರೈತರ ಇಲಾಖೆ ಟೀಕೆ ಮುಖ್ಯ ಅಲ್ಲ ರೈತರ ಸಮಸ್ಯೆ ಬಗೆಹರಿಸಬೇಕು. ರೈತರು ಆತಂಕ ಪಡಬೇಕಿಲ್ಲ. ಯಾವ್ಯಾವಾಗ ಏನು ಬೇಕೋ ಅದನ್ನ ತಲುಪಿಸುತ್ತೇವೆ. ಎಲ್ಲರೂ ಸಮಾಧಾನದಿಂದ ಇರಿ, 2 ದಿನ ಬರುವುದು ತಡವಾದ್ರೆ 3ನೇ ದಿನ 4ನೇ ದಿನ ತರಿಸಿಕೊಡ್ತೇವೆ. ಜೊತೆಗೆ ನ್ಯಾನೋ ಯೂರಿಯಾ ಸಹ ಇಳುವರಿಗೆ ಒಳ್ಳೆಯದು ರೈತರು ಯಾವುದೆ ಘರ್ಷಣೆ ಮಾಡಿಕೊಳ್ಳುವುದು ಬೇಡ ಅಂತ ಸಲಹೆ ನೀಡಿದರು.

# ಕೆಲಸ ಮಾಡಿದ್ದೇವೆ:ಸಿಎಂ

ಅಭಿವೃದ್ಧಿಗೆ ನಾಲ್ವಡಿ ಕೃಷ್ಣರಾಜ ಒಡೆಯರಿಗಿಂತ ಸಿದ್ದರಾಮಯ್ಯ ಕೊಡುಗೆ ಜಾಸ್ತಿ ಇದೆ ಎಂದು ಹೇಳಿಕೆ ನೀಡಿದ್ದರು. ಈ ಹೇಳಿಕೆ ವ್ಯಾಪಕ ಟೀಕೆಗೆ ಗುರಿಯಾಗಿದೆ. ಯತೀಂದ್ರ ವಿರುದ್ಧ ವಿಪಕ್ಷಗಳ ನಾಯಕರು ಕಿಡಿ–ಕಾರಿದ್ದಾರೆ.

ಯತೀಂದ್ರ ಹೇಳಿಕೆಗೆ ಪ್ರತಿಕ್ರಿಯಿಸಿದ್ದ ಮಾಜಿ ಸಂಸದ ಪ್ರತಾಪ್ ಸಿಂಹ ಅವರು, ಸಿದ್ದರಾಮಯ್ಯ ಅವರು ದೇವರಾಜ ಅರಸುಗಿಂತ ದೊಡ್ಡವರು ಅಂತ ಹೇಳ್ತಿದ್ದರು. ಈಗ ನಾಲ್ವಡಿ ಕೃಷ್ಣರಾಜ ಒಡೆಯರ್ ಅವ್ರಿಗಿಂತ ದೊಡ್ಡವರಾಗಿದ್ದಾರೆ. 10 ಸಿಎಂ ಆಗಿಬಿಟ್ರೆ ನಾಡದೇವತೆ ಚಾಮುಂಡಿಗಿಂತ ದೊಡ್ಡವರಾಗಿಬಿಡ್ತಾರೆ ಅಂತ ಕಿಡಿಕಾರಿದ್ದಾರೆ.

# ಗ್ರಾ. ಪಂ. ಬಾಪೂಜಿ ಸೇವಾ ಕೇಂದ್ರಗಳಲ್ಲಿ ಶೀಘ್ರ ಇನ್ನೂ 208 ಸೇವೆಗಳು ಲಭ್ಯ: ಖರ್ಗೆ



ಮಲ್ಲಮ್ಮ ನುಡಿ ವಾರ್ತೆ
ರಾಜ್ಯದಾದ್ಯಂತ ಗ್ರಾಮ ಪಂಚಾಯತಿಗಳ ಬಾಪೂಜಿ ಸೇವಾ ಕೇಂದ್ರಗಳಲ್ಲಿ ಈಗ ನೀಡಲಾಗುತ್ತಿರುವ 81 ಸೇವೆಗಳ ಜೊತೆ ಇನ್ನೂ 208 ಸೇವೆಗಳನ್ನು ಬಾಪೂಜಿ ಸೇವಾ ಕೇಂದ್ರಗಳ ಸೇವಾಸಿಂಧು ಪೋರ್ಟಲ್ ಮೂಲಕ ಶೀಘ್ರದಲ್ಲೇ ಆರಂಭಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. 2024–25 ನೇ ಸಾಲಿನ ಆಯವ್ಯಯದಲ್ಲಿ ಸೇವಾ ಸಿಂಧು ಪೋರ್ಟಲ್ ಮೂಲಕ ಒದಗಿಸಲಾಗುತ್ತಿರುವ ಎಲ್ಲಾ ಸೇವೆಗಳನ್ನು ಬಾಪೂಜಿ ಸೇವಾ ಕೇಂದ್ರಗಳಲ್ಲೂ ಪ್ರಾರಂಭಿಸಲಾಗುವುದು ಎಂದು ಘೋಷಿಸಲಾಗಿತ್ತು, ಅದರಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ವಿದ್ಯುನ್ಮಾನ ನಾಗರಿಕ ಸೇವಾ ವಿತರಣಾ ನಿರ್ದೇಶನಾಲಯದೊಂದಿಗೆ ಒಪ್ಪಂದವನ್ನು ಮಾಡಿಕೊಂಡಿದ್ದು, ಗ್ರಾಮೀಣ ಭಾಗದ ನಾಗರಿಕರಿಗೆ ಅನುಕೂಲವಾಗುವಂತೆ ಮೊದಲ ಹಂತದಲ್ಲಿ 208 ಸೇವೆಗಳನ್ನು ಬಳಸುವ ಸೌಲಭ್ಯವನ್ನು ನೀಡಲಾಗುವುದು ಎಂದು ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದಾರೆ. ಸೇವಾ ಸಿಂಧು ಪೋರ್ಟಲ್ ಮೂಲಕ ಒದಗಿಸಲಾಗುತ್ತಿರುವ 46 ವಿವಿಧ ಇಲಾಖೆಗಳ 800ಕ್ಕಿಂತಲೂ ಹೆಚ್ಚು ಸೇವೆಗಳಲ್ಲಿ ಗ್ರಾಮೀಣ ಜನತೆಗೆ ಉಪಯೋಗವಾಗುವಂತಹ ಸೇವೆಗಳನ್ನು ಗ್ರಾಮಪಂಚಾಯತಿಗಳ ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಒದಗಿಸಲಿರುವುದರಿಂದ ಗ್ರಾಮೀಣ ಜನತೆಗೆ ಒಂದೇ ಸೂರಿನಡಿ ಎಲ್ಲಾ ಇಲಾಖೆಗಳ ಸೇವೆಗಳನ್ನು ನೀಡಿದಂತಾಗುತ್ತದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ–ಆಡಳಿತ) ಆಧೀನದಲ್ಲಿ ಬರುವ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಕೇಂದ್ರಗಳ ಮೂಲಕ ಸೇವಾ ಸಿಂಧು ಪೋರ್ಟಲ್ ನಲ್ಲಿ 800 ಕ್ಕಿಂತ ಹೆಚ್ಚು ಸೇವೆಗಳನ್ನು ಈಗ ಒದಗಿಸಲಾಗುತ್ತಿದೆ. ಗ್ರಾಮ ಪಂಚಾಯತಿಗಳ ಬಾಪೂಜಿ ಸೇವಾ ಕೇಂದ್ರಗಳ ಮೂಲಕ ವಿವಿಧ ಇಲಾಖೆಗಳ ಸುಮಾರು 300 ಸೇವೆಗಳನ್ನು ಒದಗಿಸಿದಂತಾಗುವುದು ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

# ಹಣ ಮತ್ತು ಬಂಗಾರ ಕದ್ದು ಪುತ್ರಿ ನಾಪತ್ತೆ

ಮಲ್ಲಮ್ಮ ನುಡಿ ವಾರ್ತೆ
ಕಲಬುರ್ಗಿ, ಜು.26– ಮನೆಯಲ್ಲಿನ ಹಣ ಮತ್ತು ಬಂಗಾರವನ್ನು ತೆಗೆದು–ಕೊಂಡು ಯುವತಿಯೊಬ್ಬಳು ನಾಪತ್ತೆಯಾದ ಘಟನೆ ನಗರದ ಮಹೆಬೂಬ್ ನಗರದ ಸೀರಾಜ್ ಮೆಡಿಕಲ್ ಹತ್ತಿರದ ಮನೆಯಲ್ಲಿ ವರದಿಯಾಗಿದೆ. ಶಿಕ್ಷಕಿ ಶ್ರೀಮತಿ ಖೈರುನಿಸಾ ಬೇಗಂ ಗಂಡ ಹಸನ್ ಮಿಯಾ ಅವರ ಎರಡನೇ ಪುತ್ರಿ ಫಲಕನಾಜ್ ತಂದೆ ಹಸನಮೀಯಾ ಎಂಬ ಯುವತಿಯೇ ಕಾಣೆಯಾಗಿದ್ದಾಳೆ. 49 ಗ್ರಾಮ್ ಬಂಗಾರ ಹಾಗೂ ಕೂಡಿಟ್ಟ 4 ಲಕ್ಷ ರೂ.ಗಳನ್ನು ತೆ–ಗೆದುಕೊಂಡು ಹೋಗಿರುವ ಪುತ್ರಿ ಕಾಲೇಜಿಗೂ ಸಹ ಹೋಗಿಲ್ಲ. ಆಕೆಯನ್ನು ಎಲ್ಲೆಡೆ ಹುಡುಕಾಡಿದರೂ ಪತ್ತೆಯಾಗಿಲ್ಲ. ಪತ್ತೆ ಹಚ್ಚಿ ಕೊಡಬೇಕು ಎಂದು ಯುವತಿಯ ತಾಯಿ ದೂರು ಸಲ್ಲಿಸಿದ್ದು, ರೋಜಾ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ನೌಕರರ ಬೇಡಿಕೆ ಈಡೇರಿಕೆಗೆ ಪ್ರಯತ್ನ:ಚಂದ್ರಶೇಖರ ಬನ್ನಾಳೆ




ಮಲ್ಲಮ್ಮ ನುಡಿ ವಾರ್ತೆ
ಭಾಲ್ಕಿ:ಜು.26: ತಾಲೂಕಿನ ವಿವಿಧ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರಕಾರಿ ನೌಕರರ ಬೇಡಿಕೆಗಳನ್ನು ಈಡೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತಿದೆ ಎಂದು ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ಹೇಳಿದರು. ಪಟ್ಟಣದ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ತಾಲೂಕು ಸರಕಾರಿ ನೌಕರರ ಸಂಘದ ವತಿಯಿಂದ ಶನಿವಾರ ಆಯೋಜಿಸಿದ್ದ ಸರ್ವಸದಸ್ಯರ ವಾರ್ಷಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನೌಕರರ ಶ್ರೇಯೋಭೀವೃದ್ದಿಗಾಗಿ ಸರಕಾರಿ ನೌಕರರ ಸಂಘ ಸದಾಕಾಲ ಸ್ಪಂದಿಸುತ್ತಿದೆ. ಸರಕಾರದ ಜತೆಗೆ ಸೌಹಾರ್ದಯುತವಾದ ಸಂಬಂಧತವನ್ನು ಇಟ್ಟುಕೊಂಡು ನೌಕರರ ಸಮಸ್ಯೆಗಳನ್ನು ಬಗೆ ಹರಿಸುವ ಪ್ರಯತ್ನ ಮಾಡಲಾಗುತ್ತಿದೆ. ಸರಕಾರದ ಕಾರ್ಯ ಯೋಜನೆಗಳನ್ನು ನೌಕರರಿಗೆ ತಲುಪಿಸುವ ಕೆಲಸ ಮಾಡಲಾಗುತ್ತಿದೆ. ನೌಕರರ ಹಿತ ಕಾಪಾಡಲು ಸಂಘದ ಪದಾಧಿಕಾರಿಗಳು ಶ್ರಮಿಸುತ್ತಿದ್ದಾರೆ. ಸರಕಾರಿ ನೌಕರರ ಸಂಘದ ಮನವಿ ಮೇರೆಗೆ ಸರಕಾರ ನೂತನ ವೇತನ ಶ್ರೇಣಿಯನ್ನು ಜಾರಿಗೆ ತಂದಿದೆ. ಕೇಂದ್ರದ ಸಂಘದ ನಿರ್ದೇಶನದಂತೆ ತಾಲೂಕಿನಲ್ಲಿ ಸರಕಾರಿ ನೌಕರರು ಕೈಗೊಂಡ ಎಲ್ಲ ಹೋರಾಟಗಳನ್ನು ಬೆಂಬಲಿಸಿ ಬೇಡಿಕೆ ಈಡೇರಿಕೆಗೆ ಪ್ರಯತ್ನಿಸಲಾಗಿದೆ. ಸರಕಾರಿ ನೌಕರರ ಕ್ರೀಡಾಕೂಟದಲ್ಲಿ ವಿಜೇತರಿಗೆ ಸನ್ಮಾನ ಸೇರಿ ಮುಂತಾದ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಂಡು ನೌಕರರ ಸ್ನೇಹಿಯಾಗಿ ಕೆಲಸ ಮಾಡುತ್ತಿದ್ದೇವೆ. ನೌಕರರ ಏನೇ ಸಮಸ್ಯೆ, ಬೇಡಿಕೆ ಇದ್ದರೂ ಸಂಘ ಅವರ ಪರವಾಗಿ ನಿಲ್ಲಲಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ತಾಲೂಕು ಸರಕಾರಿ ನೌಕರರ ಸಂಘದ ಕಾರ್ಯದರ್ಶಿ ರಾಜಪ್ಪ ಪಾಟೀಲ್, ಗೌರವಾಧ್ಯಕ್ಷ ಶಮಿ ಪಟೇಲ್, ಖಜಾಂಚಿ ಸುನಿಲ ಬಿರಾದಾರ್, ಹಿರಿಯ ಉಪಾಧ್ಯಕ್ಷ ಶಿವಕುಮಾರ ಫುಲಾರೆ ಸೇರಿದಂತೆ ಹಲವರು ಇದ್ದರು.

# 1999ರ ಇತಿಹಾಸ ಪುನರ್ ನಿರ್ಮಾಣ



ಮಲ್ಲಮ್ಮ ನುಡಿ ವಾರ್ತೆ
ಭಾಲ್ಕಿ:ಜು.26: ತಾಲೂಕಿನಲ್ಲಿ 1999ರ ವಿಧಾನ ಸಭೆಯ ಚುನಾವಣೆಯಲ್ಲಿ ಸೃಷ್ಟಿಸಿದ ಇತಿಹಾಸ ಮುಂಬರುವ ವಿಧಾನ ಸಭೆಯ ಚುನಾವಣೆಯಲ್ಲಿ ಮತ್ತೆ ಮರುಕಳಿಸಲಿದೆ ಎಂದು ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಶಿವರಾಜ ಗಂದಗೆ ವಿಶ್ವಾಸ ವ್ಯಕ್ತ ಪಡಿಸಿದ್ದರು.

ಪಟ್ಟಣದ ಬಾಲಾಜಿ(ರಾಮ) ಮಂದಿರದ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ ಪ್ರತಿಕಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿರು.

ತಾಲೂಕಿನಲ್ಲಿ ಕಳೆದ ಎರಡು ದಶಕಗಳಿಂದ ಅರಾಜಕತೆ ಸೃಷ್ಟಿಯಾಗಿದೆ. ಜನರು ಭಯದ ನಡುವೆ ಬದುಕು ಸಾಗಿಸುತ್ತಿದ್ದಾರೆ. ರೈತರು, ಬಡ ಜನರು ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಹೇಳಿಕೊಳ್ಳುವಂತಹ ಅಭಿವೃದ್ಧಿ ಕೆಲಸಗಳು ನಡೆಯುತ್ತಿಲ್ಲ. ಸೇಡಿನ ರಾಜಕಾರಣ ಮಾಡಲಾಗುತ್ತಿದೆ ಎಂದು ದೂರಿದರು. ಕ್ಷೇತ್ರದ ಜನತೆ ವ್ಯವಸ್ಥೆ ವಿರುದ್ಧ ಬೇಸತ್ತಿದ್ದು ಬದಲಾವಣೆಗೆ ತುದಿಗಾಗಲ್ಲಿ ನಿಂತಿದ್ದಾರೆ. 1999ರ ವಿಧಾನ ಸಭೆಯ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸಿ ಇತಿಹಾಸ ರಚಿಸಿತು. ಆ ದಿನಗಳು ಮುಂದಿನ ವಿಧಾನ ಸಭೆಯ ಚುನಾವಣೆಯಲ್ಲಿ ಪನರ್ ನಿರ್ಮಾಣ ಆಗಲಿದೆ ಎಂದರು. ಡಿ.ಕೆ.ಸಿದ್ರಾಮ ಅವರು ಪತ್ರಿಕಾರಂಗದಿಂದ ಗುರುತಿಸಿಕೊಂಡು ರಾಜಕೀಯ ರಂಗ ಪ್ರವೇಶಿಸಿದ್ದಾರೆ. ಜಿಪಂ ಸದಸ್ಯರಾಗಿ, ವಿಧಾನಸಭೆಯ ಚುನಾವಣೆಯಲ್ಲಿ ಎರಡು ಬಾರಿ ಸ್ಪರ್ದಿಸಿ ಕಡಿಮೆ ಅಂತರದಿಂದ ಸೋಲು ಕಂಡಿದ್ದಾರೆ.

ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಹೆಚ್ಚಿನ ಜನ ಸೇರಿದ್ದು ನೋಡಿದರೆ ಮುಂದಿನ ಕ್ರಾಂತಿಗೆ ಮುನ್ನುಡಿ ಬರೆದಂತಿದೆ ಎಂದು ತಿಳಿಸಿದರು.

ಯುವ ಮುಖಂಡ ಚೆನ್ನಬಸವಣ್ಣ ಬಳತೆ ಮಾತನಾಡಿ, ಸಮಾಜವನ್ನು ಸರಿಯಾದ ದಿಕ್ಕಿನಲ್ಲಿ ಕೊಂಡೊಯ್ಯುವ ಶಕ್ತಿ ಮಾಧ್ಯಮಕ್ಕಿದೆ. ಮುದ್ರಣ ಮಾಧ್ಯಮ ಇಂದಿಗೂ ವಿಶ್ವಾರ್ಹತೆ ಉಳಿಸಿ ಕೊಂಡಿದೆ ಎಂದು ತಿಳಿಸಿದರು. ಹಿಂದುಪರಸಂಘಟನೆಯ ಅಧ್ಯಕ್ಷ ಶಿವು ಲೋಖಂಡೆ ಮಾತನಾಡಿ, ಪತ್ರಕರ್ತರು ಬರುವಣಿಗೆ ಮೂಲಕ ಸತ್ಯವನ್ನು ಸಮಾಜಕ್ಕೆ ತೋರಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ತಿಳಿಸಿದರು. ಹಿರಿಯ ಮುಖಂಡ ಕಿಶನರಾವ ಪಾಟೀಲ್ ಇಂಚೂರಕರ್ ಮಾತನಾಡಿ, ತಾಲೂಕಿನಲ್ಲಿ ಕಳ್ಳತನ, ಗುಂಡಾ ವರ್ತನೆ ಹೆಚ್ಚುತ್ತಿದೆ. ಸಕ್ಕರೆ ಕಾರಖಾನೆ ಬಂದ್ ಮಾಡಿಸಿ ರೈತರನ್ನು ಬೀದಿಗೆ ತಳ್ಳುವ ಪ್ರಯತ್ನ ನಡೆಯುತ್ತಿದೆ. ಸಹಕಾರ ಕ್ಷೇತ್ರ ದುರುಪಯೋಗ ಮಾಡಿಕೊಳ್ಳಲಾಗುತ್ತಿದೆ ಎಂದು ದೂರಿದರು. ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಡಿ.ಕೆ.ಗಣಪತಿ ಮಾತನಾಡಿ, ಪತ್ರಕರ್ತರು ಅನ್ಯಾಯದ ವಿರುದ್ಧ ಧ್ವನಿಯೆತ್ತುವ ಕೆಲಸ ಮಾಡಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಪಂ ಮಾಜಿ ಸದಸ್ಯ ವೆಂಕಟರಾವ ಬಿರಾದಾರ್, ಪ್ರಮುಖರಾದ ಜನಾರ್ಧನರಾವ ಬಿರಾದಾರ್, ಪ್ರತಾಪರಾವ ಪಾಟೀಲ್, ಶಿವಕುಮಾರ ಸಜ್ಜನಶೆಟ್ಟಿ, ಶಶೆರಾವ ಪಾಟೀಲ್, ಸಂಗಮೇಶ ಗಾಮಾ, ಪ್ರವೀಣ ಸಾವಳೆ, ಪುಂಡಲಿಕರಾವ ಪಾಟೀಲ್, ಶಿವಕುಮಾರ ಕೇರೂರೆ, ಕೈಲಾಸ ಪಾಟೀಲ್, ಜಿಲ್ಲಾ ಪತ್ರಕರ್ತರ ಸಂಘದ ಉಪಾಧ್ಯಕ್ಷ ನಾಗಶೆಟ್ಟಿ ಧರ್ಮಪೂರೆ, ತಾಲೂಕು ಅಧ್ಯಕ್ಷ ಜಯರಾಜ ದಾಬಶೆಟ್ಟೆ, ಪ್ರಧಾನ ಕಾರ್ಯದರ್ಶಿ ಗಣಪತಿ ಬೋಚರೆ ಸೇರಿದಂತೆ ಹಲವರು ಇದ್ದರು

ಶರದ ದುರ್ಗಾಳೆ ಸ್ವಾಗತಿಸಿದರು. ದೀಪಕ ಠಮಕೆ ನಿರೂಪಿಸಿದರು. ಜಯರಾಜ ಕೊಳ್ಳಾ ವಂದಿಸಿದರು.

ಸನ್ಮಾನ :
ಇದೇವೇಳೆ ತಾಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಮುದ್ರಣ ಮಾಧ್ಯಮ ಮತ್ತು ಸಾಮಾಜಿಕ ಜಾಲ ತಾಣದ ಪ್ರತಿನಿಧಿಗಳನ್ನು ಸನ್ಮಾನಿಸಲಾಯಿತು. ಡಿ.ಕೆ.ಸಿದ್ರಾಮ ಅಭಿಮಾನಿ ಬಳಗದ ಪರವಾಗಿ ಡಿ.ಕೆ.ಸಿದ್ರಾಮ ಸೇರಿ ಗಣ್ಯರು ಪತ್ರಕರ್ತರನ್ನು ಸನ್ಮಾನಿಸಿ, ಗೌರವಿಸಿದರು.

### ಹೆದರುವ ವ್ಯಕ್ತಿ ನಾನಲ್ಲ

ಮಾಡದ ತಪ್ಪಿಗೆ ಜೈಲು ಶಿಕ್ಷೆ ಅನುಭವಿಸಿದ್ದೇನೆ. ಕಾಣದ ಕೈಗಳು ಏನೇ ಅಗ್ನಿ ಪರೀಕ್ಷೆಯೊಡ್ಡಿದ್ದರೂ ಯಾವುದೇ ಕಾರಣಕ್ಕೂ ಹೆದರುವುದಿಲ್ಲ ಎಂದು ನಾರಂಜಾ ಸಹಕಾರ ಸಕ್ಕರೆ ಕಾರಖಾನೆ ಅಧ್ಯಕ್ಷ ಡಿ.ಕೆ.ಸಿದ್ರಾಮ ಹೇಳಿದರು.

ಪತ್ರಕರ್ತನಾಗಿ ರಾಜಕೀಯ ಕ್ಷೇತ್ರದಲ್ಲಿ ಗುರುತಿಸಿಕೊಂಡು ಜಿಲ್ಲಾ ಪಂಚಾಯತಿ ಸದಸ್ಯನಾಗಿ ಗಡಿ ಭಾಗದ ಸಾಯಿಗಾಂವ ಸೇತುವೆ ನಿರ್ಮಾಣಕ್ಕಾಗಿ ಹೋರಾಟ ನಡೆಸಿದರ ಪರಿಣಾಮ ಸರಕಾರ ಸೇತುವೆ ನಿರ್ಮಿಸಿದೆ.

ನಾರಂಜಾ ಸಕ್ಕರೆ ಕಾರಖಾನೆ ಅಧ್ಯಕ್ಷನಾಗಿ ಸಕ್ಕರೆ ಇಳುವರಿ ಹೆಚ್ಚಿಸುವುದರ ಜತೆಗೆ ರೈತರಿಗೆ ಸಕಾಲಕ್ಕೆ ಹಣ ಪಾವತಿಸಿದ್ದೇವೆ.

ಆದರೆ ಕಾರಖಾನೆ ಅಭಿವೃದ್ಧಿ, ನನ್ನ ಏಳಿಗೆ ಸಹಿಸದೇ ಅಧಿಕಾರ ದುರುಪಯೋಗ ಮಾಡಿಕೊಂಡು ವಿನಾಕಾರಣ ನನ್ನನ್ನು ಜೈಲು ಶಿಕ್ಷೆಗೆ ಒಳಪಡಿಸಲಾಗಿದೆ. ನಾನು ಯಾವುದೇ ಕಾರಣಕ್ಕೂ ಕುಗ್ಗುವುದಿಲ್ಲ.

ಬಂಡೆಗಲ್ಲಿನಲ್ಲಿಂತೆ ಗಟ್ಟಿಯಾಗಿ ಕೊನೆಯುಸಿರುವರೆಗೂ ಜನರ ಸೇವೆಯನ್ನು ಮುಂದುವರೆಸುತ್ತೇನೆ.

ವಿಧಾನಸಭೆಯ ಚುನಾವಣೆಯಲ್ಲಿ ಎರಡು ಬಾರಿ ಸ್ಪರ್ಧಿಸಿ ಸ್ವಲ್ಪದರಲ್ಲೇ ಸೋಲು ಕಂಡಿದ್ದೇನೆ. ಅಧಿಕಾರ ಶಾಶ್ವತವಲ್ಲ, ಜನರ ಸೇವೆಯೇ ನನಗೆ ಮುಖ್ಯ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಅಭಿವೃದ್ಧಿ ಕೆಲಸಗಳು ನಿಂತುಹೋಗಿವೆ. ಬಿಎಸ್ ಎಸ್ ಕೆ ಕಾರಖಾನೆ ಬಂದ್ ಮಾಡಲಾಗಿದೆ. ಉಳಿದ ಸಕ್ಕರೆ ಕಾರಖಾನೆಗಳಿಗೂ ಕಿರುಕುಳ ನೀಡಲಾಗುತ್ತಿದೆ. ಬ್ಯಾಂಕ್ ನಿಂದ ರೈತರಿಗೆ ಸಾಲ ನೀಡುತ್ತಿಲ್ಲ. ಸೇಡಿನ ರಾಜಕಾರಣದ ಮೂಲಕ ಜನರನ್ನು ಬೆದರಿಸುವ ತಂತ್ರ ನಡೆಯುತ್ತಿದೆ.

**–ಡಿ.ಕೆ.ಸಿದ್ರಾಮ ಅಧ್ಯಕ್ಷರು ನಾರಂಜಾ ಸಕ್ಕರೆ ಕಾರಖಾನೆ ಬೀದರ್**

# ಬಸವಣ್ಣ ವೀರಶೈವ ಧರ್ಮ ಸ್ವೀಕರಿಸಲಿಲ್ಲ:ಸಿದ್ಧರಾಮೇಶ್ವರ ಸ್ವಾಮೀಜಿ




ಮಲ್ಲಮ್ಮ ನುಡಿ ವಾರ್ತೆ
ಬೀದರ. ಜು. 26 : ಬಸವಣ್ಣ ವೀರಶೈವಧರ್ಮ ಸ್ವೀಕರಿಸಿರಲಿಲ್ಲ. ಪಂಚಾಚಾರ್ಯರ ತತ್ವಗಳಿಗೆ ಮಾರುಹೋಗಿ ವೀರಶೈವಧರ್ಮ ಸ್ವೀಕರಿಸಿದ್ದರೆಂಬ ರಂಭಾಪುರಿ ಶ್ರೀಗಳ ಹೇಳಿಕೆ ಶುದ್ಧ ಸುಳ್ಳು ಹಾಗೂ ಖಂಡನೀಯ ಎಂದು ಬಸವಕಲ್ಯಾಣದ ಬಸವಧರ್ಮ ಪೀಠದ ಸಿದ್ಧರಾಮೇಶ್ವರ ಸ್ವಾಮೀಜಿ ಹೇಳಿದರು.

ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ವತಿಯಿಂದ ಇಲ್ಲಿಯ ಗಾಂಧಿಗಂಜನ ಬಸವೇಶ್ವರ ದೇವಸ್ಥಾನದಲ್ಲಿ ಗುರುವಾರ ಆಯೋಜಿಸಿದ್ದ ಮಾಸಿಕ ವಚನ ಮಂಟಪ ಹಾಗೂ ಬಸವ ಸಂಸ್ಕೃತಿ–ವಿಶ್ವಶೇಷ್ಠ ಸಂಸ್ಕೃತಿ ಕುರಿತ ಚಿಂತನ–ಮಂಥನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದಾವಣಗೆರೆಯಲ್ಲಿ ನಡೆದ ವೀರಶೈವ ಪೀಠಾಚಾರ್ಯರು ಹಾಗೂ ಶಿವಾಚಾರ್ಯರ ಶೃಂಗದಲ್ಲಿ ಈ ಕುರಿತು ಹೇಳಿಕೆ ಕೊಟ್ಟಿರುವ ರಂಭಾಪುರಿ ಶ್ರೀಗಳು 12ನೇ ಶತಮಾನದಲ್ಲಿ ಬಸವಣ್ಣನವರು ವೀರಶೈವ ಧರ್ಮ ಸ್ವೀಕರಿಸಿದ್ದನ್ನು ನೋಡಿದ್ದಾರೆಯೇ? ಇದು ಜನರ ದಿಕ್ಕು ತಪ್ಪಿಸುವ ಹೇಳಿಕೆ ಎಂದು ತಿಳಿಸಿದರು.

ಬಸವಣ್ಣ ಅಡ್ಡಪಲ್ಲಕ್ಕಿಯಂತಹ ಕೊಳಕು ಆಚರಣೆಯ ಧರ್ಮವನ್ನು ಯಾವತ್ತೂ ಸ್ವೀಕರಿಸಿರಲಿಲ್ಲ. ಅನಿಷ್ಟ, ದುಷ್ಟ ಆಚರಣೆಗಳ ನಿರ್ಮೂಲನೆಗಾಗಿಯೇ ವೈಜ್ಞಾನಿಕ, ಸತ್ಯ, ಸರಳ, ಪ್ರಗತಿಪರ ಲಿಂಗಾಯತ ಧರ್ಮವನ್ನು ಕೊಟ್ಟರು ಎಂದು ಹೇಳಿದರು.

ಪಂಚಪೀಠಗಳು ಬಸವ ತತ್ವ ಪ್ರಚಾರ ಮಾಡುತ್ತಿವೆ ಎಂಬುದು ಅಪ್ಪಟ ಸುಳ್ಳು. ಬದಲಾಗಿ, ಪ್ರಚಾರದ ಹೆಸರಲ್ಲಿ ಬಸವಣ್ಣ, ಬಸವ ತತ್ವದ ಅಪಪ್ರಚಾರ ಮಾಡುತ್ತಿವೆ. ಶಿಷ್ಯರ ತಲೆ ಮೇಲೆ ಹಾಗೂ ಇಷ್ಟಲಿಂಗದ ಮೇಲೆ ಅಂಗಾಲು ಇಟ್ಟು, ವಿಕೃತವಾಗಿ ಪಾದಪೂಜೆ ಮಾಡುವುದು, ಆಶೀರ್ವಾದ ನೀಡುವುದು, ಬಹುದೇವೋಪಾದನೆ, ಅಡ್ಡಪಲ್ಲಕ್ಕಿ, ಪಂಚಾಂಗ ನೋಡುವುದು, ವಾಸ್ತು ಜ್ಯೋತಿಷ್ಯದ ನೆಪದಲ್ಲಿ ಮನೆ ಕೆಡುವುದು ಇವೆಲ್ಲ ಬಸವಣ್ಣನವರ ತತ್ವಗಳೇ ಎಂದು ಪ್ರಶ್ನಿಸಿದರು.

ಅವರವರ ಅನುಯಾಯಿಗಳಿಗೆ ಅವರವರ ಆಚಾರ್ಯರೇ ಶ್ರೇಷ್ಠ. ಪಂಚ ಪೀಠಗಳಿಗೆ ಹೊರತಾದ ಬಸವ ಧರ್ಮದ, ತತ್ವದ ಯಾವುದೇ ಮಠಗಳು ಹಾಗೂ ಬಸವಾನುಯಾಯಿಗಳು, ಪಂಚಾಚಾರ್ಯರು, ಶೈವ ಪ್ರಣೀತ ವೀರಶೈವ ಮತಕ್ಕೆ ಮಹತ್ವ ಹಾಗೂ ಪಾವಿತ್ರ್ಯ ಕೊಡುವ ಅಗತ್ಯವೇ ಇಲ್ಲ ಎಂದು ಹೇಳಿದರು. ಬಸವ ತತ್ವಪಾಲನೆ ಮಾಡುತ್ತಿರುವ ಕೆಲ ಮಠಾಧೀಶರು ಸಮುದಾಯದಲ್ಲಿ ಕಂದಕ ಸೃಷ್ಟಿಸುತ್ತಿದ್ದಾರೆ ಎನ್ನುವುದಕ್ಕೆ ಪ್ರತಿಕ್ರಿಯಿಸಿದ ಅವರು, ಬಸವ ತತ್ವ ಪಾಲನೆ ಮಾಡುವ ಯಾವುದೇ ಮಠವಾಗಲಿ, ಪಂಚಾಚಾರ್ಯ ಶೈವ ಮತದ ಪೀಠಗಳಿಂದ ಸುರಕ್ಷಿತ ಅಂತರ ಕಾಯ್ದುಕೊಳ್ಳಬೇಕು. ಬಸವ ತತ್ವ ಪಾಲನೆ ಮಾಡುವ ಮಠಗಳನ್ನು ಪಂಚಾಚಾರ್ಯರು ಎಂದಿಗೂ ಸಮೀಪಿಸಲು ಆಗದಷ್ಟು ಕಂದಕ ಸೃಷ್ಟಿಸಬೇಕು. ಆಗಲೇ ಬಸವಣ್ಣನವರು ನೀಡಿದ ಶ್ರೇಷ್ಠ ಲಿಂಗಾಯತ ಧರ್ಮ ಉಳಿಯುತ್ತದೆ. ಬೆಳೆಯುತ್ತದೆ ಎಂದು ನುಡಿದರು.

ಉದ್ಘಾಟನೆ ನೆರವೇರಿಸಿದ ಮಹಾಸಭಾ ಕೇಂದ್ರ ಸಮಿತಿಯ ಹಿರಿಯ ಉಪಾಧ್ಯಕ್ಷ ಬಸವರಾಜ ಬುಳ್ಳಾ ಮಾತನಾಡಿ, ಬಸವ ಸಂಸ್ಕೃತಿ ಶ್ರೇಷ್ಠ ಸಂಸ್ಕೃತಿಯಾಗಿದೆ. ಅದನ್ನು ಅರಿತು ಆಚರಿಸಿದರೆ ಜೀವನ ಸುಂದರವಾಗುತ್ತದೆ ಎಂದು ತಿಳಿಸಿದರು. ಇಷ್ಟಲಿಂಗ ಬಸವ ಸಂಸ್ಕೃತಿಯ ಜೀವಾಳವಾಗಿದೆ. ಸಮಾನತೆಯ ಸಂಕೇತವೂ ಆಗಿದೆ ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಮಾತನಾಡಿ, ಸೆ. 3 ರಂದು ಜಿಲ್ಲೆಯಲ್ಲಿ ಅರ್ಥಪೂರ್ಣವಾಗಿ ಬಸವ ಸಂಸ್ಕೃತಿ ಅಭಿಯಾನ ನಡೆಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು. ಅಭಿಯಾನ ಅಂಗವಾಗಿ ನಗರದಲ್ಲಿ ಪಥ ಸಂಚಲನ ಜರುಗಲಿದೆ. ಪಥ ಸಂಚಲನದಲ್ಲಿ ವಚನ ವಡಪು, ಡೊಳ್ಳು, ಕೋಲಾಟ, ಬಸವ ಸಂಸ್ಕೃತಿಯನ್ನು ಬಿಂಬಿಸುವ ಕಲಾ ತಂಡಗಳು ಪಾಲ್ಗೊಳ್ಳಲಿವೆ. ಬೃಹತ್ ಗಾತ್ರದ ಇಷ್ಟಲಿಂಗ, ವಿಭೂತಿ, ರುದ್ರಾಕ್ಷಿ ಪ್ರಮುಖ ಆಕರ್ಷಣೆ ಆಗಲಿವೆ ಎಂದು ಹೇಳಿದರು.

ಸಾವಿರ ಹೆಣ್ಣುಮಕ್ಕಳು ಸಾಂಪ್ರದಾಯಿಕ ಇಳಕಲ್ ಸೀರೆ ಹಾಗೂ ಸಾವಿರ ಪುರುಷರು ಧೋತರ–ಅಂಗಿ–ಟೊಪ್ಪಿಗೆ ಧರಿಸಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

ಶಿಕ್ಷಕ ಡಾ. ಶಿವಲಿಂಗ ಹೇಡೆ ವಿಶೇಷ ಉಪನ್ಯಾಸ ನೀಡಿದರು. ಖ್ಯಾತ ಚಿತ್ರ ಕಲಾವಿದ ಸಿ.ಬಿ. ಸೋಮಶೆಟ್ಟಿ, ಪಿ.ಎ???ಡಿ ಪಡೆದ ಶಿವಲಿಂಗ ಹೇಡೆ, ರೋಟರಿ ಕ್ಲಬ್ ಬೀದರ್ ಕ್ವೀನ್ಸ್ ಅಧ್ಯಕ್ಷೆ ಡಾ. ಸುಲೋಚನಾ ಪಾಟೀಲ ಹಾಗೂ ಇನ್ನರ್ ವ್ಹೀಲ್ ಕ್ಲಬ್ ಅಧ್ಯಕ್ಷೆ ಸುನೈನಾ ಗುತ್ತಿ ಅವರನ್ನು ಸನ್ಮಾನಿಸಲಾಯಿತು.

ಬಸವದೇವರು ಸಮ್ಮುಖ ವಹಿಸಿದ್ದರು. ಲಿಂಗಾಯತ ಸಮಾಜದ ಅಧ್ಯಕ್ಷ ಕುಶಾಲರಾವ್ ಪಾಟೀಲ

ಖಾಜಾಪುರ, ಗಾನಯೋಗಿ ಪಂಚಾಕ್ಷರಿ ಗವಾಯಿ

ಸೇವಾ ಸಂಘದ ಅಧ್ಯಕ್ಷ ಚಂದ್ರಶೇಖರ ಹೆಬ್ಬಾಳೆ, ನಿವೃತ್ತ ಎಂಜಿನಿಯರ್ ಪ್ರಕಾಶ ಮಠಪತಿ, ಕರ್ನಾಟಕ ಜಾನಪದ ಪರಿಷತ್ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ಮಲ್ಲಮ್ಮ ಸಂತಾಜಿ, ಮಹಾಸಭಾ ಜಿಲ್ಲಾ ಮಹಿಳಾ ಘಟಕದ ಕೋಶಾಧ್ಯಕ್ಷೆ ನಿರ್ಮಲಾ ಮಸೂದಿ,

ಸುವರ್ಣಾ ಧನ್ನೂರ, ಲಾವಣ್ಯ ಹಂಗರಗಿ, ಸಾಹಿತಿ ಸುರೇಖಾ ಹುಲಸೂರು ಇದ್ದರು. ರೇಖಾ ಲಿಂಗದಳ್ಳಿ ಸುಶ್ರಾವ್ಯವಾಗಿ ವಚನ ಗಾಯನ ಮಾಡಿದರು. ಜ್ಞಾನದೇವಿ ಬಬಚೇಡಿ ಸ್ವಾಗತಿಸಿದರು. ಕರುಣಾ ಶೆಟಕಾರ್ ನಿರೂಪಿಸಿದರು. ವಚನ ವೈಭವ ಸಮಿತಿ ಅಧ್ಯಕ್ಷ ರೇವಣಪ್ಪ ಮೂಲಗೆ ಭಕ್ತಿ ದಾಸೋಹ ಗೈದರು

# ಹೋಂ ಸ್ಟೇ ನಿರ್ಮಿಸಲು ಸಹಾಯಧನಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜುಲೈ.26– ಕೇಂದ್ರ ಸರ್ಕಾರದ ಬುಡಕಟ್ಟು ವ್ಯವಹಾರದ ಸಚಿವಾಲಯದ ಧರ್ತಿ ಅಬಾ ಜನಜಾತೀಯ ಗ್ರಾಮ ಉತ್ಕರ್ಷ ಅಭಿಯಾನ ಯೋಜನೆಯಡಿಯಲ್ಲಿ ಬೀದರ ಜಿಲ್ಲೆಯ 07 ತಾಲ್ಲೂಕುಗಳಿಂದ ಆಯ್ಕೆಯಾಗಿರುವ 196 ಗ್ರಾಮಗಳಲ್ಲಿನ ಬುಡಕಟ್ಟು ಸಮುದಾಯದವರು ಹೋಂ ಸ್ಟೇ ನಿಮಿಉಸಲು ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೀದರ ಜಿಲ್ಲೆಯ 07 ತಾಲ್ಲೂಕುಗಳಿಂದ ಆಯ್ಕೆಯಾಗಿರುವ 196 ಗ್ರಾಮಗಳ ವಿವರ: ಬಸವಕಲ್ಯಾಣ ತಾಲ್ಲೂಕಿನ ಪ್ರತಾಪೂರ ಗ್ರಾಮ ಪಂಚಾಯಿತಿಯ ಖಾನಾಪೂರ ಗ್ರಾಮ, ರಾಜೋಳಾ ಗ್ರಾಮ ಪಂಚಾಯಿತಿಯ ಘೋಗಾ ಗ್ರಾಮ, ನಿರಗೂಡಿ ಗ್ರಾಮ ಪಂಚಾಯಿತಿಯ ಕೌಡ್ಯಾಳ (ಎಸ್) ಗ್ರಾಮ, ಸಸ್ತಾಪುರ ಗ್ರಾಮ ಪಂಚಾಯಿತಿಯ ಮಿರ್ಜಾಪೂರ ಗ್ರಾಮ, ಹಾರಕೂಡ ಗ್ರಾಮ ಪಂಚಾಯಿತಿಯ ಖೇರ್ಡಾ (ಬಿ) ಗ್ರಾಮ.

ಭಾಲ್ಕಿ ತಾಲ್ಲೂಕಿನ ಇಂಚೂರ ಗ್ರಾಮ ಪಂಚಾಯಿತಿಯ ವಾಗಲಗಾಂವ ಗ್ರಾಮ, ಕುರುಬಖೇಳಗಿ ಗ್ರಾಮ ಪಂಚಾಯಿತಿಯ ಕುರುಬಖೇಳಗಿ ಗ್ರಾಮ, ನಿರಗೂಡಿ ಗ್ರಾಮ ಪಂಚಾಯಿತಿಯ ಕೌಡ್ಯಾಳ (ಎಸ್) ಗ್ರಾಮ, ಸಸ್ತಾಪುರ ಗ್ರಾಮ ಪಂಚಾಯಿತಿಯ ಮಿರ್ಜಾಪೂರ ಗ್ರಾಮ, ಹಾರಕೂಡ ಗ್ರಾಮ ಪಂಚಾಯಿತಿಯ ಖೇರ್ಡಾ (ಬಿ) ಗ್ರಾಮ.

ಬೀದರ ತಾಲ್ಲೂಕಿನ ಗಾದಗಿ ಗ್ರಾಮ ಪಂಚಾಯಿತಿಯ ಸೋಲಪೂರ ಗ್ರಾಮ, ಮಲ್ಕಾಪೂರ ಗ್ರಾಮ ಪಂಚಾಯಿತಿಯ ಶಹಾಪೂರ ಗ್ರಾಮ, ಕಾಡವಾದ ಗ್ರಾಮ ಪಂಚಾಯಿತಿಯ ಖಾಶಂಪೂರ (ಪ್ಯಾನ) ಗ್ರಾಮ, ಚಟ್ನಳ್ಳಿ ಗ್ರಾಮ ಪಂಚಾಯಿತಿಯ ಬರಿದಾಬಾದ ಗ್ರಾಮ.

ಕಮಲನಗರ ತಾಲ್ಲೂಕಿನ ಚಿಕ್ಲಿ (ಯು) ಗ್ರಾಮ ಪಂಚಾಯಿತಿಯ ನಂದಿ ಬಿಜಲಗಾಂವ ಗ್ರಾಮ, ದಾಬಕಾ ಗ್ರಾಮ ಪಂಚಾಯಿತಿಯ ಗಂಗನಬೀಡ, ದಾಬಕಾ (ಚೌ) ಗ್ರಾಮ, ಚಿಮೆಗಾಂವ ಗ್ರಾಮ ಪಂಚಾಯಿತಿಯ ಚಿಮೆಗಾಂವ, ಹಂದಿಕೇರಾ, ಮಾಳೆಗಾಂವ ಗ್ರಾಮ, ಮುರ್ಕಿ ಗ್ರಾಮ ಪಂಚಾಯಿತಿಯ ಮುರ್ಕಿ, ಹಕ್ಯಾಳ ಗ್ರಾಮ, ಬೆಳಕುಣಿ (ಬಿಹೆಚ್) ಗ್ರಾಮ ಪಂಚಾಯಿತಿಯ ಸಂಗನಾಳ, ಬೆಳಕುಣಿ (ಬಿ) ಗ್ರಾಮ, ಮದನೂರ ಗ್ರಾಮ ಪಂಚಾಯಿತಿಯ ಮದನೂರ ಗ್ರಾಮ, ಡೊಣಗಾಂವ (ಎಮ್) ಗ್ರಾಮ ಪಂಚಾಯಿತಿಯ ರಂಡ್ಯಾಳ, ಡೊಣಗಾಂವ (ಎಮ್), ಕೊಟಗ್ಯಾಳ ಗ್ರಾಮ, ತೋರ್ಣಾ ಗ್ರಾಮ ಪಂಚಾಯಿತಿಯ ತೋರ್ಣಾ ಗ್ರಾಮ, ಕಮಲನಗರ ಗ್ರಾಮ ಪಂಚಾಯಿತಿಯ ಬಾಳೂರ ಗ್ರಾಮ, ಸೊನಾಳ ಗ್ರಾಮ ಪಂಚಾಯಿತಿಯ ಹೊರಂಡಿ, ಸೊನಾಳ, ಕಳಗಾಪೂರ ಗ್ರಾಮ, ಡಿಗ್ಗಿ ಗ್ರಾಮ ಪಂಚಾಯಿತಿಯ ಚಾಂಡೇಶ್ವರ ಗ್ರಾಮ, ಹೊಳಸಮುದ್ರ ಗ್ರಾಮ ಪಂಚಾಯಿತಿಯ ಹೊಳಸಮುದ್ರ, ಕೊರ್ಯಾಳ, ಸೋನಾಳ, ಸಾವಳಿ ಗ್ರಾಮ, ಖೇಡ ಗ್ರಾಮ ಪಂಚಾಯಿತಿಯ ಹುಲಸೂರ, ಖೇಡ, ಸಂಗಮ ಗ್ರಾಮ, ಬಳತ (ಬಿ) ಗ್ರಾಮ ಪಂಚಾಯಿತಿಯ ತಪಸ್ಯಾಳ, ಬಳತ (ಬಿ), ಬಳದ (ಕೆ) ಗ್ರಾಮ, ಮುಧೋಳ (ಬಿ) ಗ್ರಾಮ ಪಂಚಾಯಿತಿಯ ಮುಧೋಳ (ಬಿ) ಗ್ರಾಮ, ಕೊರೆಕಲ ಗ್ರಾಮ ಪಂಚಾಯಿತಿಯ ಕೊರೆಕಲ, ಬೆಡಕುಂದಾ ಹಿಪ್ಪಳಗಾಂವ ಗ್ರಾಮ, ಚಾಂದೂರಿ ಗ್ರಾಮ ಪಂಚಾಯಿತಿಯ ಚಾಂದೂರಿ ಹಾಲಹಳ್ಳಿ ಗ್ರಾಮ, ಠಾಣಾ ಕುಶನೂರ ಗ್ರಾಮ ಪಂಚಾಯಿತಿಯ ಕುಶನೂರ (ಟಿ), ನಿಡೋದಾ ಗ್ರಾಮ.

ಔರಾದ (ಬಿ) ತಾಲ್ಲೂಕಿನ ಹೋಕ್ರಾಣಾ ಗ್ರಾಮ ಪಂಚಾಯಿತಿಯ ಬಾವಲಗಾಂವ, ಹೋಕ್ರಾಣಾ ಗ್ರಾಮ, ಭಡಾರಕುಮಟಾ ಗ್ರಾಮ ಪಂಚಾಯಿತಿಯ ಖೇರ್ಡಾ (ಬಿ), ಭಂಡಾರಕುಮಟಾ, ಡಂಗರಗಾಂವ ಗ್ರಾಮ, ಬೊಂತಿ ಗ್ರಾಮ ಪಂಚಾಯಿತಿಯ ಸಾವರಗಾಂವ, ಹಂಗೇರಗಾ, ಬೊಂತಿ, ಲಿಂಗಿ ಗ್ರಾಮ, ಎಕಂಬಾ ಗ್ರಾಮ ಪಂಚಾಯಿತಿಯ ಕರಕ್ಯಾಳ, ಹಸ್ಸಿಕೇರೆ, ಹುಲ್ಯಾಳ ಎಕಂಬಾ, ಜಮಲಾಪೂರ, ಖಂದೇಕೇರಿ ಗ್ರಾಮ, ಬೆಳಕುಣಿ (ಬಿ) ಗ್ರಾಮ ಪಂಚಾಯಿತಿಯ ಬೆಳಕುಣಿ (ಬಿ) ಗ್ರಾಮ, ಬೆಳಕುಣಿ (ಚೌ) ಗ್ರಾಮ ಪಂಚಾಯಿತಿಯ ಬೆಳಕುಣಿ (ಚೌ), ರಕ್ಷಾಳ (ಬಿ), ಮುಗನಾಳ ಗ್ರಾಮ, ಸಂತಪೂರ ಗ್ರಾಮ ಪಂಚಾಯಿತಿಯ ಮಸ್ಕಲ, ಜೊನ್ನೆಕೇರಿ, ಸಂತಪೂರ ಗ್ರಾಮ, ಹೆಡಗಾಪೂರ ಗ್ರಾಮ ಪಂಚಾಯಿತಿಯ ರಕ್ಷಾಳ (ಕೆ), ನಿಟ್ಟೂರ, ಹೆಡಗಾಪೂರ ಗ್ರಾಮ, ಧೂಪತಮಹಾಗಾಂವ ಗ್ರಾಮ ಪಂಚಾಯಿತಿಯ ಧೂಪತಮಹಾಗಾಂವ, ಬಾಬಳಿ ಗ್ರಾಮ, ಲಾಧಾ ಗ್ರಾಮ ಪಂಚಾಯಿತಿಯ ಲಾಧಾ, ಮುಸ್ತಾಪೂರ, ಆಲೂರ (ಬಿ) ಆಲೂರ (ಕೆ) ಗ್ರಾಮ, ಬಾದಲಗಾಂವ ಗ್ರಾಮ ಪಂಚಾಯಿತಿಯ ದುದಕನಾಳ, ವನಮಾರಪಳ್ಳಿ, ಬಾದಲಗಾಂವ ಗ್ರಾಮ, ಏಕಲಾರ ಗ್ರಾಮ ಪಂಚಾಯಿತಿಯ ಕಲ್ಲೂರ, ಏಕಲೂರಾ, ಬೋರಾಳ, ಬರದಾಪೂರ ಗ್ರಾಮ, ಸುಂದಾಳ ಗ್ರಾಮ ಪಂಚಾಯಿತಿಯ ಜಕನಾಳ, ನಂದ್ಯಾಳ, ಯನಗುಂದಾ ಗ್ರಾಮ, ನಾಗಮಾರಪಳ್ಳಿ ಗ್ರಾಮ ಪಂಚಾಯಿತಿಯ ಮನ್ನೂರ (ಕೆ), ನಾಗಮಾರಪಳ್ಳಿ, ಕರಂಜಿ (ಬಿ), ಕರಂಜಿ (ಕೆ), ರಾಯಪಳ್ಳಿ ಗ್ರಾಮ, ಚಿಂತಕಿ ಗ್ರಾಮ ಪಂಚಾಯಿತಿಯ ನಾಗನಪಲ್ಲಿ, ಚಿಂತಾಕಿ, ಬೆಲ್ದಾಳ ಗ್ರಾಮ, ಜೋಜನಾ ಗ್ರಾಮ ಪಂಚಾಯಿತಿಯ ಜೋಜನಾ, ನಂದಿ ನಾಗೂರ, ನಾಗೂರ (ಎಮ್), ಬೊರ್ಗಿ (ಜೆ) ಗ್ರಾಮ, ಗುಡಪಳ್ಳಿ ಗ್ರಾಮ ಪಂಚಾಯಿತಿಯ ಗುಡಪಳ್ಳಿ, ಮೇಡಪಳ್ಳಿ, ಉಜ್ಜನಿ ಗ್ರಾಮ, ಚಿಕ್ಲಿ (ಜೆ) ಗ್ರಾಮ ಪಂಚಾಯಿತಿಯ ಚಿಕ್ಲಿ (ಜೆ) ಗ್ರಾಮ, ಶೆಂಬಳ್ಳಿ ಗ್ರಾಮ ಪಂಚಾಯಿತಿಯ ಶೆಂಬಳ್ಳಿ, ಬೆಲೂರ (ಎನ್) ಗ್ರಾಮ, ವಡಗಾಂವ (ಡಿ) ಗ್ರಾಮ ಪಂಚಾಯಿತಿಯ ವಡಗಾಂವ (ಡಿ), ಸೊರಹಳ್ಳಿ, ಖಾನಾಪೂರ ಗ್ರಾಮ, ಜಂಬಗಿ ಗ್ರಾಮ ಪಂಚಾಯಿತಿಯ ಮಹಾರಾಜವಾಡಿ, ಜಂಬಗಿ (ಬಿ), ಕಂದಗೋಳ, ವಲ್ಲೆಪೂರ ಗ್ರಾಮ, ಕೌಠಾ (ಬಿ) ಗ್ರಾಮ ಪಂಚಾಯಿತಿಯ ಕೌಠಗಾಂವ, ಗಡಿ ಕುಶನೂರ, ಪಾಶಾಪೂರ, ಬಲ್ಲೂರ (ಜೆ), ಕೌಠಾ (ಕೆ), ಕೌಠಾ (ಬಿ) ಗ್ರಾಮಗಳು.

ಹುಮನಾಬಾದ ತಾಲ್ಲೂಕಿನ ಘಾಟಬೋರಾಳ ಗ್ರಾಮ ಪಂಚಾಯಿತಿಯ ಘಾಟಬೋರಾಳ ಗ್ರಾಮ, ಘೋಡವಾಡಿ ಗ್ರಾಮ ಪಂಚಾಯಿತಿಯ ಘೋಡವಾಡಿ, ಹುಣಸನಾಳ, ಹಂದಿಕೇರಾ ಗ್ರಾಮ, ಸುಲ್ತಾನಬಾದ ಗ್ರಾಮ ಪಂಚಾಯಿತಿಯ ಕುಮಾರ ಚಿಂಚೋಳಿ, ಸುಲ್ತಾನಬಾದ ಗ್ರಾಮ, ದುಬ್ಬಲಗುಂಡಿ ಗ್ರಾಮ ಪಂಚಾಯಿತಿಯ ದುಬ್ಬಲಗುಂಡಿ ಗ್ರಾಮ, ಚಂದನಹಳ್ಳಿ ಗ್ರಾಮ ಪಂಚಾಯಿತಿಯ ಓತಗಿ, ಚಂದನಹಳ್ಳಿ, ಸೊನಕೇರಾ ಗ್ರಾಮ, ಕನಕಟ್ಟ ಗ್ರಾಮ ಪಂಚಾಯಿತಿಯ ಹುಣಸಗೇರಾ, ಕನಕಟ್ಟ ಗ್ರಾಮ, ಸೆಡೋಳ ಗ್ರಾಮ ಪಂಚಾಯಿತಿಯ ಸೆಡೋಳ, ಚಿನಕೇರಾ ಗ್ರಾಮ, ಜಲಸಂಗಿ ಗ್ರಾಮ ಪಂಚಾಯಿತಿಯ ಜಲಸಂಗಿ ಗ್ರಾಮ, ಬೆನ್ನಚಿಂಚೋಳಿ ಗ್ರಾಮ ಪಂಚಾಯಿತಿಯ ನಮದಾಪೂರ, ಬೆನ್ನಚಿಂಚೋಳಿ ಗ್ರಾಮ, ಡಾಕುಳಗಿ ಗ್ರಾಮ ಪಂಚಾಯಿತಿಯ ಸಿಂದಬಂದಗಿ, ಡಾಕುಳಗಿ, ಅಮೀರಾಬಾದ, ಹಿಲಾಲಪೂರ ಗ್ರಾಮ, ಸಿತಳಗೇರಾ ಗ್ರಾಮ ಪಂಚಾಯಿತಿಯ ಮರಖಲ, ನಿಂಬೂರ, ಸಿತಳಗೇರಾ ಗ್ರಾಮ, ಮದರಗಾಂವ ಗ್ರಾಮ ಪಂಚಾಯಿತಿಯ ಆಲೂರಾ, ಮದರಗಾಂವ ಗ್ರಾಮ, ಮಾಣಿಕನಗರ ಗ್ರಾಮ ಪಂಚಾಯಿತಿಯ ಮೊಳಖೇರಾ, ಗಡಂವತಿ, ಮಾಣಿಕನಗರ ಗ್ರಾಮ, ಧೂಮ್ಮನಸೂರ ಗ್ರಾಮ ಪಂಚಾಯಿತಿಯ ಧೂಮ್ಮನಸೂರ ಗ್ರಾಮ, ನಂದಗಾಂವ ಗ್ರಾಮ ಪಂಚಾಯಿತಿಯ ನಂದಗಾಂವ, ಕಪ್ಪರಗಾಂವ ಗ್ರಾಮ, ಹುಡಗಿ ಗ್ರಾಮ ಪಂಚಾಯಿತಿಯ ಹುಡಗಿ ಗ್ರಾಮ, ಹಳ್ಳಿಖೇಡ (ಕೆ) ಗ್ರಾಮ ಪಂಚಾಯಿತಿಯ ಹಳ್ಳಿಖೇಡ (ಕೆ), ಮುಸ್ತಾಪೂರ, ಚಿತ್ತಕೋಟಾ ಗ್ರಾಮ, ಕಲ್ಲೂರ ಗ್ರಾಮ ಪಂಚಾಯಿತಿಯ ಕಲ್ಲೂರ, ಕಟ್ಟಹಳ್ಳಿ, ಬೋರಮಪಳ್ಳಿ ಗ್ರಾಮ, ಸಿಂದನಕೇರಾ ಗ್ರಾಮ ಪಂಚಾಯಿತಿಯ ಹಣಕುಣಿ, ಸಿಂದನಕೇರಾ ಗ್ರಾಮಗಳು.

ಚಿಟಗುಪ್ಪಾ ತಲ್ಲೂಕಿನ ತಾಳಮಡಗಿ ಗ್ರಾಮ ಪಂಚಾಯಿತಿಯ ಹಿಪ್ಪರಗಾಂವ, ವಾಡನಕೇರಾ, ತಾಳಮಡಗಿ, ಕಂದಗೋಳ ಗ್ರಾಮ, ಬೆಳಕೇರಾ ಗ್ರಾಮ ಪಂಚಾಯಿತಿಯ ಮಾಡಗುಳ್ಳ, ಶಮತಾಬಾದ, ಬೆಳಕೇರಾ, ಬನ್ನಳಿ ಗ್ರಾಮ, ಇಟಗಾ ಗ್ರಾಮ ಪಂಚಾಯಿತಿಯ ಇಟಗಾ, ವಳಖಿಂಡಿ, ರಾಮಪೂರ, ಮುದ್ದನಾಳ ಗ್ರಾಮ, ಕೂಡಂಬಳ ಗ್ರಾಮ ಪಂಚಾಯಿತಿಯ ಕೂಡಂಬಳ ಗ್ರಾಮ, ಮುಸ್ತರಿ ಗ್ರಾಮ ಪಂಚಾಯಿತಿಯ ಮುಸ್ತರಿ ಗ್ರಾಮ, ಮಂಗಲಗಿ ಗ್ರಾಮ ಪಂಚಾಯಿತಿಯ ಮಂಗಲಗಿ, ನಾಗನಕೇರಾ ಗ್ರಾಮ, ನಿರ್ಣಾ ಗ್ರಾಮ ಪಂಚಾಯಿತಿಯ ನಿರ್ಣಾ ಗ್ರಾಮ, ಉಡಬಾಳ ಗ್ರಾಮ ಪಂಚಾಯಿತಿಯ ಉಡಬಾಳ ಗ್ರಾಮ, ಮುತ್ತಂಗಿ ಗ್ರಾಮ ಪಂಚಾಯಿತಿಯ ಮುತ್ತಂಗಿ, ಮದರಗಿ, ಭದ್ರಾಪೂರ ಗ್ರಾಮ, ಮೀನಕೇರಾ ಗ್ರಾಮ ಪಂಚಾಯಿತಿಯ ಬಶೀರಾಪೂರ, ಬೋರಳ, ಮೀನಕೇರಾ ಗ್ರಾಮ, ಮನ್ನಾಎಖೇಳಿ ಗ್ರಾಮ ಪಂಚಾಯಿತಿಯ ಮನ್ನಾಎಖೇಳಿ ಗ್ರಾಮ, ಬೆಮಳಖೇಡಾ ಗ್ರಾಮ ಪಂಚಾಯಿತಿಯ ಬೆಮಳಖೇಡಾ ಗ್ರಾಮ, ಚಾಂಗ್ಲೇರಾ ಗ್ರಾಮ ಪಂಚಾಯಿತಿಯ ಪೊಲಕಪಳ್ಳಿ, ಚಾಂಗ್ಲೇರಾ ಗ್ರಾಮ, ಉಡಬನಳ್ಳಿ ಗ್ರಾಮ ಪಂಚಾಯಿತಿಯ ಕರಪಕಪಳ್ಳಿ, ಕರಕನಳ್ಳಿ ಉಡಬನಳ್ಳಿ ಈ ಗ್ರಾಮಗಳನ್ನು ಅಭಿವೃದ್ಧಿಪಡಿಸಿ ಬುಡಕಟ್ಟು ಸಮುದಾಯದ ಸಂಸ್ಕೃತಿ, ಪರಂಪರೆ ಮತ್ತು ನೈಸರ್ಗಿಕ ಸಂಪತ್ತನ್ನು ಪ್ರವಾಸಿಗರಿಗೆ ಪರಿಚಯಿಸಲು ಉದ್ದೇಶಿಸಲಾಗಿದೆ.

ಹೋಂ ಸ್ಟೆ ನಿರ್ಮಿಸಲು 02 ಹೊಸ ಕೊಠಡಿ ನಿರ್ಮಾಣಕ್ಕೆ ರೂ. 5.00 ಲಕ್ಷದವರೆಗೆ ಹಾಗೂ ಹೋಂ–ಸ್ಟೇ ನವೀಕರಿಸಲು ರೂ. 3.00 ಲಕ್ಷದವರೆಗೆ ಸಹಾಯಧನ ನೀಡುವ ಯೋಜನೆಯನ್ನು ಪ್ರವಾಸೋದ್ಯಮ ಇಲಾಕೆಯಿಂದ ನೀಡಲಾಗುತ್ತದೆ.

ಅರ್ಹ ಆಸಕ್ತ ವ್ಯಕ್ತಿ ನಿಗಧಿತ ಅರ್ಜಿ ನಮೂನೆಯನ್ನು ಜಿಲ್ಲಾ ಪ್ರವಾಸೋದ್ಯಮ ಕಛೇರಿಯಲ್ಲಿ ಪಡೆದು ಅವಶ್ಯಕ ದಾಖಲೆಗಳಾದ ಜಾತಿ ಪ್ರಮಾಣ ಪತ್ರ (ಪರಿಶಿಷ್ಟ ಪಂಗಡ), ಆಧಾರ್ ಕಾರ್ಡ್, ಬ್ಯಾಂಕ್ ವಿವರ, ಮನೆಯ ಮಾಲೀಕತ್ವದ ದಾಖಲೆ, ಹೋಂ–ಸ್ಟೇ ಪೋಟೋ, Declaration Form, ಗ್ರಾಮ ಪಂಚಾಯಿತಿಯ ಎನ್.ಓ.ಸಿ, ಪೋಲೀಸ್ ಇಲಾಖೆಯ ಎನ್.ಓ.ಸಿ ದಾಖಲೆಗಳ ಜೆ–ರಾಕ್ಸ್ ಪ್ರತಿಗಳೊಂದಿಗೆ ಸಹಾಯಕ ನಿರ್ದೇಶಕರ ಕಛೇರಿ, ಪ್ರವಾಸೋದ್ಯಮ ಇಲಾಖೆ, ಕನ್ನಡ ಭವನ ಚಿಕ್ಕಪೇಟ ಬೀದರ ಜಿಲ್ಲೆ, ಬೀದರ–585403 ಕಛೇರಿಗೆ ದಿನಾಂಕ:05–08–2025 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08482–454204 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ಇಂದು ರಂಗಮಂದಿರದಲ್ಲಿ ಡಾ. ರಮಾಬಾಯಿ ಅಂಬೇಡ್ಕರ್ ನಾಟಕ ಪ್ರದರ್ಶನ
# ಕಲಾವಿದರ ಏಳ್ಗೆಗೆ ರಂಗಾಯಣ ಸದಾ ಶ್ರಮಿಸಲಿದೆ: ಡಾ. ಸುಜಾತಾ ಜಂಗಮಶೆಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 26 :– ಕಲಾವಿದರ ಏಳ್ಗೆಗೆ ರಂಗಾಯಣ ಸದಾ ಶ್ರಮಿಸಲಿದೆ. ಕಲಾವಿದರು ಮೊದಲು ತಮ್ಮ ಪರಿಶ್ರಮದೊಂದಿಗೆ ಕಲಾಪ್ರದರ್ಶನ ಮಾಡಬೇಕು. ಉತ್ತಮ ಬಟ್ಟೆಗಳು, ವಾದ್ಯಗಳು, ಮತ್ತು ಇನ್ನಿತರ ಪರಿಕರಗಳೊಂದಿಗೆ ಕಲೆ ಪ್ರಸ್ತುತಪಡಿಸಿದಾಗ ಮಾತ್ರ ಸರ್ಕಾರ ಅದಕ್ಕೆ ತಕ್ಕ ಸಂಭಾವನೆ ನೀಡುತ್ತದೆ ಎಂದು ಕಲಬುರಗಿ ರಂಗಾಯಣದ ನಿರ್ದೇಶಕಿ ಡಾ. ಸುಜಾತಾ ಜಂಗಮಶೆಟ್ಟಿ ತಿಳಿಸಿದರು.

ನಗರದ ರಂಗಮಂದಿರದಲ್ಲಿ ಕರೆದ ಕಲಾವಿದರ ಸಭೆಯಲ್ಲಿ ಮಾತನಾಡಿದ ಅವರು ಮುಂದಿನ ದಿನಗಳಲ್ಲಿ ಶಾಲಾ ರಂಗಭೂಮಿ ಮತ್ತು ಕಾಲೇಜು ರಂಗಭೂಮಿ ಕ್ರಿಯಾಶೀಲವಾಗುವಂತೆ ಶಾಲಾ ಕಾಲೇಜುಗಳಲ್ಲಿ ನಾಟಕ ಪ್ರದರ್ಶನ, ರಂಗಗೀತೆಗಳ ಬಗ್ಗೆ ತರಬೇತಿ ನೀಡಲಾಗುವುದು. ಅಲ್ಲಿಂದಲೇ ಕಲಾ ರಂಗಭೂಮಿ ಹುಟ್ಟಿಕೊಳ್ಳುತ್ತದೆ. ಅಲ್ಲಿಯೇ ನಾಟಕ ನಿರ್ದೇಶಕರು, ನಟರು ಮತ್ತು ನಾಟಕರಾರರು ಸಿಗುತ್ತಾರೆ ಎಂದರು.

ಇಂದಿನ ಆಧುನಿಕರಣ ಯಾಂತ್ರಿಕರಣ ಮತ್ತು ಮೊಬೈಲ್ ಯುಗದಲ್ಲಿ ನಾಟಕಗಳನ್ನು ವೀಕ್ಷಿಸಲು ಜನರನ್ನು ರಂಗಭೂಮಿ ಕಡೆಗೆ ಹೇಗೆ ಆಕರ್ಷಿಸಬೇಕೆಂಬ ಕುರಿತು ಇಂದಿನ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಕ.ಕ. ಏಳೂ ಜಿಲ್ಲೆಯ ಕಾಲೇಜು ವಿದ್ಯಾರ್ಥಿಗಳಲ್ಲಿರುವ ಕಲಾವಿದರನ್ನು ಗುರುತಿಸಿ, ಒಂದು ನಾಟಕ ನಿರ್ಮಿಸಿ ಏಳೂ ಜಿಲ್ಲೆಯ ಜನರು ನೋಡುವಂತೆ ಮಾಡಲಾಗುತ್ತಿದೆ ಎಂದರು.

ಕಲಾವಿದರಿಗೆ ಅನುದಾನದ ಕೊರತೆ, ರಂಗಾಯಣ ವತಿಯಿಂದ ಅರ್ಹ ಕಲಾವಿದರಿಗೆ ನಾಟಕ ಪ್ರದರ್ಶನ ಮಾಡಲು ಸೂಚಿಸುವುದು ಮತ್ತು ಪ್ರತೀ ವರ್ಷ ನಾಟಕಗಳನ್ನು ಪ್ರದರ್ಶನ ಮಾಡುವುದು ಸೇರಿದಂತೆ ಇಂದಿನ ಸಭೆಯಲ್ಲಿ ಕಲಾವಿದರು ಸಲಹೆ ಸೂಚನೆ ನೀಡಿದ್ದಾರೆ. ಅವುಗಳನ್ನು ಗಂಭಿರವಾಗಿ ಪರಿಗಣಿಸಿ ನಮ್ಮ ರಂಗಾಯಣ ವತಿಯಿಂದ ಸಾಧ್ಯವಾದಷ್ಟು ಮಟ್ಟಿಗೆ ಕಲಾವಿದರಿಗೆ ಪ್ರೋತ್ಸಾಹ ನೀಡಲಾಗುವುದು ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ಮಾತನಾಡಿ ಸಂಚಾರಿ ಕಲಾವಿದರ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಜುಲೈ 28 ಆಗಿದೆ. ಇನ್ನೂ ಹತ್ತು ದಿವಸ ಮುಂದೂಡುವ ಸಂಭವವಿದೆ. ಆದ್ದರಿಂದ ಕಲಾವಿದರ ಆನ್‌ಲೈನ್ ಅರ್ಜಿ ಭರ್ತಿ ಮಾಡಬೇಕು. ಆಯ್ಕೆಯಾದ ಕಲಾವಿದರಿಂದ ಒಂದು ನಾಟಕ ನಿರ್ಮಿಸಿ, ಇಡೀ ರಾಜ್ಯದಾದ್ಯಂತ ಆ ನಾಟಕ ಪ್ರದರ್ಶನ ಮಾಡಿಸಲಾಗುವುದು. ಕಲಾವಿದರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು. ಜುಲೈ 27 ರಂದು ಬೆ. 11 ಗಂಟೆಗೆ ರಂಗಮಂದಿರದಲ್ಲಿ ನಡೆಯುವ ಡಾ.ರಮಾಬಾಯಿ ಅಂಬೇಡ್ಕರ್ ನಾಟಕ ವೀಕ್ಷಿಸಬೇಕೆಂದು ಕೋರಿದರು.

ಇದೇ ವೇಳೆ ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ, ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ, ಪ್ರಮುಖರಾದ ವಿನಯ ಮಾಳಗೆ, ಎಸ್.ಬಿ.ಕುಚಬಾಳ ಸೇರಿದಂತೆ ಕಲಾವಿದರು ಉಪಸ್ಥಿತರಿದ್ದರು.

# ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ ಅವರ ಆರೋಗ್ಯ ಸ್ಥಿತಿ ಸ್ಥಿರ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ; ಜು.26: ಶುಕ್ರವಾರ ರಾತ್ರಿ ಉಸಿರಾಟದ ಸೋಂಕಿನ ದೂರುಗಳೊಂದಿಗೆ ಖಾಸಗಿ ಆಸ್ಪತ್ರೆಗೆ ದಾಖಲಾಗಿರುವ ಶರಣಬಸವೇಶ್ವರ ಸಂಸ್ಥಾನದ 8ನೇ ಮಹಾದಾಸೋಹ ಪೀಠಾಧಿಪತಿ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ ಅವರ ಆರೋಗ್ಯ ಸ್ಥಿತಿ ಸ್ಥಿರವಾಗಿದೆ ಮತ್ತು ಶೀಘ್ರವಾಗಿ ಸಾಮಾನ್ಯ ಸ್ಥಿತಿಗೆ ಚೇತರಿಸಿಕೊಳ್ಳುತ್ತಿದೆ.

ಡಾ. ಅಪ್ಪಾಜಿ ಅವರನ್ನು ನೋಡಿಕೊಳ್ಳುತ್ತಿರುವ ವೈದ್ಯರ ತಂಡವು ಅವರ ಒಟ್ಟಾರೆ ಆರೋಗ್ಯ ಸ್ಥಿತಿ ಸ್ಥಿರವಾಗಿದೆ ಮತ್ತು ಉಸಿರಾಟದ ಸೋಂಕು ನಿಯಂತ್ರಣದಲ್ಲಿದೆ ಎಂದು ಹೇಳಿದೆ. ಆಸ್ಪತ್ರೆಯಲ್ಲಿ ಡಾ. ಅಪ್ಪಾಜಿ ಅವರೊಂದಿಗಿರುವ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ ಅವರು ಪೂಜ್ಯ ಅಪ್ಪಾಜಿ ಅವರ ಆರೋಗ್ಯ ಸ್ಥಿತಿ ಸಾಮಾನ್ಯ ಸ್ಥಿತಿಗೆ ಸುಧಾರಿಸುತ್ತಿದೆ ಎಂದು ತಿಳಿಸಿದ್ದಾರೆ.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಚೇರಪರ್ಸನ್ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ಅವರು, ಪೂಜ್ಯ ಡಾ. ಅಪ್ಪಾಜಿ ಅವರ ಆರೋಗ್ಯ ಸ್ಥಿತಿ ಸ್ಥಿರವಾಗಿರುವುದರಿಂದ ಶರಣಬಸವೇಶ್ವರ ಸಂಸ್ಥಾನದ ಭಕ್ತರು ಭಯಭೀತರಾಗಬಾರದು ಮತ್ತು ಡಾ. ಅಪ್ಪಾಜಿ ಅವರ ಆರೋಗ್ಯಸ್ಥಿತಿಯ ಬಗ್ಗೆ ಹರಡಿರುವ ವದಂತಿಗಳಿಗೆ ಕಿವಿಗೊಡಬಾರದು ಎಂದು ಮನವಿ ಮಾಡಿದ್ದಾರೆ.

# ಆರ್ಬಿಟ್ ಸಂಸ್ಥೆ ಯಲ್ಲಿ ಯಶಸ್ವಿಯಾಗಿ ಜರುಗಿದ ಆಡು ಸಾಕಾಣಿಕೆ ತರಬೇತಿ ಕಾರ್ಯಗಾರ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:–ಪಟ್ಟಣದ ಆರ್ಬಿಟ್ ಸಂಸ್ಥೆ ಮತ್ತು ಅಜೀಮ್ ಪ್ರೇಮಜಿ ಫೌಂಡೇಶನ್ ವತಿಯಿಂದ ನಡೆಯುವ ನವ ಜೀವನ ಕಾರ್ಯಕ್ರಮದಡಿಯಲ್ಲಿ ಫಲಾನುಭವಿಗಳ ಪೋಷಕರಿಗೆ, ಪಶು ಸಂಗೋಪನೆ ಇಲಾಖೆಯ ಸಹಯೋಗದಲ್ಲಿ ವೈಜ್ಞಾನಿಕ ಆಡು ಸಾಕಾಣಿಕೆ ತರಬೇತಿ ನೀಡಲಾಯಿತು.

ಈ ಕಾರ್ಯಕ್ರಮ ದ ಉದ್ಘಾಟನೆಯನ್ನು ಸಂಸ್ಥೆಯ ನಿರ್ದೇಶಕರಾದ ಫಾದರ ವಿಕ್ಟರವಾಸ್ ನೆರವೇರಿಸಿ, ಪ್ರತಿ ಯೊಬ್ಬ ಫಲಾನುಭವಿಗಳು ತರಬೇತಿ ಯ ಲಾಭ ಪಡೆದು–ಕೊಂಡು ಸ್ವಯಂ ಉದ್ಯೋಗ ದಲ್ಲಿ ನಿರತರಾಗಲು ಸಲಹೆ ನೀಡಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಡಾ. ಶಾಂತಕುಮಾರ ಸಿದ್ದೇಶ್ವರ, ಮುಖ್ಯ

# ಆಸ್ಪತ್ರೆಯ ಸುತ್ತ ಸ್ವಚ್ಛತೆ ಕಾಪಾಡಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜು.26–ಆಸ್ಪತ್ರೆಯ ಸುತ್ತ ಸ್ವಚ್ಛತೆ ಕಾಪಾಡಿ ಜನತೆಗೆ ಉತ್ತಮ ಸೇವೆ ಒದಗಿಸಬೇಕಿದೆ. ಆಸ್ಪತ್ರೆಯ ಸುತ್ತಲಿನ ಪರಿಸರದ ಸ್ವಚ್ಛತೆಯ ಕಡೆಗೆ ಪ್ರತಿಯೊಬ್ಬರೂ ಗಮನಹರಿಸಬೇಕು, ಆಸ್ಪತ್ರೆಯ ಬಳಿ ನಾಗರೀಕರು ಕೂಡ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ನಗರಸಭೆ ಅಧ್ಯಕ್ಷೆ ಕು.ಲಲಿತಾ ಮೌಲಾಲಿ ಅನಪೂರ ಹೇಳಿದರು.



ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಭೇಟಿ ನೀಡಿದ ಅವರು, ಸ್ವಚ್ಛತೆ ಕುರಿತು ಆಸ್ಪತ್ರೆ ಸಿಬ್ಬಂದಿಗಳು ಮತ್ತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ ಅವರು ಮಾತನಾಡಿದರು.

ಎಲ್ಲೆಂದರಲ್ಲಿ ಮನೆಯಿಂದ ತಂದ ಊಟ ಮಾಡಿ ಅಲ್ಲೇ ಉಳಿದ ಅನ್ನವನ್ನು ಬಿಸಾಡುವುದು, ಬಿಡಿ, ಸಿಗರೇಟ್ ಸೇದುವುದು, ತಂಬಾಕು ಗುಟಕಾ ತಿಂದು ಉಗುಳುವುದು ಯಾರೂ ಮಾಡಬಾರದು ನಮ್ಮ ಆಸ್ಪತ್ರೆ ಸ್ವಚ್ಛತೆ ನಮ್ಮ ಆರೋಗ್ಯದ ಮೇಲೆ ಪರಿಣಾಮ ಬೀರಲದೆ ಎಂದು ಹೇಳಿದರು.

ಆಸ್ಪತ್ರೆ ಆವರಣದಲ್ಲಿ ಕಸ ಇದ್ದರೆ ಪ್ರತಿಯೊಬ್ಬರೂ ಮೂಗು ಮುಚ್ಚಿಕೊಂಡೇ ತಿರುಗುವಂತಹ ಪರಿಸ್ಥಿತಿ ಬರುತ್ತದೆ. ನಾಗರೀಕರ ನಿಷ್ಕಾಳಜಿಯೂ ಕೂಡ ಪರಿಸರ ಸ್ವಚ್ಛತೆಯ ಮೇಲೆ ಪರಿಣಾಮ ಬೀರುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪರಿಸರ ಅಭಿಯಂತ ಪ್ರಶಾಂತ, ಡಾ.ಅಂಗಡಿ, ಡಾ.ರಿಜ್ವಾನಾ, ಎಸ್.ಎ.ಶಿವಪುತ್ರ, ಮಾಜಿ ಸದಸ್ಯ ಅಬ್ದುಲ್ ಖರೀಂ ಸೇರಿದಂತೆ ಇತರರಿದ್ದರು.

# ಕಾಂಗ್ರೇಸ ಪಕ್ಷ ಜನಹಿತ ಕಾರ್ಯಗಳಲ್ಲಿ ಸದಾ ಮುಂದೆ



ಮಲ್ಲಮ್ಮ ನುಡಿ ವಾರ್ತೆ

ಕೆಂಭಾವಿ:ಜು.26:ಜಿಲ್ಲಾ ಕಾಂಗ್ರೆಸ್ ಮತ್ತು ಕೆಂಭಾವಿ ಹೋಬಳಿ ಕಾಂಗ್ರೆಸ್ ಗೆ ಆಯ್ಕೆಯಾದ ಪದಾಧಿಕಾರಿಗಳಿಗೆ " ಮೆಕ್ಕಾ ಮಸ್ಜಿದ್ ಕಮಿಟಿ" ವತಿಯಿಂದ ಅಭಿನಂದನಾ ಸಮಾರಂಭವನ್ನು ಪಟ್ಟಣದ ಮೆಕ್ಕಾ ಚೌಕ್ ನಲ್ಲಿ ಏರ್ಪಡಿಸಲಾಗಿತ್ತು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಕಾಂಗ್ರೆಸ್ ಅಲ್ಪಸಂಖ್ಯಾತರ ಹೋಬಳಿ ಘಟಕದ ಅಧ್ಯಕ್ಷ ಲಾಡ್ಲೆ ಪಟೇಲ್, ಹೆಗನದೊಡ್ಡಿ ಕಾಂಗ್ರೆಸ್ ಪಕ್ಷವು ಸಾಮಾಜಿಕ ನ್ಯಾಯ, ಶಿಕ್ಷಣ, ಮತ್ತು ಸಮುದಾಯ ವಿಕಾಸಕ್ಕಾಗಿ ನಿರಂತರವಾಗಿ ಕೆಲಸ ಮಾಡುತ್ತಿದೆ. ಈಗಾಗಲೇ ಪಂಚ ಗ್ಯಾರಂಟಿ ಯೋಜನೆಗಳು ಜಾರಿಯಲ್ಲಿದೆ ಹಲವಾರು ಬಡ ಜನರಗೆ ಗ್ಯಾರಂಟಿ ಯೋಜನೆಗಳು ಅನುಕೂಲವಾಗಿದೆ. "ಜಾತಿ ಮತ್ತು ಧರ್ಮವು ಮನೆಯೊಳಗಿನ ಆಚರಣೆಯಾಗಲಿ" ಎಂಬ ನೀತಿಯನ್ನು ಸಿದ್ದರಾಮಯ್ಯ ಅವರು ಪ್ರತಿಪಾದಿಸಿದ್ದಾರೆ ಎಂದು ಹೇಳಿದರು.

ನೂತನ ಪದಾಧಿಕಾರಿಗಳಾಗಿ ಆಯ್ಕೆಯಾದ ಮಹಿಪಾಲರೆಡ್ಡಿ ಡಿಗ್ಗಾವಿ( ಯಾದಗಿರಿ ಜಿಲ್ಲಾ ಬ್ಲಾಕ ಕಾಂಗ್ರೆಸ್ ಉಪಾಧ್ಯಕ್ಷ) ಲಾಡ್ಲೆ ಪಟೇಲ್, ಹೆಗನದೊಡ್ಡಿ (ಅಲ್ಪಸಂಖ್ಯಾತರ ಹೋಬಳಿ ಘಟಕದ ಕೆಂಭಾವಿ) ಶಿವರಾಜ್ ಬುದೂರ್ (ಯಾದಗಿರಿ ಜಿಲ್ಲಾ ಬ್ಲಾಕ್ ಕಾಂಗ್ರೆಸ್ ಪ್ರ. ಕಾರ್ಯದರ್ಶಿ) ರಹೇಮಾನ್ ಪಟೇಲ್ ಯಲಗೋಡ (ಪುರಸಭೆ ಅಧ್ಯಕ್ಷರು ಕೆಂಭಾವಿ) ಸಾಹೇಬ್ ಲಾಲ್ ಆಂದೇಲಿ (ಕೆಂಭಾವಿ ಹೋಬಳಿ ಬ್ಲಾಕ್ ಕಾಂಗ್ರೆಸ್ ಕಾರ್ಯಧ್ಯಕ್ಷ)

ಇವರನ್ನು ಸನ್ಮಾನಿಸಿ ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಖಾಜಾಪಟೇಲ್, ಕಾಚೂರ್. ಪುರಸಭೆ ಸದ್ಯಸರಾದ ಆರೀಫ್ ಹುಸೇನ್ ಖಾಜಿ, ರಾಘವೇಂದ್ರ ದೇಶಪಾಂಡೆ, ಊರಿನ ಮುಖಂಡರಾದ ಸಯೇದ್ ಹುಸೇನ್ ಮೌಲಾನಾ, ಗಾಲಿಬ್ ಖಾನ್ ಇನಾಮದಾರ, ರಫೀಕ್ ವಡಕೇರಿ, ರಂಗಪ್ಪ ವಡ್ಡರ, ಶಫೀಕ್ ದಫೇದಾರ್, ಹನೀಫ್ ಸಾಸನೂರ್, ಜಿಲ್ಲಾನಿ ನಾಶಿ, ಆರೀಫ್ ಸಾಸನೂರ್ ಇತರರು ಉಪಸ್ಥಿತರಿದ್ದರು.

# ಅಣಿವೀರಭದ್ರೇಶ್ವರ ಪುರಾಣ ಗ್ರಂಥದ ಭವ್ಯ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು 26: ಹಲವು ದಶಕಗಳಿಂದ ನೆನೆಗುದಿಗೆ ಬಿದ್ದ ಅಣಿವೀರಭದ್ರೇಶ್ವರದೇವರಪುರಾಣ ಗ್ರಂಥ ರಚಿಸಿ ಭಾಮಿನಿ ಷಟ್ಪದಿಯಲ್ಲಿ ಬರೆದು ಲೋಕಾರ್ಪಣೆಗೊಳಿಸಿದ್ದು ಇತಿಹಾಸಪುಟದಲ್ಲಿ ಅಚ್ಚಳಿಯದೆ ಮಾಡಿರುವ ಕಾರ್ಯಕ್ರಮ ಇದಾಗಿದೆ ಎಂದು ಮಾಜಿ ಸಂಸದ ಬಸವರಾಜ ಪಾಟೀಲ ಸೇಡಂ ಹೇಳಿದರು.

ಕಾಳಗಿ ಸಮೀಪದ ಕೋರವಾರ ಅಣಿವೀರಭದ್ರೇಶ್ವರದೇವಸ್ಥಾನದಲ್ಲಿ ದೇವರ ಪುರಾಣ ಪುಸ್ತಕ ಲೋಕಾರ್ಪಣೆಗೊಳಿಸಿ ಮಾತನಾಡಿದರು. ಮಂಗಲ ಕಾರ್ಯಗಳು ನಡೆಯಬೇಕಾದರೆ ಶೈವಪರಂಪರೆಯಲ್ಲಿ ವೀರಭದ್ರೇಶ್ವರ ದೇವರಿಗೆ ಮೊದಲು ಸ್ಮರಿಸುತ್ತೇವೆ. ಮುಖ್ಯವಾಗಿ ಅಣಿವೀಭದ್ರಶ್ವರನಿಗೆ ಭಕ್ತಿಯಿಂದ ಹಣೆಮಣಿದರೆ ಕಷ್ಟ ಕಾರ್ಪಣ್ಯಗಳು ದೂರವಾಗಿತ್ತವೆ. ಗುರಯ್ಯ ದಾನಯ್ಯ ಮಡಪತ್ತಿ ರವರು ರಚಿಸಿರುವ ಪುರಾಣ ಗ್ರಂಥ ಇತಿಹಾಸದಲ್ಲಿ ಅಚ್ಚಳಿಯದೆ ಉಳಿಯುವ ಕಾರ್ಯ ಇದಾಗಿದೆ ಎಂದರು. ಜಿಲ್ಲಾ ಕಸಾಪ ಅಧ್ಯಕ್ಷ ವಿಜಕುಮಾರ ಪಾಟೀಲ ತೇಗತಿಪ್ಪಿ ಮಾತನಾಡಿದರು.

ಇದಕ್ಕೂ ಮೊದಲು ಮುಖ್ಯ ದ್ವಾರದಿಂದ ಅಣಿವೀರಭದ್ರೇಶ್ವರ ಸನ್ನಿಧಿಯ ವರೆಗೆ ರಜತ ಹೊತ್ತ ಅಂಬಾರಿಯ ಮೇಲೆ ಪುರಾಣ ಗ್ರಂಥವಿಟ್ಟು ಭವ್ಯ ಮೆರವಣಿಗೆ ಮಾಡಲಾಯಿತು. ಕುಂಭ ಕಳಶ ಹೊತ್ತ ಮಹಿಳೆಯರು ಗಜರಾಜನ ಪಾದಕ್ಕೆ ಜಲಾಭಿಷೇಕ ಮಾಡುವ ಮೂಲಕ ಸ್ವಾಗತಿಸಿದರು.

ಪ್ರಧಾನ ಅರ್ಚಕ ಧನಂಜಯ ಹಿರೇಮಠ, ಅಹ ಅರ್ಚಕ ಅಂಬರೀಶ್ ಹಿರೇಮಠ, ಪಟ್ಟದ ಪುರವಂತ, ಸೋಮೇಶ ಕಂಠಿ, ಬಸವರಾಜ ಕಂಠಿ, ಪರಮ ಭಕ್ತ ಶಿವುಪುತ್ರಪ್ಪ ಹಲಚೇರಿ, ಗುರುರಾಜ ಇಂಗೀನಶೆಟ್ಟಿ ಶಹಬಾದ, ಅಣಿವೀರೇಶ್ ಹಲಚೇರಿ, ಗ್ರಂಥ ಧಾನಿ ಸೋಮಶೇಖರ ಅಣ್ಣೆಪನವರ, ಮಲ್ಲಿಕಾರ್ಜುನ ಗೊಳ, ಶರಣು ಗೋನಾಯಕ, ಶಾಂತಬಾಯಿ ಅಣ್ಣೆಮ್ಮಗೊಳ, ಶಸಿಕಲಾ ಸೋಲಾಪುರ, ರೇವಣಸಿದ್ದಯ್ಯ ಹೊಟೆಲ, ಅಣವೀರಯ್ಯ ಕಾಳಗಿ, ಬಸವರಾಜ ಪೂಜಾರಿ ಶಿವದಾದ ನಾಗತಾಣ ಇದ್ದರು. ಡಿವೈಎಸ್ಪಿ ಶಂಕರಗೌಡ ಪಾಟೀಲ, ಸಿಪಿಐ ಜಗದೇವಪ್ಪ, ಪಿಎಸ್ಐ ಗೌತಮ ಗುತ್ತೇದಾರ, ತಿಮ್ಮಯ್ಯ ಬಿಕೆ ರವರ ನೇತೃತ್ವದಲ್ಲಿ ಕಾರ್ಯಕ್ರಮಕ್ಕೆ ಬಿಗಿಬಂದೋಬಸ್ತ್

ಒದಗಿಸಿದರು. ಶಿವರಾಜ ಅಂಡಗಿ ನಿರೂಪಿಸಿದರು. ಮಹಾರುದ್ರ ಮುಗಳನಾಗವ ಸ್ವಾಗತಿಸಿದರು. ಶರಣುಗೋನಾಯಕ ವಂದಿಸಿದರು.

# ಜಿಎನ್‌ಡಿ ವಿದ್ಯಾರ್ಥಿನಿ ಪೂರ್ವಿ ಜೂನಿಯರ್ ಮಿಸ್ ಇಂಡಿಯಾ ಫಿನಾಲೆಗೆ ಆಯ್ಕೆ-ಸನ್ಮಾನ






ಬೀದರ. ಜು. 26 : ನಗರದ ಗುರು ನಗರ ಕಾಲೋನಿಯಲ್ಲಿರುವ ಗುರು ನಾನಕ ದೇವ ಪಬ್ಲಿಕ್ ಶಾಲೆ ಎಂಟನೇತರಗತಿಯ ಪ್ರತಿಭಾನ್ವಿತ ವಿದ್ಯಾರ್ಥಿನಿ ಪೂರ್ವಿ 2025ರ ಜೂನಿಯರ್ ಮಿಸ್ ಇಂಡಿಯಾ ಸ್ಪರ್ಧೆಯ ಗ್ರ್ಯಾಂಡ್ ಫಿನಾಲೆಗೆ ಆಯ್ಕೆಯಾಗಿ ಶಾಲೆ ಹಾಗೂ ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ಪ್ರತಿಷ್ಠಿತ ರಾಷ್ಟ್ರೀಯ ಮಟ್ಟದ ಸ್ಪರ್ಧೆಯು ದೆಹಲಿ, ಮುಂಬೈ, ಹೈದ್ರಾಬಾದ, ಚೆನ್ನೈ ಮತ್ತು ಬೆಂಗಳೂರು ಸೇರಿದಂತೆ ಭಾರತದಾದ್ಯಂತ 10 ಪ್ರಮುಖ ನಗರಗಳಲ್ಲಿ ಆಡಿಷನ್‌ಗಳನ್ನು ನಡೆಸಿತು. ವಯಸ್ಸು 11 ರಿಂದ 13 ವರ್ಷದ ವರೆಗೆ, ಪ್ರತಿ ನಗರದಿಂದ ಕೇವಲ ಆರು ಅತ್ಯುತ್ತಮ ಭಾಗವಹಿಸುವವರನ್ನು ಮಾತ್ರ ಅಂತಿಮ ಪರೀಕ್ಷೆಗೆ ಆಯ್ಕೆ ಮಾಡಲಾಯಿತು. ಪೂರ್ವಿ ಹೈದ್ರಾಬಾದ್‌ನಲ್ಲಿ ತನ್ನ ಆಡಿಷನ್‌ನನ್ನು ಕೊಟ್ಟು ಗಮನಾರ್ಹ ಆತ್ಮವಿಶ್ವಾಸ, ಪ್ರತಿಭೆ ಪ್ರದರ್ಶಿಸಿ ಅಂತಿಮ ಸುತ್ತಿನಲ್ಲಿ ಆಯ್ಕೆಯಾಗಿ ಸ್ಥಾನವನ್ನುಗಳಿಸಿ ಗಮನ ಸೆಳೆದರು.

ಜಿ.ಎನ್.ಡಿ.ಪಿ. ಶಾಲೆಯ ಅಧ್ಯಕ್ಷೆ ಡಾ. ರೇಷ್ಮಾ ಕೌರ್ ಅವರು ಪೂರ್ವಿಗೆ ಅಭಿನಂದನೆ ಸಲ್ಲಿಸಿ ಶಾಲೆಯಲ್ಲಿ ನಡೆದ ವಿಶೇಷ ಸಮಾರಂಭದಲ್ಲಿ ಸನ್ಮಾನಿಸಿದರು. ಅವರ ಕಠಿಣ ಪರಿಶ್ರಮ ಮತ್ತು ದೃಢಸಂಕಲ್ಪವನ್ನು ಶ್ಲಾಘಿಸಿದರು ಮತ್ತು ಯುವ ಕನಸುಗಾರರಿಗೆ ಸ್ಫೂರ್ತಿ ಎಂದು ಬಣ್ಣಿಸಿದರು.

ಪೂರ್ವಿ ಸಾಧನೆಗೆ ಪ್ರಾಂಶುಪಾಲೆ ಶ್ರೀಮತಿ ಶರ್ಲಿ ಶೀಬಾ ಕೂಡಾ ಹೆಮ್ಮೆ ವ್ಯಕ್ತಪಡಿಸಿ ಹೆತ್ತವರನ್ನು ಹೆಮ್ಮೆ ಪಡುವಂತೆ ಮಾಡುವುದಲ್ಲದೆ ನಮ್ಮ ಶಾಲೆಗೆ ದೊಡ್ಡ ಗೌರವನ್ನು ತಂದಿದ್ದಾಳೆ, ಆಕೆಯ ಸಮರ್ಪಣೆ ಮತ್ತು ಪರಿಶ್ರಮ ಶ್ಲಾಘನೀಯ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪೂರ್ವಿಯ ಪೋಷಕರಾದ ಸಂಜಯಕುಮಾರ ಬಿರಾದಾರ, ಹೇಮಾ, ಅಕ್ಕಂದಿಯರುಗಳಾದ ವೈಭವಿ ಮತ್ತು ವೈಷ್ಣವಿ ಉಪಸ್ಥಿತರಿದ್ದರು.

# ಮುಧೋಳ ಗ್ರಾಮದಲ್ಲಿ ವಿಶ್ವ ಧರ್ಮ ಪ್ರವಚನ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜು.26:ತಾಲೂಕಿನ ಮುಧೋಳ ಬಿ ಗ್ರಾಮದಲ್ಲಿ ಗುರುಬಸವೇಶ್ವರ ಅನುಭವ ಮಂಟಪ ಮುಧೋಳ ಬಿ ಯಲ್ಲಿ ಶ್ರಾವಣ ಮಾಸದ ನಿಮಿತ್ಯವಾಗಿ ವಿಶ್ವಧರ್ಮ ಪ್ರವಚನ ಪರಮ ಪೂಜ್ಯ ಬಸವಮನಿ ಮಾತಾಜಿ ಅವರ ದಿವ್ಯ ಸಾನಿಧ್ಯದಲ್ಲಿ ಉದ್ಘಾಟನೆ ಮಾಡಿ ಮಾತನಾಡಿದರು.

ಗುರುನಾಥ ವಟಗೆ ಮಾತನಾಡಿ ಶ್ರಾವಣ ಮಾಸ ಲಿಂಗಾಯತ ಧರ್ಮೀಯರಿಗೆ ಬಹಳ ಪವಿತ್ರವಾದ ದಿನಗಳು ವರ್ಷದ 11 ತಿಂಗಳು ಯಾವುದೇ ಕೆಲಸದಲ್ಲಿದ್ದರೂ ಒಂದು ತಿಂಗಳು ಆ ಸೃಷ್ಟಿಕರ್ತ ಪರಮಾತ್ಮನ ವಿಶ್ವಗುರು ಬಸವಣ್ಣನವರ ಸೇವೆಯಲ್ಲಿ ನಮ್ಮನ್ನು ನಾವು ತೊಡಗಿಸಿಕೊಂಡು ನಮ್ಮ ಜೀವನವನ್ನು ಪವಿತ್ರವಾಗಿ ಆದರ್ಶಮಯವಾಗಿ ಮಾಡಿಕೊಳ್ಳುವ ಉತ್ತಮವಾದ ದಿನಗಳೆಂದು ಹೇಳಿದರು. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿರುವ ಪರಮ ಪೂಜ್ಯ ಬಸವಮನಿ ಮಾತಾಜಿ ಅವರು ಶ್ರವಣ ತಿಂಗಳ ಲಿಂಗಾಯತ ಧರ್ಮರಿಗೆ ಪವಿತ್ರವಾದ ದಿನಗಳು ಈ ಪವಿತ್ರ ದಿನಗಳಲ್ಲಿ ಇಂತಹ ಪ್ರವಚನದ ಮುಖಾಂತರ ತಮ್ಮ ಮನಸ್ಸು ಪರಿಶುದ್ಧಗೊಳಿಸಿಕೊಳ್ಳಬೇಕೆಂದು ಆಶೀರ್ವಚನ ನುಡಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಸುನಿಲ ಹಲಬುರ್ಗಿ ಯುವ ಮುಖಂಡರಾದ ಸಚಿನ ಕತ್ತೆ ಗ್ರಾಮದ ಹಿರಿಯ ಜೀವಿಗಳದ ಸಂಗಯ್ಯಸ್ವಾಮಿ ಹಾಗೂ ಇಂದಿನ ಭಕ್ತಿ ಸೇವೆಯನ್ನು ಗೆದ್ದಿರುವ ತನುಜಾ ಸೋಮನಾಥ ಸ್ವಾಮಿ ಕಲಾವತಿ ವೀರಯ್ಯಸ್ವಾಮಿ, ಡಾ. ಆನಂದ ಹಾಗೂ ಗುರುಬಸವೇಶ್ವರ ಅನುಭವ ಮಂಟಪದ ಅಧ್ಯಕ್ಷರಾದ ನಾಗಯ್ಯಸ್ವಾಮ ಬಸವರಾಜ ಸೋಲಾಪುರೆ ವಿಜಯಕುಮಾರ ಹೊಸಕಂಡೆ ನಾಗನಾಥ ತೆ-ಊಂಡರಿ ಅಪ್ಪರಾವ್ ಪಾಟೀಲ್ ಕಾಶಿನಾಥ ಭವ್ರ ರೇವಣಪ್ಪ ಕುಂಬಾರ ರವೀಂದ್ರ ಕಲಬುರ್ಗಿ ತೋರಣ ಬಸವರಾಜ ಒಂಟೆ ನರೇಂದ್ರ ಒಟಿಗೆ ಶರಣಯ್ಯ ಸ್ವಾಮಿ ಸುನಿತಾ ಸೋಲಾಪುರಿ ಮಹಾದೇವಿ ಸ್ವಾಮಿ ಜೈ ಶ್ರೀ ಕುಂಬಾರ ಮಲ್ಲಮ್ಮ ಕುಂಬಾರ ಇನ್ನು ಸುತ್ತಮುತ್ತಲಿನ ಹಳ್ಳಿಗಳ ಬಸವ ಅಭಿಮಾನಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದು ವಿಶೇಷ ಸಭಾ ಸಂಚಲನೆ ನಾಗನಾಥ ಶಂಕು ಮಾಡಿದರು. ಸ್ವಾಗತ ಬಸವರಾಜ ಕೆಳ್ಗೆ ಅವರು ನಡೆಸಿಕೊಟ್ಟರು ವಂದನಾರ್ಪಣೆ ಶಿವ್ಕುಮಾರ ಕುಂಬಾರ ನಡೆಸಿದರು.

# ಭಿಕ್ಷಾಟನೆ: ರೈಲ್ವೆ ನಿಲ್ದಾಣದಲ್ಲಿ ಜಾಗೃತಿ




ಬೀದರ.ಜು.26:ರಾಜ್ಯವನ್ನು ಭಿಕ್ಷಾಟನೆ ಮುಕ್ತಗೊಳಿಸುವ ರಾಜ್ಯ ಸರ್ಕಾರದ ಸಂಕಲ್ಪದ ಭಾಗವಾಗಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ರೈಲ್ವೆ ಪೊಲೀಸರ ಸಹಯೋಗದೊಂದಿಗೆ ಇಲ್ಲಿಯ ರೈಲ್ವೆ ನಿಲ್ದಾಣದಲ್ಲಿ ಶನಿವಾರ ಪ್ರಯಾಣಿಕರಲ್ಲಿ ಭಿಕ್ಷಾಟನೆ ಕುರಿತು ಜಾಗೃತಿ ಮೂಡಿಸಲಾಯಿತು.

ಕಾನೂನು ಪ್ರಕಾರ ಭಿಕ್ಷೆ ಬೇಡುವುದು ಅಪರಾಧವಾಗಿದೆ ಎಂದು ಇಲಾಖೆಯ ಬೀದರ್ ತಾಲ್ಲೂಕು ಸಹಾಯಕ ನಿರ್ದೇಶಕ ಅನಿಲಕುಮಾರ ಮೇಲ್ದೊಡ್ಡಿ ಹೇಳಿದರು. ರಾಜ್ಯವನ್ನು ಸಂಪೂರ್ಣ ಭಿಕ್ಷಾಟನೆ ಮುಕ್ತಗೊಳಿಸಲು ಹಾಗೂ ಭಿಕ್ಷುಕರನ್ನು ಸ್ವಾವಲಂಬಿಯಾಗಿಸಲು ರಾಜ್ಯ ಸರ್ಕಾರ ದಿಟ್ಟ ಹೆಜ್ಜೆ ಇರಿಸಿದ್ದು, ಪ್ರಯಾಣಿಕರು ಭಿಕ್ಷುಕರು ಕಂಡು ಬಂದರೆ ಟೋಲ್ ಫ್ರೀ ಸಂಖ್ಯೆ 10581 ಅಥವಾ ಸಹಾಯವಾಣಿ ಸಂಖ್ಯೆ 9482300400ಗೆ ಗೆ ಸಂಪರ್ಕಿಸಬೇಕು ಎಂದು ಮನವಿ ಮಾಡಿದರು.

ಇಲಾಖೆಯ ಹಾಸ್ಟೆಲ್ ವಾರ್ಡನ್ ನಿವರ್ತಿ ಸಜ್ಜನ್, ಧನರಾಜ, ರಾಜಶೇಖರ, ಭೀಮರಾವ್, ಸಿಬ್ಬಂದಿ ಹಣಮಂತ ಸ್ವಾಮಿ ಮತ್ತಿತರರು ಇದ್ದರು.

# ಫಸಲ್ ವಿಮೆ ನೋಂದಣಿಗೆ ಮನವಿ



ಬೀದರ. ಜು. 26 : ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಮಾಡಿದ ಬೆಳೆಗಳಿಗೆ ಜಿಲ್ಲೆಯ ಎಲ್ಲ ರೈತರು ಬಾಂಧವರು ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ನೋಂದಣಿ ಮಾಡಿಸಿಕೊಳ್ಳಬೇಕೆಂದು ಜಿಲ್ಲಾ ಬಿಜೆಪಿ ರೈತ ಮೋರ್ಚಾ ಅಧ್ಯಕ್ಷರಾದ ಶಿವರಾಜ ಅಲ್ಮಾಜೆ ಮನವಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಪ್ರತಿ ವರ್ಷದಂತೆ ಈ ವರ್ಷವೂ ರೈತರು ಬೆಳೆ ವಿಮೆ ಮಾಡಿಸಬೇಕು. ಬೆಳೆ ವಿಮೆ ನೋಂದಣಿಗೆ ಜುಲೈ 31 ಅಂತಿಮ ದಿನಾಂಕವಾಗಿದ್ದು, ರೈತರು ಸಂಬಂಧಿಸಿದ ಬ್ಯಾಂಕ್, ಪಿಕೆಪಿಎಸ್,

ಗ್ರಾಮ-ಒನ್ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ನೋಂದಣಿ ಮಾಡಿಸಬಹುದಾಗಿದೆ. ಅತಿವೃಷ್ಟಿ, ಅನಾವೃಷ್ಟಿ, ಪ್ರಕೃತಿ ವಿಕೋಪಗಳಿಂದ ತಮ್ಮ ಬೆಳೆ ನಷ್ಟವಾಗಿ, ಆರ್ಥಿಕ ಸಂಕಷ್ಟ ಅನುಭವಿಸುವುದನ್ನು ತಪ್ಪಿಸಿಕೊಳ್ಳಲು ಬೆಳೆ ವಿಮೆ ಯೋಜನೆ ಸಹಕಾರಿಯಾಗಿದ್ದು, ಜಿಲ್ಲೆಯ ಎಲ್ಲಾ ರೈತರು ಬೆಳೆ ವಿಮೆ ಯೋಜನೆಯ ಸದುಪಯೋಗ ಪಡೆಯಬೇಕೆಂದು ತಿಳಿಸಿದ್ದಾರೆ.

# ಸತತ ಮಳೆ: ಮುಂಜಾಗ್ರತೆ ವಹಿಸಲು ಅಧಿಕಾರಿಗಳಿಗೆ ಬೆಲ್ದಾಳೆ ಸೂಚನೆ



ಬೀದರ್:ಜು.26: ಕಳೆದ ನಾಲ್ಕೈದು ದಿನಗಳಿಂದ ಕ್ಷೇತ್ರದ ಬಹುತೇಕ ಕಡೆ ನಿರಂತರ ಮಳೆಯಾಗುತ್ತಿದೆ. ಮಳೆಯಿಂದ ಜನ-ಜಾನುವಾರುಗಳಿಗೆ ತೊಂದರೆಯಾಗದಂತೆ ಅಧಿಕಾರಿಗಳು ನಿಗಾ ಇರಿಸಿ ತುರ್ತು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕ ಸಹ ಮುನ್ನೆಚ್ಚರಿಕೆ ವಹಿಸಬೇಕು ಎಂದು ಬೀದರ್ ದಕ್ಷಿಣ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಹೇಳಿದ್ದಾರೆ.

ಅಂಗನವಾಡಿ, ಶಾಲಾ-ಕಾಲೇಜು, ಸರ್ಕಾರಿ ವಸತಿ ಶಾಲೆಗಳಲ್ಲಿನ ನೀರು ಸಂಗ್ರಹ ಟ್ಯಾಂಕ್‌ಗಳನ್ನು ಸರಿಯಾದ ರೀತಿಯಲ್ಲಿ ನಿಯೋಜಿತ ಸಿಬ್ಬಂದಿ ಸ್ವಚ್ಛ ಮಾಡುತ್ತಿದ್ದಾರೆಯೇ, ಇಲ್ಲವೇ ಎನ್ನುವ ಬಗ್ಗೆ ಮೇಲಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಬೇಕು. ಗ್ರಾಮ ಪಂಚಾಯಿತಿ ಅಧಿಕಾರಿಗಳು ಗ್ರಾಮಗಳಿಗೆ ನೀರು ಸರಬರಾಜು ಮಾಡುವ ಟ್ಯಾಂಕ್ ಹಾಗೂ ಸುತ್ತಮುತ್ತ ಶುಚಿತ್ವ ಕಾಪಾಡಬೇಕು. ನೀರು ಸರಬರಾಜು ಪೈಪ್ ಸರಿಯಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಪರಿಶೀಲನೆ ಮಾಡಬೇಕು. ನೀರಿನ ಶುದ್ಧತೆಗೆ ಪ್ರಥಮ ಆದ್ಯತೆ ನೀಡುವಂತೆ ಸೂಚಿಸಿದ್ದಾರೆ.

ಸತತ ಮಳೆ ಸುರಿಯುತ್ತಿರುವ ಹಿನ್ನೆಲೆಯಲ್ಲಿ ಶಾಲಾ, ಕಾಲೇಜುಗಳಲ್ಲಿ ಶಿಥಿಲಗೊಂಡ ಕೊಠಡಿಯಲ್ಲಿ ಕುಳಿತು ಪಾಠ ಮಾಡಬಾರದು. ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಂತಹ ಕೊಠಡಿಗಳ ಪರಿಶೀಲನೆ ನಡೆಸಿ ವರದಿ ಸಲ್ಲಿಸಬೇಕು. ಅತಿವೃಷ್ಟಿಗೆ ಮನೆಗಳು ಶಿಥಿಲ, ಮನೆ ಕುಸಿತವಾಗಬಹುದು. ಹೀಗಾಗಿ ಜನರು ಶಿಥಿಲ ಕೋಣೆ ಬಳಸಬಾರದು. ಇಂತಹ ಶಿಥಿಲ ಮನೆಗಳ ಬಗ್ಗೆಯೂ ಕಂದಾಯ ಇಲಾಖೆ ಅಧಿಕಾರಿಗಳು ತಪಾಸಣೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಬೇಕು. ಈಗ ಸುರಿದ ಮಳೆ ಬೆಳೆಗೆ ಸಾಕಷ್ಟು ಬೂಸ್ಟ್ ನೀಡಿದೆ. ಆದರೂ ಕೆಲವು ಕಡೆಗಳಲ್ಲಿ ಅತಿವೃಷ್ಟಿಯಿಂದ ಹಾನಿಯೂ ಆಗಿರುವ ವರದಿ ಬರುತ್ತಿವೆ. ಈ ಬಗ್ಗೆ ಸಮಗ್ರ ವರದಿ ಸಿದ್ಧಪಡಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.


ಮಳೆ ಬರುವ ಸಂದರ್ಭದಲ್ಲಿ ಜನರು ತಮ್ಮ ಆರೋಗ್ಯದತ್ತ ಹೆಚ್ಚಿನ ಗಮನ ಕೊಡಬೇಕು. ವಿಶೇಷವಾಗಿ ಮಕ್ಕಳ ಆರೋಗ್ಯದ ಮೇಲೆ ನಿಗಾ ಇರಿಸಬೇಕು. ಬಿಸಿ ಬಿಸಿ ಆಹಾರ ಹಾಗೂ ಹೆಚ್ಚು ತರಕಾರಿ ಸೇವಿಸಬೇಕು. ಸ್ವಚ್ಛತೆಯನ್ನು ಕಾಯ್ದುಕೊಳ್ಳಬೇಕು, ಶುದ್ಧ ಕುಡಿಯುವ ನೀರಿನ ಸೇವನೆಗೆ ಆದ್ಯತೆ ನೀಡಬೇಕು. 5 ವರ್ಷದ ಒಳಗಿನ ಮಕ್ಕಳಿಗೆ ಅತಿಸಾರ ಭೇದಿ ಬರದಂತೆ ತಡೆಯಲು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಶುದ್ಧ ನೀರು ಬಳಸಬೇಕು ಅಥವಾ ನೀರು ಕಾಯಿಸಿ ಆರಿಸಿ ಕುಡಿಯಬೇಕು.

ಆರೋಗ್ಯ ಇಲಾಖೆ ಅಧಿಕಾರಿಗಳು, ಸರ್ಕಾರಿ ಆಸ್ಪತ್ರೆ ವೈದ್ಯರು ಸ್ವಚ್ಛತೆ ಕುರಿತು

ಜನರಲ್ಲಿ ಜಾಗೃತಿ ಮೂಡಿಸಬೇಕು. ವಿದ್ಯುತ್ ಉಪಕರಣ, ತಂತಿ ಬಗ್ಗೆ ಎಚ್ಚರ

ವಹಿಸಬೇಕು. ಜಮೀನಿನಲ್ಲಿ ಹಾಗೂ ಅರಣ್ಯ ಪ್ರದೇಶದಲ್ಲಿ ಹಸುಗಳು, ಕುರಿ ಮೇಕೆ ಮೇಯಿಸುವಾಗ ವಿದ್ಯುತ್ ಕಂಬದಿಂದ ದೂರ ಇರಬೇಕು ಹಾಗೂ ಮಳೆ ಬರುವ ಸಂದರ್ಭದಲ್ಲಿ ಜಮೀನಿನಲ್ಲಿ ಮರದ ಕೆಳಗೆ ನಿಲ್ಲಬಾರದು ಸಿಡಿಲು ಬಡಿಯುವ ಸಂಭವ ಇರುತ್ತದೆ ಎಚ್ಚರ ವಹಿಸಬೇಕು ಎಂದು ಸೂಚಿಸಿದ್ದಾರೆ.

# ಸಿದ್ಧಾರೂಢ ಮಠ: ೩೦ ರಿಂದ ಪ್ರವಚನ



ಬೀದರ. ಜು. 26 : ಶ್ರಾವಣ ಪ್ರಯುಕ್ತ ಇಲ್ಲಿಯ ಸಿದ್ಧಾರೂಢ ಮಠದಲ್ಲಿ ಜುಲೈ 30 ರಿಂದ ಆಗಸ್ಟ್ 23 ರ ವರೆಗೆ ಪ್ರವಚನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮಠದ ಪೀಠಾಧಿಪತಿ ಡಾ. ಶಿವಕುಮಾರ ಸ್ವಾಮೀಜಿ ಅವರು ಪ್ರತಿ ದಿನ ಸಂಜೆ 7 ರಿಂದ 8 ರ ವರೆಗೆ ಶ್ರೀಮನ್ನಿಜಗುಣ ಶಿವಯೋಗಿ ವಿರಚಿತ 'ಕೈವಲ್ಯ ಪದ್ಧತಿ' ಗ್ರಂಥದ 'ನೀತಿ ಕ್ರಿಯಾಚಾರ್ಯಸ್ಥಲ' ಕುರಿತು ಪ್ರವಚನ ನೀಡಲಿದ್ದಾರೆ.

ಶ್ರೀಗಳ ಸಾನಿಧ್ಯದಲ್ಲಿ ಪ್ರತಿ ದಿನ ಬೆಳಿಗ್ಗೆ 7ಕ್ಕೆ ಸಿದ್ಧಾರೂಢರ ಮೂರ್ತಿಗೆ ರುದ್ರಾಭಿಷೇಕ, ಶ್ರೀಗಳ ಪಾದಪೂಜೆ, ಸಂಜೆ 6 ರಿಂದ 7 ರ ವರೆಗೆ ಭಜನೆ ಜರುಗಲಿದೆ.

ಭಕ್ತರು ಶ್ರಾವಣದ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸದ್ಗುರುವಿನ ಕೃಪೆಗೆ ಪಾತ್ರರಾಗಬೇಕು ಎಂದು ಮಠದ ಆಡಳಿತಾಧಿಕಾರಿ ಡಾ. ಹಾವಗಿರಾವ್ ಮೈಲಾರೆ ಕೋರಿದ್ದಾರೆ.

# ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಜಲ ಜೀವನ್ ಮಿಷನ್ ಕಾಮಗಾರಿಗಳ ಪರಿಶೀಲನೆ



ಬೀದರ. ಜು.26 : ಬೀದರ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ಅವರು ಇತ್ತೀಚಿಗೆ ಅಲಿಯಾಬಾದ(ಜೆ) ಗ್ರಾಮ ಪಂಚಾಯತಿಯ ಅಲಿಯಾಬಾದ(ಜೆ) ಗ್ರಾಮ ಹಾಗೂ ಚೋಂಡಿ ಗ್ರಾಮದ ಜಲ ಜೀವನ ಮೀಷನ ಯೋಜನೆಯ ಎಕಗ್ರಾಮ ಕುಡಿಯುವ ನೀರಿನ ಯೋಜನೆ ಕಾಮಗಾರಿಗಳನ್ನು ಪರಿಶೀಲಿಸಿದರು.

ಈ ಕಾಮಗಾರಿಗಳು ಈಗಾಗಲೇ ಹರ್ ಘರ್ ಜಲ್ ಗ್ರಾಮವೆಂದು ಘೋಷಿಸಿ ಗ್ರಾಮ ಪಂಚಾಯತಿಗಳಿಗೆ ಹಸ್ತಾಂತರಿಸಲಾಗಿದೆ. ಸದರಿ ಯೋಜನೆಯ ಕಾಮಗಾರಿಗಳ ಕಾರ್ಯಚರಣೆ ಮತ್ತು ನಿರ್ವಹಣೆಯು ಗ್ರಾಮ ಪಂಚಾಯತಿಯಿಂದ ನಿರ್ವಹಿಸಿ ಗ್ರಾಮದ ಪ್ರತಿಯೊಬ್ಬ ನಾಗರಿಕರಿಗೆ ಶುದ್ದ ಕುಡಿಯುವ ನೀರು ಪೂರೈಸಲು ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಅಲಿಯಾಬಾದ ಜೆ ಅವರಿಗೆ ತಿಳಿಸಿದರು.

ಬೀದರ ತಾಲೂಕಿನ ಕೋಳಾರ ಗ್ರಾಮ ಪಂಚಾಯತಿಯ ಕೋಳಾರ(ಬಿ) ಗ್ರಾಮ ಹಾಗೂ ಮಂದಕನಳ್ಳಿ ಗ್ರಾಮ ಪಂಚಾಯತಿಯ ಕಂಗನಕೋಟ ಹಾಗೂ ನಾಗೋರಾ ಗ್ರಾಮಪಂಚಾಯತ್‌ನ ಸಾತೋಳಿ ಗ್ರಾಮಗಳ ಕಾಮಗಾರಿಗಳು ಇಗಾಗಲೇ ಹರ್ ಘರ್ ಜಲ್ ಗ್ರಾಮವೆಂದು ಘೋಷಿಸಿ ಗ್ರಾಮ ಪಂಚಾಯತಿಗಳಿಗೆ ಹಸ್ತಾಂತರಿಸಲಾಗಿದೆ. ಸದರಿ ಯೋಜನೆಯ ಕಾಮಗಾರಿಗಳ ಕಾರ್ಯಚರಣೆ ಮತ್ತು ನಿರ್ವಹಣೆಯು ಗ್ರಾಮ ಪಂಚಾಯತಿಯಿಂದ ನಿರ್ವಹಿಸಿ ಗ್ರಾಮದ ಪ್ರತಿಯೊಬ್ಬ ನಾಗರಿಕರಿಗೆ ಶುದ್ದ ಕುಡಿಯುವ ನೀರು ಪೂರೈಸಲು ಸದರಿ ಪಂಚಾಯತ ಅಭಿವೃದ್ಧಿ ಅಧಿಕಾರಿರವರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಬೀದರ ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರ ರಾಮಲಿಂಗಪ್ಪಾ ಬಿರಾದರ್, ತಾಲ್ಲೂಕ

ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಗೋರಕನಾಥ ಚೆನ್ನಶೆಟ್ಟಿ, ಜಿಲ್ಲಾ ಪಂಚಾಯತ ಜಿಲ್ಲಾ ಯೋಜನಾ ವ್ಯವಸ್ಥಾಪಕ ಪತ್ರುಜೇ, ಶಾಖಾಧಿಕಾರಿಗಳು ಗ್ರಾ.ಕು.ನೀ ಮತ್ತು ನೈಉವಿ ಬೀದರ ಹಾಗೂ ಬೀದರ ತಾಲ್ಲೂಕಿನ ಕೋಲಾರ, ಮಂದಕನಳ್ಳಿ ಸೇರಿದಂತೆ ನಾಗೋರಾ ಗ್ರಾಮಗಳ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಉಚಿತ ಆರೋಗ್ಯ ತಪಾಸಣೆ ಶಿಬಿರ ನಾಳೆಯಿಂದ

ಬೀದರ. ಜು. 26 : ಇಲ್ಲಿಯ ಗಣೇಶ ಮೈದಾನದಲ್ಲಿ ಇರುವ ಶ್ರೀ ಸಿದ್ಧರಾಮೇಶ್ವರ ಆಯುರ್ವೇದ ವೈದ್ಯಕೀಯ ಕಾಲೇಜಿನ ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರದಲ್ಲಿ ಜುಲೈ 28 ರಿಂದ ಆಗಸ್ಟ್ 31 ರ ವರೆಗೆ ಪ್ರತಿ ಸೋಮವಾರ, ಮಂಗಳವಾರ ಹಾಗೂ ಶುಕ್ರವಾರ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ.

ಕಾಲೇಜಿನ ಶಲ್ಯ ತಂತ್ರ ವಿಭಾಗದ ವತಿಯಿಂದ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ರ ವರೆಗೆ ಶಿಬಿರ ಜರುಗಲಿದೆ. ಪೈಲ್ಸ್, ಪಿಸ್ತೂಲ ಮೊದಲಾದ ಗುದ ಸಂಬಂಧಿ ರೋಗಗಳ ತಪಾಸಣೆ ಮಾಡಲಾಗುವುದು ಎಂದು ಕಾಲೇಜಿನ ಪ್ರಾಚಾರ್ಯ ಡಾ. ರೂಪೇಶ್ ಎಕಲಾರಕರ್ ತಿಳಿಸಿದ್ದಾರೆ. ರೋಗಿಗಳು ಶಿಬಿರದ ಪ್ರಯೋಜನ ಪಡೆಯಬೇಕು ಎಂದು ಮನವಿ ಮಾಡಿದ್ದಾರೆ.

ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂ-ಖ್ಯೆ 7676999992 ಅಥವಾ 7057358224ಗೆ ಸಂಪರ್ಕಿಸಬಹುದು ಎಂದು ಹೇಳಿದ್ದಾರೆ.

# ನಿಜಾಸುಖಿ ಹಡಪದ ಅಪ್ಪಣ್ಣ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಕುಕನೂರ ತಾಲೂಕಿನ ಇಟಗಿ ಗ್ರಾಮದಲ್ಲಿ ನಿಜಾಸುಕಿ ಹಡಪದ ಅಪ್ಪಣ್ಣ ಜಯಂತಿಯನ್ನು ವಿಜೃಂಭಣೆಯಿಂದ ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಬಸವ ಪ್ರಭು ಪಾಟೀಲ, ಬಿ ಎಂ ಹಳ್ಳಿ, ವೇದಮೂರ್ತಿ ಮುತ್ತಯ್ಯ ಕಳ್ಳಿಮಠ, ಅಂದಾನಪ ಅಂಗಡಿ, ರೈತ ಮುಖಂಡರು ಅಂದಪ್ಪ ಹುಳ್ಳಿ, ಹಡಪದ ಸಮಾಜದ ಅಧ್ಯಕ್ಷರು ಎಲ್ ಕೆ ಹಡಪದ, ಗ್ರಾಮ ಪಂಚಾಯತಿ ಸದಸ್ಯರು ಬಸವರಾಜೇಶ್ವರಿ ಕಂತಿ, ಈರಮ್ಮ ಹಡಪದ, ಗವಿಸಿದ್ದಪ್ಪ ಮುದ್ದಬಳ್ಳಿ, ಹಾಗೂ, ಹಡಪದ ಸಮಾಜದ ಮುಖಂಡರು ಅನ್ನಪ್ಪ, ಹಡಪದ, ಚಂದ್ರಪ್ಪ ಹಡಪದ, ನಿಂಗಪ್ಪ ಎಂ ಹಡಪದ, ಮಂಜುನಾಥ ಮಾಳೇಕೊಪ, ದೇವಪ್ಪ ಎಸ್ ಹಡಪದ, ಗವಿಸಿದ್ದಪ್ಪ ಏನ್ ಹಡಪದ, ಹಮಂತ ಎಮ್ ಹಡಪದ, ಸಿದ್ದಪ್ಪ ಕೆ ಹಡಪದ, ಮುದ್ದಪ್ಪಾ ಎಮ್ ಹಡಪದ, ಅಕ್ಷಯ್ ಹಡಪದ, ನೀಲಪ್ಪ ಹಡಪದ, ಹಾಗೂ ಇತರರು ಇದ್ದರು.

# ಜೈವಿಕ ಪೋಷಕರಿಂದ ಬೇರ್ಪಟ್ಟ ಎರಡು ಮಕ್ಕಳ ದತ್ತು

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳದ ಅಮೂಲ್ಯ (ಪಿ) ದತ್ತು ಸಂಸ್ಥೆಯಲ್ಲಿ ವಿವಿಧ ಕಾರಣಗಳಿಂದ ಜೈವಿಕ ಪೋಷಕರಿಂದ ಬೇರ್ಪಟ್ಟ ಎರಡು ಮಕ್ಕಳನ್ನು ಕೊಪ್ಪಳ ಜಿಲ್ಲಾಧಿಕಾರಿ ಸುರೇಶ ಬಿ.ಇಟ್ನಾಳ್ ಅವರ ಸಮ್ಮುಖದಲ್ಲಿ ಗುರುವಾರ ದತ್ತು ನೀಡಲಾಯಿತು.

ಮಕ್ಕಳ ನ್ಯಾಯ (ಪೋಷಣೆ ಮತ್ತು ರಕ್ಷಣೆ) ಕಾಯ್ದೆ 2015ರ ತಿದ್ದುಪಡಿ 2021ರನ್ವಯ ನೋಂದಣಿಗೊಂಡು ಕಾರ್ಯನಿರ್ವಹಿಸುತ್ತಿರುವ ಅಮೂಲ್ಯ (ಪಿ) ದತ್ತು ಸಂಸ್ಥೆಯಲ್ಲಿನ ಯಾವುದೋ ಕಾರಣಗಳಿಂದ ಜೈವಿಕ ಪೋಷಕರಿಂದ ಬೇರ್ಪಟ್ಟ 2 ಮಕ್ಕಳನ್ನು ದತ್ತು ಅಧಿನಿಯಮ 2022ರ ಅನ್ವಯ ಜುಲೈ 24 ರಂದು ಒಂದು ಮಗುವನ್ನು ತಮಿಳನಾಡು ರಾಜ್ಯದ ಪೋಷಕರಿಗೆ ಹಾಗೂ ಇನ್ನೊಂದು ಮಗುವನ್ನು ವಿದೇಶಿ (ಮಾಲ್ಟಾ) ಪೋಷಕರಿಗೆ ದತ್ತು ನೀಡಲಾಗಿರುತ್ತದೆ.

ಈ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಹಾಗೂ ಸಿಬ್ಬಂದಿಗಳು, ಪೋಷಕರು ಮತ್ತು ದತ್ತು ಸಂಸ್ಥೆಯ ಅಧ್ಯಕ್ಷರು ಹಾಗೂ ಸಿಬ್ಬಂದಿಗಳು ಹಾಜರಿದ್ದರು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ತಿಳಿಸಿದ್ದಾರೆ.

# ಹಜ್ ಸಮಿತಿಯಲ್ಲಿ ಯಾದಗಿರಿ ಜಿಲ್ಲೆಗೆ ವಿಶೇಷ ಸ್ಥಾನಮಾನ ನೀಡುವಂತೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಕೆಂಭಾವಿ: ಜು.25: ಯಾದಗಿರಿ ಜಿಲ್ಲೆಯ ಮೂಲ ನಿವಾಸಿಯರಿಗೆ ಕರ್ನಾಟಕ ರಾಜ್ಯ ಹಜ್ ಸಮಿತಿಯಲ್ಲಿ ವಿಶೇಷ ಸದಸ್ಯ ಸ್ಥಾನಮಾನ ನೀಡುವಂತೆ ಮಲ್ಲೆಸ್ ರೆಹಬರ್-ಎ-ಹುಜ್ಜಾಜ್ ಯಾದಗಿರಿ ಟ್ರಸ್ಟ್ ವತಿಯಿಂದ " ವಸತಿ ಸಚಿವರಾದ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಇವರಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸಿ ಮಾತನಾಡಿದ ಟ್ರಸ್ಟ್ ಅಧ್ಯಕ್ಷರಾದ ಹಾಫಿಜ್, ಶೇಕ್ ಫರೀದುದ್ದೀನ್, ಯಾದಗಿರಿ ಜಿಲ್ಲೆಯ ಹಜ್ ಯಾತ್ರಿಕರ ಒಟ್ಟಾರೆ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದೆ. ಇಂದಿಗೂ ನಮ್ಮ ಜಿಲ್ಲೆಗೆ ರಾಜ್ಯ ಹಚ್ ಸಮಿತಿಯಲ್ಲಿ ಯಾವುದೇ ಅಧಿಕೃತ ಪ್ರತಿನಿಧಿತ್ವ ದೊರಕದೆ ಇರುವುದು ವಿಷಾದಕರ ವಿಷಯವಾಗಿದೆ. ಯಾದಗಿರಿಯಿಂದ ಹಜ್ ಯಾತ್ರಿಕರ ಅನುಭವದಲ್ಲಿ ಹಲವು ಅಡಚಣೆಗಳನ್ನು ತರುತಿದು ಮಾರ್ಗದರ್ಶನ ಮತ್ತು ಸಹಾಯದಲ್ಲಿ ಲೋಪ ಉಂಟಾಗುತ್ತಿದೆ. ಹಜ್ ಯಾತ್ರಿಕರಿಗೆ ಯಾವುದೇ ತೆ-ಊಂದರೆ ಆಗದಂತೆ ಎಲ್ಲಾ ರೀತಿಯ ಸೌಲಭ್ಯ ಹಾಗೂ ನಿಖರ ಮಾಹಿತಿ ಲಭ್ಯವಾಗುವಂತೆ ಸೂಕ್ತಕ್ರಮ ಕೈಗೊಳ್ಳಬೇಕು, ಇದರಿಂದ ಜಿಲ್ಲೆಯ ಯಾತ್ರಿಕರಿಗೆ ಉತ್ತಮ ಸಂವಹನ ಸಮನ್ವಯ ಹಾಗೂ ನಿರ್ವಹಣಾ ಸಹಾಯ ದೊರಕಲಿದೆ. ಇದಲ್ಲದೆ ಸಮಿತಿಯು ಎಲ್ಲಾ ಜಿಲ್ಲೆಗಳ ಸಮಾನ ಪ್ರತಿನಿಧಿತ್ವವನ್ನು ಸಮಾನವಾಗಿ ಅನುಸರಿಸುವ ಅವಕಾಶ ಪ್ರಾಪ್ತವಾಗುತ್ತದೆ ಎಂದು ಹೇಳಿದರು.

ಈ ಸಂಧರ್ಭದಲ್ಲಿ ಬಿ.ಜೆಡ್.ನಾಲತವಾಡ ಕೆಂಭಾವಿ, ಹಾಫಿಜ್ ಜೂಬೇರ್, ಮಹಿಬೂಬ್ ಪಾಷಾ, ಶಫೀಕ್ ದಫೇದಾರ್ ಕೆಂಭಾವಿ, ಇತರಿದ್ದರು.

# ಗಿಡ ನೀಡಿ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:-ಪಟ್ಟಣದ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ಶರಣಕುಮಾರ ಅವರಿಗೆ ಪರಿಸರವಾದಿ, ಸಾಹಿತಿ ಪ್ರದೀಪರೆಡ್ಡಿ ಚಿನಕೇರಾ ಅವರು ಗಿಡ ನೀಡುವದರ ಮೂಲಕ ಸನ್ಮಾನಿಸಿ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ವಿಜಯಕುಮಾರ ಪಾಟೀಲ್ ಚಿತಕೋಟಾ, ಗುರುನಾಥ ಹೂಗಾರ ಕಲ್ಲೂರ ಮುಂತಾದವರು ಉಪಸ್ಥಿತರಿದ್ದರು.

# ರಾಷ್ಟ್ರ ಪ್ರೇಮ ಮೈಗೂಡಿಸಿಕೊಳ್ಳಿ: ಬಿ.ಎನ್.ಹೊರಪೇಟಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜಿಲ್ಲೆಯ ಇರಕಲ್ಲಗಡದ ಶ್ರೀ ಈಶ್ವರ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಮೇರಾ ಯುವ ಭಾರತ ಕೇಂದ್ರ, ಯುವಧ್ವನಿ ಸಂಸ್ಥೆ, ವಿವೇಕಾನಂದ ಯುವಕ ಸಂಘ, ಶ್ರೀ ಈಶ್ವರ ಗ್ರಾಮೀಣಾಭಿವೃದ್ಧಿ ಶಿಕ್ಷಣ ಸಂಸ್ಥೆ ಇರಕಲ್ಲಗಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ಕಾರ್ಗಿಲ್ ವಿಜಯೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು

ಕಾರ್ಯಕ್ರಮವನ್ನು ನಿವೃತ್ತ ಯೋಧರಾದ ಯಮನೂರಪ್ಪ ಹಡಪದ, ರವೀಂದ್ರ ಅವರು ಸಸಿಗೆ ನೀರಾಕುವ ಮೂಲಕ ಉದ್ಘಾಟಿಸಿದರು. ಇದೇ ವೇಳೆ ಮಾತನಾಡಿದ ಅವರು ಪ್ರತಿವರ್ಷ ಜುಲೈ 26 ರಂದು ನಾವು ಕಾರ್ಗಿಲ್ ವಿಜಯ್ ದಿವಸ್ ಅನ್ನು ಆಚರಿಸುತ್ತೇವೆ. 1999ರಲ್ಲಿ ಭಾರತ-ಪಾಕಿಸ್ತಾನ ನಡುವಿನ ಕಾರ್ಗಿಲ್ ಯುದ್ಧದಲ್ಲಿ ಭಾರತವು ವಿಜಯ ಸಾಧಿಸಿದ ದಿನವಿದು. ಪಾಕಿಸ್ತಾನಿ ಸೈನಿಕರು ಮತ್ತು ಉಗ್ರರು ಜಮ್ಮು-ಕಾಶ್ಮೀರದ ಕಾರ್ಗಿಲ್ ಭಾಗದ ಭಾರತೀಯ ಗಡಿಗೆ ನುಗ್ಗಿದಾಗ ಯುದ್ಧ ಆರಂಭವಾಯಿತು. ಭಾರತೀಯ ಸೇನೆ "ಅಪರೇಷನ್ ವಿಜಯ್" ಮೂಲಕ ಅವರನ್ನು ಹಿಮ್ಮೆಟ್ಟಿಸಿ, ಗಡಿಭಾಗವನ್ನು ಮರುವಶಪಡಿಸಿಕೊಂಡಿತು ನಮ್ಮ ಸೇನೆಯು ನಾನು ಯೋಧನಾಗಿ ಸೇವೆ ಸಲ್ಲಿಸಿದ್ದು ನನ್ನ ಸೌಭಾಗ್ಯ ಎಂದರು.

ಸಾಹಿತಿ ಬಿ.ಎನ್.ಹೊರಪೇಟಿ ಕಾರ್ಗಿಲ್ ಯುದ್ಧದಲ್ಲಿ 527ಕ್ಕೂ ಹೆಚ್ಚು ಯೋಧರು ತಮ್ಮ ಪ್ರಾಣ ಬಲಿಯಿಟ್ಟು ದೇಶಕ್ಕಾಗಿ ಹೋರಾಡಿದರು. ಅವರ ತ್ಯಾಗವನ್ನೂ, ಧೈರ್ಯವನ್ನೂ ನಾವು ಎಂದಿಗೂ ಮರೆಯಲು ಸಾಧ್ಯವಿಲ್ಲ. ಈ ದಿನ ನಮ್ಮ ಸೇನೆಯ ಶೌರ್ಯ, ಬಲಿದಾನ ಹಾಗೂ ದೇಶಪ್ರೇಮವನ್ನು ನೆನಪಿಸುವ ದಿನ ಇದಾಗಿದೆ ನಾವು ಕೂಡಾ ಉತ್ತಮ ನಾಗರಿಕರಾಗಿ, ಶಿಕ್ಷೆ, ಶಿಸ್ತು, ನೈತಿಕತೆ ಮತ್ತು ದೇಶಭಕ್ತಿಯಿಂದ ನಮ್ಮ ಕರ್ತವ್ಯ ಪೂರೈಸಬೇಕು. ಈ ತ್ಯಾಗಗಳು ವ್ಯರ್ಥವಾಗದಂತೆ ಶಿಕ್ಷಣ, ಸೇವೆ, ಮತ್ತು ಸಮಾಜಮುಖಿ ಕಾರ್ಯಗಳ ಮೂಲಕ ದೇಶದ ಅಭಿವೃದ್ಧಿಗೆ ಸಹಕರಿಸೋಣ. ಪ್ರತಿಯೊಬ್ಬರು ರಾಷ್ಟ್ರ ಪ್ರೇಮವನ್ನು ಮೈಗೂಡಿಸಿಕೊಳ್ಳೋಣ ಎಂದರು.

ಇದೇ ವೇಳೆ ನಿವೃತ್ತ ಯೋಧರಿಗೆ ಭಾರತ ಸೇವಾ ಸಿರಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ವಿಜಯೋತ್ಸವದ ಸವಿನೆನಪಿಗಾಗಿ ಸಸಿ ನೆಡಲಾಯಿತು. ಶರಣಪ್ಪ ಸಿಂಗನಾಳ ಜಿಲ್ಲಾ ಸಂಯೋಜಕರು ಮಕ್ಕಳ ಸಹಾಯವಾಣಿ, ಸಂಸ್ಥಾಪಕರಾದ ನಾಗರಾಜ ಗುಡಿ, ಭೀಮಣ್ಣ ಮೂಲಿ, ವಿಜಯಲಕ್ಷ್ಮಿ ಗುಡಿ, ಶರಣಬಸವ ಹಾಗೂ ಮತ್ತಿರರು ಉಪಸ್ಥಿತಿ ಇದ್ದರು.



ಕೊಪ್ಪಳ : ಜಿಲ್ಲೆ ಕುಕನೂರ ತಾಲೂಕಿನ ಮಂಡಲಗಿರಿಯ ಶ್ರೀ ಜಗದ್ಗುರು ತೊಂಟದಾರ್ಯ ಕೈಗಾರಿಕಾ ತರಬೇತಿ ಸಂಸ್ಥೆ 2023-2025ನೇ ಸಾಲಿನ ತರಬೇತಿದಾರರಿಗೆ ಟೂಲ್ ಕಿಟ್ ವಿತರಣೆ ಚೆನ್ನಬಸಪ್ಪ ಬಳ್ಳಾರಿ ಪ್ರಚಾರ್ಯಾರರು ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಕುಕನೂರ ನಲ್ಲಿ ವಿತರಣೆ ಮಾಡಿದರು ಈ ಸಂದರ್ಭದಲ್ಲಿ ಪ್ರಚಾರ್ಯಾರರಾದ ಸಿ. ಎಸ್. ಅಂಗಡಿ ಹಾಗೂ ಎಲ್. ಆರ್. ಬಸಾಪುರ, ಕೆ. ಆರ್. ಕೋರಿ ಮತ್ತು ಎಮ್. ಎಲ್. ಛಲವಾದಿ ಉಪಸ್ಥಿತರಿದ್ದರು.

# ರಾಜೇಶ್ವರ ಗ್ರಾಮದ ಸಮುದಾಯ ಆರೋಗ್ಯ ಕೇಂದ್ರ ಸಿಬ್ಬಂದಿಗಳಿಗೆ ದಯಾನಂದ ಮೇತ್ರಿರವರಿಂದ ಸನ್ಮಾನ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ಹುಮನಾಬಾದದಿಂದ ತಾಲ್ಲೂಕಿನ ರಾಜೇಶ್ವರ ಗ್ರಾಮದ ಸಮುದಾಯ ಆರೋಗ್ಯ ಕೇಂದ್ರಕ್ಕೆ ಸುಲ್ತಾನ ಪಟೇಲ್ ಸಾಸರಗಾಂವ, ಶ್ರೀಶೈಲ್ ಪರಡಿಮಠ, ಚಂದ್ರಕಾಂತ ಬಿರಾದಾರ, ನಾಗಭೋಷಣ ಚಟ್ಟಿ ಇವರುಗಳು ವರ್ಗಾವಣೆಯಾಗಿದಕ್ಕೆ ಬಿಜೆಪಿ ಒಬಿಸಿ ಮೋರ್ಚಾದ ಜಿಲ್ಲಾ ಉಪಾಧ್ಯಕ್ಷ ದಯಾನಂದ ಮೇತ್ರಿ ರವರು ಭೇಟಿ ನೀಡಿ ಸನ್ಮಾನಿಸಿ, ಮಾತನಾಡಿ, ಹುಮನಾಬಾದ ಸಾರ್ವಜನಿಕ ಆಸ್ಪತ್ರೆಯಲ್ಲಿ ರೋಗಿಗಳಿಗೆ ಒಳ್ಳೆಯ ರೀತಿಯಿಂದ ಸೂಕ್ತ ಚಿಕಿತ್ಸೆ ನೀಡಿ ಸ್ಪಂದಿಸುವ ಕಾರ್ಯ ಶ್ಲಾಘನೀಯವಾಗಿದೆ. ಸರ್ಕಾರಿ ಕೆಲಸ ದೇವರ ಕೆಲಸವೆಂದು ನಿರಂತರವಾಗಿ ಕೆಲಸ ಮಾಡುತ್ತಿದ್ದಾರೆ.

ಜನ ಸಾಮಾನ್ಯರು ತಮ್ಮ ಸಮಸ್ಯೆಗೆ ಪರಿಹಾರ ಸಿಗಬಹುದೆಂಬ ನಿರೀಕ್ಷೆಯಲ್ಲಿ ಸರ್ಕಾರಿ ಆಸ್ಪತ್ರೆಗೆ ಬರುತ್ತಿರುತ್ತಾ-ರೆ, ಆಗ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಗಳು ಬಡ ರೋಗಿಗಳಿಗೆ ಪ್ರೀತಿಯಿಂದ ಕಂಡು ಗೌರವಯುತವಾಗಿ ಸ್ಪಂಧಿಸುವ ಕೆಲಸ ಹೀಗೆ ನಡೆಯಲಿ ಹಾಗೂ ಇಗಾಲೂ ಕೂಡ ರಾಜೇಶ್ವರ ಗ್ರಾಮದ ಬಡ ರೋಗಿಗಳಿಗೆ ಸ್ಪಂದಿಸುತ್ತಾರೆ ಎಂಬ ನಂಬಿಕೆ ನನಗಿದೆ ಎಂದರು.

ಆಡಳಿತ ವೈದ್ಯಾಧಿಕಾರಿ ಡಾ.ರವಿಶಂಕರ ಖಂಡ್ರೆ, ಎಫ್.ಡಿ.ಸಿ ಸುನೀತಾ, ಜಯಶ್ರೀ, ಚಿನ್ನಮ್ಮ, ಶಿಲ್ಪಾ, ಎಸ್.ಡಿ.ಸಿ. ಸತೀಷ ಬಡಗೇರ, ದುಂಡುಸಿಂಗ್, ಅಮರ, ರಾಜೇಶ್ವರಿ, ರಾಹುಲ್, ರಾಜೇಶ ಹಾಗೂ ಸಿಬ್ಬಂದಿ ವರ್ಗದವರಿದ್ದರು.

# ಕನ್ನಡ ಸೇನೆಯ ಮಹಿಳಾ ಘಟಕಕ್ಕೆ ಅಂಬಿಕಾ ದಂಡಿನ ಜಿಲ್ಲಾ ಉಪಾಧ್ಯಕ್ಷೆಯಾಗಿ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಕನ್ನಡ ಸೇನೆ ಕರ್ನಾಟಕ ಸಂಘಟನೆಯನ್ನು ಬಲಿಷ್ಠ ಪಡಿಸುವ ನಿಟ್ಟಿನಲ್ಲಿ ಕನ್ನಡ ನಾಡು, ನುಡಿ, ನೆಲ, ಜಲ, ಭಾಷೆಗಾಗಿ ಹೋರಾಟ ಮಾಡಲು ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ಅವರ ಆದೇಶದ ಮೇರೆಗೆ ಕನ್ನಡ ಸೇನೆ ಕರ್ನಾಟಕ ಸಂಘಟನೆಯ



ಮಹಿಳಾ ಘಟಕದ ಜಿಲ್ಲಾ ಉಪಾಧ್ಯಕ್ಷೆಯಾಗಿ ಅಂಬಿಕಾ ಎ. ದಂಡಿನ ಇವರನ್ನು ನೇಮಕ ಮಾಡಲಾಗಿದೆ ಎಂದು ಕನ್ನಡ ಸೇನೆ ಕರ್ನಾಟಕ ಸಂಘಟನೆಯ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಸಾಕ್ಷಿ ಆರ್. ಹಿರೇಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಸುಭಾಷ ಕೆನಡೆ, ಚಿಟಗುಪ್ಪ ತಾಲೂಕಾಧ್ಯಕ್ಷ ಪವನ್ ಪೂಜಾರಿ ಉಪಸ್ಥಿತರಿದ್ದರು.

# ರಸಗೊಬ್ಬರ ತಯಾರಿಕೆ ಕಚ್ಚಾ ವಸ್ತುಗಳು ವಿದೇಶಗಳಿಂದ ಪೂರೈಕೆಯಾಗುತ್ತಿಲ್ಲ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:2025-26 ನೇ ಸಾಲಿನಲ್ಲಿ ಮುಂಗಾರು ಹಂಗಾಮಿನಲ್ಲಿ ಶೇ.95% ರಷ್ಟು ಪ್ರದೇಶದಲ್ಲಿ ಬಿತ್ತನೆಯಾಗಿದ್ದು, ಶೇ. 5% ರ ಪ್ರದೇಶದಲ್ಲಿ ಭತ್ತ ನಾಟಿ ಮಾಡುವ ಕಾರ್ಯ ಪ್ರಗತಿಯಲ್ಲಿದೆ. ಈಗಾಗಲೇ ಬಿತ್ತನೆಯಾದ ಬೆಳೆಗೆ ಮೇಲು ಗೊಬ್ಬರವಾಗಿ ಯೂರಿಯಾ ಹಾಗೂ ಡಿಎಪಿ ರಸಗೊಬ್ಬರಗಳನ್ನು ಬಳಸುವುದು ವಾಡಿಕೆಯಾಗಿರುತ್ತದೆ. ಆದರೆ ಪ್ರಪಂಚಾದಾದ್ಯಂತ ಯುದ್ಧದ ಕಾರ್ಮೊಡ ಕವಿದಿರುವ ಕುರಿತು ರಸಗೊಬ್ಬರ ತಯಾರಿಕೆ ಕಚ್ಚಾ ವಸ್ತುಗಳು ವಿದೇಶಗಳಿಂದ ಪೂರೈಕೆಯಾಗುತ್ತಿಲ್ಲ. ಆದ್ದರಿಂದ ಯೂರಿಯಾ ಹಾಗೂ ರಸಗೊಬ್ಬರದ ಸರಬರಾಜು ಕಳೆದ ಸಾಲಿನಲ್ಲಿ ಆದಂತೆ ಈ ವರ್ಷವು ಕೂಡಾ ಸರಬರಾಜು ಆಗುತ್ತದೆಯೆಂದು ನೀರಿಕ್ಷಿಸುವುದು ತಪ್ಪಾಗಬಹುದು.



ಅದರ ಬದಲಾಗಿ ನೂತನವಾಗಿ ಆವಿಷ್ಕರಿಸಲಾದ ನ್ಯಾನೋ ಯೂರಿಯಾ ಹಾಗೂ ನ್ಯಾನೋ ಡಿಎಪಿ ರಸಗೊಬ್ಬರಗಳನ್ನು ರೈತರು ಬಳಸಬಹುದಾಗಿದೆ. ಕೀಟನಾಶಕ ಸಿಂಪರಣೆ ಮಾಡುವಾಗ ಸದರಿ ದ್ರಾವಣಗಳನ್ನು ಸೇರ್ಪಡಿಸಿ ಸಿಂಪಡಿಸಿದಲ್ಲಿ ಖರ್ಚು ವೆಚ್ಚದ ತಗ್ಗಿಸಬಹುದು. ಕೃಷಿ ಪರಿಕರ ಮಾರಾಟಗಾರರಲ್ಲಿ ನ್ಯಾನೋ ಯೂರಿಯಾ ಹಾಗೂ ನ್ಯಾನೋ ಡಿಎಪಿ ಲಭ್ಯವಿದ್ದು, ಬಿತ್ತನೆಯಾದ 25 ರಿಂದ 30 ದಿನ ಹಾಗೂ 45 ರಿಂದ 50 ದಿನಗಳ ಅಂತರದಲ್ಲಿ ಸಿಂಪರಣೆ ಮಾಡಬಹುದು. ಪ್ರತಿ ಲೀಟರ್ ನೀರಿಗೆ 5 ಎಂ.ಎಲ್. ದ್ರಾವಣವನ್ನು ಬೆರಸಿ ಸಿಂಪರಣೆ ಮಾಡಿದ್ದಲ್ಲಿ ಯೂರಿಯಾ ಹಾಗೂ ಡಿಎಪಿ ರಸಗೊಬ್ಬರದ ಫಲಿತಾಂಶವನ್ನು ದ್ರವರೂಪದ ರಸಗೊಬ್ಬರದಲ್ಲಿಯೂ ಕೂಡಾ ಕಾಣಬಹುದಾಗಿದೆ.

# ಸಾರ್ವಜನಿಕರು 90 ದಿನಗಳ ಮಧ್ಯಸ್ಥಿಕೆಯ ವಿಶೇಷ ಆಂದೋಲನದ ಸದುಪಯೋಗ ಪಡೆದುಕೊಳ್ಳಿ - ನ್ಯಾ. ಮಹಾಂತೇಶ ಎಸ್. ದರಗದ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ರಾಜಿ ಸಂಧಾನದ ಮೂಲಕ ರಾಜಿ ಆಗಬಹುದಾದ ಪ್ರಕರಣಗಳ ಇತ್ಯರ್ಥಕ್ಕಾಗಿ ಈಗಾಗಲೇ ಜುಲೈ 1 ರಿಂದ ಸೆಪ್ಟೆಂಬರ್ ತಿಂಗಳ ಅಂತ್ಯದವರೆಗೆ ಹಮ್ಮಿಕೊಂಡಿರುವ 90 ದಿನಗಳ ಮಧ್ಯಸ್ಥಿಕೆಯ ವಿಶೇಷ ಆಂದೋಲನದ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ ಹೇಳಿದರು.

ಅವರು ಬುಧವಾರ ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಛೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಲೋಕ್ ಅದಾಲತ್, ಮಧ್ಯಸ್ಥಿಕೆಯ ವಿಶೇಷ ಆಂದೋಲನ ಹಾಗೂ ಖಾಯಂ ಜನತಾ ನ್ಯಾಯಾಲಯ ಕುರಿತು ಮಾಹಿತಿ ನೀಡಲು ಕರೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಮಧ್ಯಸ್ಥಿಕೆಯು ರಾಜಿ ಸಂಧಾನದ ಮೂಲಕ ಕಡಿಮೆ ಅವಧಿಯಲ್ಲಿ ಶೀಘ್ರ ಪರಿಹಾರ ಕಂಡುಕೊಳ್ಳಬಹುದಾಗಿದೆ. ಇದರಿಂದ ಉಭಯ ಪಕ್ಷಗಾರರು ಸಮಯದ ಜೊತೆಗೆ ಹಣದ ಉಳಿತಾಯವನ್ನು ಮಾಡಬಹುದಾಗಿದೆ. ರಾಷ್ಟ್ರವ್ಯಾಪಿ ಮಧ್ಯಸ್ಥಿಕೆಯ ಕುರಿತು 90 ದಿನಗಳ ಕಾಲ ವಿಶೇಷ ಅಂದೋಲನದ ವ್ಯವಸ್ಥೆಯನ್ನು ಸಾರ್ವಜನಿಕರ ಅನುಕೂಲಕ್ಕಾಗಿ ಸರ್ವೋಚ್ಚ ನ್ಯಾಯಾಲಯವು ಈ ವಿಶೇಷ ವ್ಯವಸ್ಥೆಯನ್ನು ಮಾಡಿದೆ. ಈ ಪ್ರಕ್ರಿಯೆಯ ಮೂಲಕ ಉಭಯ ಪಕ್ಷಗಾರರು ಸದುಪಯೋಗ ಪಡೆದುಕೊಳ್ಳಬಹುದಾಗಿದೆ. ತಟಸ್ಥ ಹೊಂದಿದ ಮಧ್ಯಸ್ಥಿಕೆಗಾರರು ಮಧ್ಯಸ್ಥಿಕೆ ಮಾಡುವ ಮೂಲಕ ವಿವಾದವನ್ನು ಸೃಜನಾತ್ಮಕವಾಗಿ ಇತ್ಯರ್ಥ ಪಡಿಸಲು ಅನುಕೂಲವಾಗುತ್ತದೆ. ಮಧ್ಯಸ್ಥಿಕೆಯು ಸ್ವಪ್ರೇರಿತವಾದುದಲ್ಲದೇ ಗೌಪ್ಯವಾಗಿಯೂ ಇರುತ್ತದೆ ಮತ್ತು ಇದು ಪಾರದರ್ಶಕತೆಯಿಂದ ಕೂಡಿರುತ್ತದೆ. ಮಧ್ಯಸ್ಥಿಕೆಯಲ್ಲಿ ಕಡಿಮೆ ಕಾಲ ಮಿತಿಯಲ್ಲಿ ಆಪ್ತ ಸಮಾಲೋಚನೆ ಮೂಲಕ ಮಧ್ಯಸ್ಥಿಕೆ ನಡೆಯುವುದರಿಂದ ಅರ್ಥಪೂರ್ಣ ಚರ್ಚೆ ನಡೆದು ಪ್ರಕರಣವು ವ್ಯಾಜ್ಯ ಮುಕ್ತವಾಗಿ ಬಗೆಹರಿಯಲು ಸಹಾಯಕವಾಗುತ್ತದೆ ಎಂದರು.

ಮಧ್ಯಸ್ಥಿಕೆಯಲ್ಲಿ ಕೌಟುಂಬಿಕ ಪ್ರಕರಣಗಳು, ಸಿವಿಲ್ ವ್ಯಾಜ್ಯಗಳು, ವಿಚ್ಛೇದನ ಪ್ರಕರಣಗಳು, ಚೆಕ್ ಬೌನ್ಸ ಪ್ರಕರಣಗಳು ಬಗೆಹರಿಸಬಹುದಾಗಿದೆ. 90



ದಿನಗಳ ವಿಶೇಷ ಮಧ್ಯಸ್ಥಿಕೆಯು ಪ್ರತಿ ದಿನವು ನಡೆಯಲಿದ್ದು, ನ್ಯಾಯಾಲಯಗಳಲ್ಲಿ ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆಯನ್ನು ಕಡಿಮೆ ಮಾಡುವ ಉದ್ದೇಶ ಹೊಂದಿದೆ. ಇದರಿಂದ ವಕೀಲರು ತಮ್ಮ ಕಕ್ಷಿಗಾರರ ಮನವೊಲಿಸುವ ಮೂಲಕ ಮಧ್ಯಸ್ಥಿಕೆಯ ವಿಶೇಷ ಆಂದೋಲನವನ್ನು ಸದುಪಯೋಗ ಮಾಡಿಕೊಳ್ಳಬಹುದಾಗಿದೆ ಎಂದು ಹೇಳಿದರು.

**ಖಾಯಂ ಜನತಾ ನ್ಯಾಯಾಲಯ:** ಸಾರ್ವಜನಿಕ ಉಪಯುಕ್ತ ಸೇವೆ (Public Utility Services) ಗಳಿಗೆ ಸಂಬಂಧಿಸಿದಂತೆ ಉದ್ಭವಿಸುವ ವಿವಾದಗಳ ಅತಿ ಶೀಘ್ರ ಹಾಗೂ ಖರ್ಚಿಲ್ಲದ ತೀರ್ಮಾನಕ್ಕಾಗಿ ಖಾಯಂ ಜನತಾ ನ್ಯಾಯಾಲಯಗಳು (PermanentLokAdalat) ವರವೆಂದೇ ಹೇಳಬಹುದು. 1987ರ ಕಾನೂನು ಸೇವೆಗಳ ಪ್ರಾಧಿಕಾರಗಳ ಕಾಯಿದೆಯನ್ನು 2002ರಲ್ಲಿ ಕೇಂದ್ರ ಸರ್ಕಾರವು ತಿದ್ದುಪಡಿ ಮಾಡಿ, ವಿ.ಐ.ಎ ಅಧ್ಯಾಯವನ್ನು ಹೊಸದಾಗಿ ಸೇರಸುವುದರ ಮೂಲಕ ಖಾಯಂ ಜನತಾ ನ್ಯಾಯಾಲಯಗಳನ್ನು ಅಸ್ಥಿತ್ವಕ್ಕೆ ತಂದಿದೆ. 2007ರಲ್ಲಿ ಕರ್ನಾಟಕ ಸರ್ಕಾರವು ಬೆಂಗಳೂರು, ಬೆಳಗಾವಿ, ಧಾರವಾಡ, ಕಲಬುರಗಿ, ಮಂಗಳೂರು ಮತ್ತು ಮೈಸೂರಿನಲ್ಲಿ ಖಾಯಂ ಜನತಾ ನ್ಯಾಯಾಲಯಗಳನ್ನು ಸ್ಥಾಪಿಸಿದೆ ಎಂದರು.

1987ರ ಕಾನೂನು ಸೇವೆಗಳ ಪ್ರಾಧಿಕಾರಗಳ ಕಾಯಿದೆಯ 22ಎ(ಬಿ)ನೇ ವಿಧಿಯನ್ವಯ 'ಸಾರ್ವಜನಿಕ ಉಪಯುಕ್ತತಾ ಸೇವೆ' (ಕಣಾಛಟುಞ ಗಣುಟ-ುಣಥಿ ಖಜಡಿತುಛಿಜ)ಗಳ ವ್ಯಾಪ್ತಿಯೊಳಗೆ ಪ್ರಯಾಣಿಕರನ್ನು ಅಥವಾ ಸರಕನ್ನು ಸಾಗಿಸುವ ಭೂಸಾರಿಗೆ, ಜಲಸಾರಿಗೆ ಹಾಗೂ ವಾಯುಸಾರಿಗೆ ಸೇವೆ. ಅಂಚೆ, ತಂತಿ ಮತ್ತು ದೂರವಾಣಿ ಸೇವೆ. ವಿದ್ಯುತ್ ಮತ್ತು ನೀರು ಸರಬರಾಜು ಸೇವೆ. ಸಾರ್ವಜನಿಕ ನೈರ್ಮಲ್ಯ ವ್ಯವಸ್ಥೆ ಮತ್ತು ಕನ್ಸರ್‌ವೆನ್ಸಿ. ಆಸ್ಪತ್ರೆ ಮತ್ತು ಔಷಧಾಲಯಗಳಲ್ಲಿನ ಸೇವೆ. ವಿಮಾ ಸೇವೆ. ಬ್ಯಾಂಕಿಂಗ್ ಮತ್ತು ಹಣಕಾಸು ಸಂಸ್ಥೆಗಳಿಗೆ ಸಂಬಂಧಿಸಿದ ಸೇವೆಗಳು. ಶಿಕ್ಷಣ ಅಥವಾ ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಪಟ್ಟ ಸೇವೆಗಳು. ಗೃಹ ಅಥವಾ ರಿಯಲ್ ಎಸ್ಟೇಟ್ ಗಳಿಗೆ ಸಂಬಂಧಪಟ್ಟ ಸೇವೆಗಳು ಹಾಗೂ ಕೇಂದ್ರ ಅಥವಾ ರಾಜ್ಯ ಸರ್ಕಾರಗಳು ಸಾರ್ವಜನಿಕ ಹಿತದೃಷ್ಟಿಯಿಂದ "ಸಾರ್ವಜನಿಕ ಉಪಯುಕ್ತತಾ ಸೇವೆ" ಎಂದು ಘೋಷಿಸುವ ಇನ್ನಿತರ ಸೇವೆಗಳು ಬರುತ್ತವೆ. ಈ ಸಾರ್ವಜನಿಕ ಉಪಯುಕ್ತತಾ ಸೇವೆಗಳಿಗೆ ಸಂಬಂಧಿಸಿದಂತಹ ವಿವಾದಗಳು ಮಾತ್ರ ಖಾಯಂ ಜನತಾ ನ್ಯಾಯಾಲಯದ ವ್ಯಾಪ್ತಿಗೆ ಬರುತ್ತವೆ. ಅಲ್ಲದೇ, ವಿವಾದಕ್ಕೆ ಸಂಬಂಧಿಸಿದ ಉಭಯ ಪಕ್ಷಗಾರರಲ್ಲಿ ಒಬ್ಬರು ಸಾರ್ವಜನಿಕ ಉಪಯುಕ್ತತಾ ಸೇವೆಗೆ ಸಂಬಂಧಿಸಿದ ಸಂಸ್ಥೆ ಅಥವಾ ವ್ಯಕ್ತಿಯಾಗಿರಲೇಬೇಕು. ಯಾವುದೇ ಕಾನೂನಿನನ್ವಯ ರಾಜಿಯಾಗದ ಹಾಗೂ ರೂ. ಕೋಟಿಗೂ ಮೀರಿದ ಮೌಲ್ಯದ ವಿವಾದಗಳು ಖಾಯಂ ಜನತಾ ನ್ಯಾಯಾಲಯದ ವ್ಯಾಪ್ತಿಗೆ ಬರುವುದಿಲ್ಲ ಎಂದು ಹೇಳಿದರು.

ಖಾಯಂ ಜನತಾ ನ್ಯಾಯಾಲಯಕ್ಕೆ ಸಂಬಂಧಿಸಿದಂತೆ ನಿಯಮಕ್ಕನುಸಾರ ನಡೆದರೆ, ಅತಿ ಶೀಘ್ರವಾಗಿ ಹಾಗೂ ಖರ್ಚಿಲ್ಲದೆ ಪರಿಹಾರ ಪಡೆಯಲು ಸಾಧ್ಯವಿದ್ದು, ಸಾರ್ವಜನಿಕರು ಹಾಗೂ ಸಾರ್ವಜನಿಕ ಉಪಯುಕ್ತತಾ ಸೇವೆಯ ಸಂಸ್ಥೆಗಳು ಇದರ ಸದುಪಯೋಗ ಪಡೆಯಬಹುದಾಗಿದೆ. ವಕೀಲರು ಸಹ ಈ ಖಾಯಂ ಜನತಾ ನ್ಯಾಯಾಲಯದ ವೇದಿಕೆಯನ್ನು ಉಪಯೋಗಿಸಿಕೊಂಡು ತಮ್ಮ ಕಕ್ಷಿಗಾರರಿಗೆ ಖರ್ಚಿಲ್ಲದೆ ಶೀಘ್ರವಾಗಿ ಪರಿಹಾರವನ್ನು ಕೊಡಿಸಬಹುದಾಗಿದೆ ಎಂದರು.

ಈ ಹಿಂದೆ ನಡೆದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಅತೀ ಹೆಚ್ಚಿನ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗಿದೆ. ಜಿಲ್ಲೆಯ ವಕೀಲರು, ನ್ಯಾಯಾಧೀಶರು, ಮಧ್ಯಸ್ಥಗಾರರಿಗೆ ರಾಜಿ ಸಂಧಾನಕ್ಕೆ ವೇದಿಕೆ ಕಲ್ಪಿಸಿಕೊಟ್ಟಿದ್ದಕ್ಕೆ ಮತ್ತು ಈ ಕುರಿತು ಹೆಚ್ಚಿನ ಪ್ರಚಾರ ನೀಡಿದ ಮಾಧ್ಯಮವರಿಗೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದು ಹೇಳಿದರು.

ಈ ಪತ್ರಿಕಾಗೋಷ್ಠಿಯಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಸುರೇಶ ಜಿ., ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಇತರೆ ಅಧಿಕಾರಿ, ಸಿಬ್ಬಂದಿಗಳು ಮತ್ತು ಮಾಧ್ಯಮ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಸುಸ್ತಿ ಸಾಲದಾರರಿಗೆ ಉತ್ತಮ ಶಟಲ್ಮೆಂಟನ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:-ತಾಲೂಕಿನ ದುಬಗುಂಡಿ ಗ್ರಾಮದ ಕರ್ನಾಟಕ ಗ್ರಾಮೀಣ ಬ್ಯಾಂಕ್ ನಲ್ಲಿ ಕೆಲವು ರೈತರು ಬೆಳೆ ಸಾಲ ಪಡೆದು ಸಾಲವನ್ನು ಸಮಯಕ್ಕೆ ಸರಿಯಾಗಿ ಪಾವತಿಸದೆ ಸುಸ್ತಿ ಸಾಲದಾರರ ಗುಂಪಿಗೆ ಸೇರಿದ್ದಾರೆ.

ಆದ್ದರಿಂದ ಸುಸ್ತಿದಾರ ಸಾಲಗಾರರಿಗಾಗಿ ಕರ್ನಾಟಕ ಗ್ರಾಮೀಣ ಬ್ಯಾಂಕ್ ರೈತರ ಹಿತ ದೃಷ್ಟಿಯಿಂದ ಬೆಳೆ ಸಾಲ ಪಡೆದ ರೈತರಿಗೋಸ್ಕರ ಉತ್ತಮ ಅವಕಾಶದ ಸೆಟಲ್ಮೆಂಟ್ ವ್ಯವಸ್ಥೆ ಮಾಡಿದ್ದು ಆದ್ದರಿಂದ ಪ್ರತಿಯೊಬ್ಬ ರೈತರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು.

ಇನ್ನು ಹೆಚ್ಚಿನ ಮಾಹಿತಿಗಾಗಿ ಬ್ಯಾಂಕ್ ಮ್ಯಾನೇಜರ್ ಅವರನ್ನು ಸಂಪರ್ಕಿಸಲು ಕೋರಲಾಗಿದೆ

“ಮಕ್ಕಳ ರಕ್ಷಣೆಗೆ ಕಾನೂನುಗಳು” ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ನ್ಯಾಯಾಧೀಶೆ ಕೆ.ಜಿ.ಶಾಂತಿ ಅಭಿಪ್ರಾಯ

# ಮಕ್ಕಳಿಗೆ ಉತ್ತಮ ಪರಿಸರ ನೀಡೋಣ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.26–ಮಕ್ಕಳ ರಕ್ಷಣೆಗೆ ಕಾಯ್ದೆ–ಕಾನೂನು ರೂಪಿಸುವುದು ಮಾತ್ರವಲ್ಲದೇ, ಅವರ ಬೆಳವಣಿಗೆಗೆ ಉತ್ತಮ ಪರಿಸರವನ್ನು ಸಹ ನೀಡಬೇಕಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ ಶಾಂತಿ ಅವರು ಅಭಿಪ್ರಾಯಪಟ್ಟರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ರೀಡ್ಸ್ ಸಂಸ್ಥೆ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಮತ್ತು ಅರಣ್ಯ ಇಲಾಖೆ ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ನ್ಯಾಯಾಲಯದ ವಿಸಿ ಸಭಾಂಗಣದಲ್ಲಿ ಶನಿವಾರ ಏರ್ಪಡಿಸಿದ್ದ “ಮಕ್ಕಳ ರಕ್ಷಣೆಗೆ ಕಾನೂನುಗಳು” ಎಂಬ ಪುಸ್ತಕ ಬಿಡುಗಡೆಗೊಳಿಸಿ, ಬಳಿಕ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳು ದೇವರ ಸಮಾನ. ಅವರು ಬೆಳವಣಿಗೆಯ ಪೂರಕವಾದ ಮನೆ, ಶಾಲೆ ವಾತಾವರಣದ ಸುತ್ತಮುತ್ತಲಿನಲ್ಲಿ ಗುಣಮಟ್ಟದ ಪರಿಸರ ಕಲ್ಪಿಸಬೇಕಿದೆ ಎಂದರು.

ದೇಶದಲ್ಲಿ ಬಾಲಕಾರ್ಮಿಕರು, ಭಿಕ್ಷಾಟನೆ, ಮಾನವ ಕಳ್ಳಸಾಗಾಣಿಕೆ, ಬಾಲ್ಯವಿವಾಹ, ಪೋಕ್ಸೋದಂತಹ ಬೆಳವಣಿಗೆಗಳು ಕಂಡುಬರುತ್ತಿರುವುದು ವಿಷಾಧನೀಯ ಸಂಗತಿಯಾಗಿದ್ದು, ಬಡತನ ಮತ್ತು ಶಿಕ್ಷಣ ಕೊರತೆ ಪ್ರಮುಖ ಕಾರಣವಾಗಿದೆ ಎಂದರು.

ಮಕ್ಕಳ ರಕ್ಷಣೆಯಲ್ಲಿ ಎನ್‌ಜಿಒ ಗಳ ಪಾತ್ರವೂ ಸಹ ಮುಖ್ಯವಾಗಿದ್ದು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರೀಡ್ಸ್ ಸಂಸ್ಥೆ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಈ ಪುಸ್ತಕ ಹೊರತರಲಾಗಿದ್ದು, ಶಾಲೆಗಳು, ಗ್ರಂಥಾಲಯಗಳಲ್ಲಿ ಇರಿಸಲಾಗುವುದು. ಮುಖ್ಯವಾಗಿ ಶಾಲೆಗಳಲ್ಲಿ ಮುಂಜಾನೆಯ ಪ್ರಾರ್ಥನೆಯ ನಂತರ ಬಾಲ್ಯ ವಿವಾಹ, ಪೋಕ್ಸೊ ಕಾಯ್ದೆಗಳ ಕುರಿತು ಮಾಹಿತಿ ನೀಡಬೇಕು. ಬಾಲ್ಯವಿವಾಹವಾಗುವುದಿಲ್ಲ ಎಂದು ಮಕಳ್ಳಲ್ಲಿ ಪ್ರತಿಜ್ಞಾವಿಧಿ ಸ್ವೀಕರಿಸಲು ತಿಳಿಸಬೇಕು ಎಂದರು.

“ಮಗುವಿಗೊಂದು ಮರ–ಶಾಲೆಗೊಂದು ವನ ಅಭಿಯಾನ” ಕಾರ್ಯಕ್ರಮದಡಿ ಎಲ್ಲಾ ಶಾಯೆಗಳಲ್ಲಿ ಗಿಡ ನೆಡುವ ಕಾರ್ಯಕ್ರಮ ಹಮ್ಮಿಕೊಂಡು, ಅವುಗಳ ಪೋಷಣೆಯ ಹೊಣೆಗಾರಿಗೆ ಮಕ್ಕಳಿಗೆ ನೀಡಬೇಕು. ಮಕ್ಕಳಿಗೆ ಕಾಯ್ದೆ–ಕಾನೂನುಗಳು ಎಷ್ಟು ಮುಖ್ಯವೋ, ಪರಿಸರದಲ್ಲಿ ಗಿಡ–ಮರಗಳು ಅಷ್ಟೇ ಮುಖ್ಯವಾಗಿದೆ ಎಂದರು.

ಇದೇ ವೇಳೆ ನ್ಯಾಯಾಧೀಶರು ಕಾರ್ಗಿಲ್ ವಿಜಯ ದಿವಸ ಅಂಗವಾಗಿ ಹುತಾತ್ಮರಾದ ಯೋಧರಿಗೆ ಗೌರವ ನಮನ ಸಲ್ಲಿಸಿದರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದ ವ್ಯಾಪ್ತಿಯಲ್ಲಿ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡುವುದು ಅಗತ್ಯವಾಗಿದೆ. ಮಕ್ಕಳ ರಕ್ಷಣೆಗಿರುವ ಕಾನೂನುಗಳನ್ನು ಪ್ರತಿಯೊಬ್ಬರೂ ತಿಳಿದು, ಇತರರಿಗೂ ತಿಳಿಸುವ ಕೆಲಸವಾಗಬೇಕಿದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಬಾಲ್ಯ ವಿವಾಹಕ್ಕೆ ಕಡಿವಾಣ ಹಾಕಲು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ ಹಾಗೂ ಎಲ್ಲಾ ಇಲಾಖೆಗಳು ಸೇರಿ ಕೈಜೋಡಿಸೋಣ ಎಂದರು.

ರೀಡ್ ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕ ಸಿ.ತಿಪ್ಪೇಶಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಸದಸ್ಯ ಡಾ.ಹೆಚ್.ಸಿ.ರಾಘವೇಂದ್ರ ಅವರು ಪುಸ್ತಕ ಪರಿಚಯ ಮಾಡಿದರು. ಹಂಪಿ ಕನ್ನಡ ವಿಶ್ವವಿದ್ಯಾಲಯದ ಅಭಿವೃದ್ಧಿ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಡಾ.ಜನಾರ್ಧನ ಅವರು ಕಾರ್ಯಾಗಾರ ನಡೆಸಿದರು.

ಕಾರ್ಯಕ್ರಮಕ್ಕೂ ಮುನ್ನ “ಮಗುವಿಗೊಂದು ಮರ–ಶಾಲೆಗೊಂದು ವನ ಅಭಿಯಾನ” ಕಾರ್ಯಕ್ರಮದಡಿ ನ್ಯಾಯಾಲಯದ ಆವರಣದಲ್ಲಿ ಗಣ್ಯರು ಗಿಡ ನೆಟ್ಟು ನಿರೂಣಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಬಳ್ಳಾರಿ ಪ್ರಾದೇಶಿಕ ವಿಭಾಗದ ಅರಣ್ಯ ಇಲಾಖೆಯ ಸಹಾಯಕ ಸಂರಕ್ಷಣಾಧಿಕಾರಿ ತೋಶನ್ ಕುಮಾರ್ ಸೇರಿದಂತೆ ಜಿಲ್ಲಾ ನ್ಯಾಯಾಲಯದ ವಿವಿಧ ನ್ಯಾಯಾಧೀಶರು, ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿ.ಆರ್.ಸಿ., ಸಿ.ಆರ್.ಸಿ ಇ.ಸಿ.ಓ, ಕಾರ್ಮಿಕ ಅಧಿಕಾರಿಗಳು, ಪಿ.ಡಿ–ಎನ್.ಸಿ.ಎಲ್.ಪಿ, ಮಕ್ಕಳ ವಿಶೇಷ ಪೊಲೀಸ್ ಘಟಕ ಸಿಬ್ಬಂಧಿಗಳು, ಡಿ.ಸಿ.ಪಿ.ಓ ಸಿಬ್ಬಂದಿಗಳು, ಚೈಲ್ಡ್ ಲೈನ್ ಸಿಬ್ಬಂಧಿಗಳು, ಅಂಗನವಾಡಿ ಮೇಲ್ವಿಚಾರಕರು, ಪ್ಯಾರಾ ಲೀಗಲ್ ವಾಲೆಂಟೀಯರ್ಸ್, ಎಲ್ಲಾ ಸ್ವಯಂ ಸೇವಾ ಸಂಸ್ಥೆಯ ಮುಖ್ಯಸ್ಥರುಗಳು, ರೀಡ್ಸ್ ಸಂಸ್ಥೆಯ ಸಿಬ್ಬಂದಿಗಳು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಿಬ್ಬಂದಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಎಲ್ಲ ಸಮಸ್ಯೆಗಳಿಗೂ ಶಿಕ್ಷಣವೊಂದೇ ಪರಿಹಾರ: ನ್ಯಾ.ಹೆಚ್.ಎ.ಸಾತ್ವಿಕ್



ರಾಯಚೂರು ಜುಲೈ 26–ಜೀವನದಲ್ಲಿ ಸಾಮಾನ್ಯವಾಗಿ ಪ್ರತಿಯೊಬ್ಬರು ಎದುರಿಸುವ ಎಲ್ಲ ಸಮಸ್ಯೆಗಳಿಗೂ ಉತ್ತಮ ಶಿಕ್ಷಣವೊಂದೇ ಪರಿಹಾರ ಆಗಬಲ್ಲದು ಎಂದು ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ಹೇಳಿದರು. ನಗರದ ಸರ್ಕಾರಿ ಪರಿವೀಕ್ಷಣಾಲಯದ ಸಭಾಂಗಣದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಎಸ್.ಎಸ್.ಎಲ್.ಸಿ ಪಾಸಾದ ಬಾಲ ಮಂದಿರದ ಮಕ್ಕಳಿಗೆ ಇತ್ತೀಚೆಗೆ ಹಮ್ಮಿಕೊಂಡಿದ್ದ ಅಭಿನಂದನಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವ್ಯಕ್ತಿಯ ಯಾವುದೇ ತರಹದ ಸಮಸ್ಯೆಗಳಿಗೆ ಉತ್ತಮ ಶಿಕ್ಷಣ ಮಾತ್ರ ಪರಿಹಾರ ನೀಡಬಲ್ಲದು. ಆದ್ದರಿಂದ ಮಕ್ಕಳು ಉತ್ತಮವಾಗಿ ಅಭ್ಯಾಸ ಮಾಡಬೇಕು. ವಿದ್ಯಾರ್ಥಿ ಜೀವನದಲ್ಲಿ ಸಮಯಕ್ಕೆ ಹೆಚ್ಚಿನ ಮಹತ್ವ ನೀಡಬೇಕು ಎಂದು ಸಲಹೆ ನೀಡಿದರು.

ಮುಖ್ಯಅತಿಥಿಗಳಾಗಿ ಭಾಗವಹಿಸಿದ್ದ ಪೊಲೀಸ್ ಇಲಾಖೆಯ ಉಪ ಅಧೀಕ್ಷಕರಾದ ಶಾಂತವೀರ ಅವರು ಮಾತನಾಡಿ, ಪ್ರತಿಯೊಬ್ಬರಲ್ಲೂ ಒಂದಿಲ್ಲೊಂದು ಸಾಮರ್ಥ್ಯ ಇದ್ದೆ ಇರುತ್ತದೆ. ಕಷ್ಟಗಳು ಎದುರಾದಾಗ ಕುಗ್ಗಬಾರದು. ಧೈರ್ಯವಾಗಿ ಎದುರಿಸಿ ನಿಂತಾಗ ಮಾತ್ರ ಸಾಧನೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಮಂಗಳಾ ಹೆಗಡೆ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಬಾಲ ಮಂದಿರದ ಮಕ್ಕಳ ಒಳಿತಿಗಾಗಿ ಮಕ್ಕಳ ಕಲ್ಯಾಣ ಸಮಿತಿಯು ಸದಾ ಸಿದ್ದವಿರುತ್ತದೆ. ಮಕ್ಕಳು ನಮ್ಮ ದೇಶದ ಆಸ್ತಿ. ಮಕ್ಕಳ ಪ್ರಗತಿಗಾಗಿ ಸಮಿತಿಯು ಯಾವಾಗಲೂ ಶ್ರಮಿಸುತ್ತದೆ ಎಂದು ಹೇಳಿದರು.

ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಅಮರೇಶ್ ಹಾವಿನ್ ಅವರು ಪ್ರಾಸ್ತಾವಿಕ ಮಾತನಾಡಿ, ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ಸರ್ಕಾರವು ಅನೇಕ ಸೌಲತ್ತುಗಳನ್ನು ನೀಡಿದೆ. ಬಾಲ ಮಂದಿರಗಳು ಸಂಕಷ್ಟದಲ್ಲಿರುವ ಮಕ್ಕಳಿಗಾಗಿ ಕಾರ್ಯನಿರ್ವಹಿಸುತ್ತಿದ್ದು ಇಲ್ಲಿರುವ ಮಕ್ಕಳು ಅನೇಕ ಸಂಕಷ್ಟದ ಸನ್ನಿವೇಶಗಳಲ್ಲಿ ಇರುವವರಾಗಿದ್ದು, ಉತ್ತಮ ಅಧ್ಯಯನದ ಮೂಲಕ ಮುನ್ನಡೆಯಬೇಕು ಎಂದು ತಿಳಿಸಿದರು. ಸ್ಟೇಷನ್ ಬಜಾರ್ ಪ್ರೌಢಶಾಲೆಯ ಮುಖ್ಯಗುರುಗಳಾದ ರಾಧಾ ದೇವಿ ಹಾಗೂ ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರಾದ ಬಸವರಾಜ್ ಬ್ಯಾಗವಟ್ ಅವರು ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರಾದ ಶ್ರೀಮತಿ ಶಾರದಾ ಪಾಟೀಲ್ ವಿವಿಧ ಸಂಸ್ಥೆಗಳ ಅಧೀಕ್ಷಕರು ಮತ್ತು ಸಿಬ್ಬಂದಿ ಭಾಗವಿಸಿದ್ದರು. ಬಾಲಕಿಯರ ಬಾಲ ಮಂದಿರದ ಅಧೀಕ್ಷಕರಾದ ಭಾರತಿ ನಾಯಕ್ ಸ್ವಾಗತಿಸಿದರು. ಬಾಲಕರ ಬಾಲ ಮಂದಿರದ ಅಧೀಕ್ಷಕರಾದ ನಾಗರಾಜ್ ನಾಯಕ್ ವಂದಿಸಿದರು.

# ಅಕ್ರಮವಾಗಿ ಪಡಿತರ ಅಕ್ಕಿ ಸಾಗಿಸುತ್ತಿದ್ದ ಮೂರು ವಾಹನ ಜಪ್ತಿ, 385 ಚೀಲ ವಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.26–ಸಿರುಗುಪ್ಪ ತಾಲ್ಲೂಕು ವ್ಯಾಪ್ತಿಯಲ್ಲಿ ಅರಳಿಗನೂರು ಕಡೆಯಿಂದ ಸಿರುಗುಪ್ಪ ಪಟ್ಟಣದ ಕಡೆಗೆ ಶನಿವಾರ ಬೆಳಗಿನ ಜಾವ ಅಕ್ರಮವಾಗಿ ಪಡಿತರ ಅಕ್ಕಿ ಸಾಗಾಣಿಕೆ ಮಾಡಿತ್ತಿದ್ದ ಮೂರು ವಾಹನಗಳನ್ನು ಜಪ್ತಿ ಮಾಡಿ, 385 ಅಕ್ಕಿ ಚೀಲಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಸಿರುಗುಪ್ಪ ತಾಲ್ಲೂಕಿನ ಆಹಾರ ನಿರೀಕ್ಷಕ ಎಂ.ವಿಜಯ್ ಕುಮಾರ್ ತಿಳಿಸಿದ್ದಾರೆ.

ಅಕ್ಕಿಯು ಸರ್ಕಾರದ ವಿವಿಧ ಯೋಜನೆಗಳಡಿ ಬಡಕುಟುಂಬಗಳಿಗೆ ಉಚಿತವಾಗಿ ವಿತರಣೆ ಮಾಡುವ ಪಡಿತರ ಅಕ್ಕಿಯಾಗಿದ್ದು, ಈ ಕೃತ್ಯದಲ್ಲಿ ಭಾಗಿಯಾಗಿರುವವರ ವಿರುದ್ಧ ವಿವಿಧ ಕಾನೂನುಗಳಡಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸಿರುಗುಪ್ಪ ಪೊಲೀಸ್ ಠಾಣೆಗೆ ದೂರು ಸಲ್ಲಿಸಲಾಗಿದೆ ಎಂದು ತಿಳಿಸಿದ್ದಾರೆ.

# ಹುದ್ದೆಗಳ ನೇಮಕ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.25–ಪ್ರಸ್ತಕ ಸಾಲಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಬಳ್ಳಾರಿ ಪೂರ್ವ ವಲಯದ ಕ್ಷೇತ್ರ ಸಮನ್ವಯಾಧಿಕಾರಿಗಳ ಕಚೇರಿ ವ್ಯಾಪ್ತಿಯಲ್ಲಿ ವಿಶೇಷ ಚೇತನ ಮಕ್ಕಳಿಗೆ ಫಿಜಿಯೋಥೆ–ರಪಿ ಚಿಕಿತ್ಸೆ ನೀಡಲು ಒಂದು ಫಿಜಿಯೋಥೆರಪಿಸ್ಟ್ ಹುದ್ದೆಗೆ ಹಾಗೂ ಎಸ್‌ಆರ್‌ಪಿ ಕೇಂದ್ರದ ವೈದ್ಯರ ಸಹಾಯಕ್ಕಾಗಿ ಒಬ್ಬ ಮಹಿಳಾ ಸಹಾಯಕಿಯರ ಹುದ್ದೆಗೆ ಹೊರಗುತ್ತಿಗೆ ಆಧಾರದ ಮೇಲೆ ತಾತ್ಕಲಿಕವಾಗಿ ನೇಮಕ ಮಾಡಿಕೊಳ್ಳಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜು.29 ಕೊನೆಯ ದಿನ. ವಿದ್ಯಾರ್ಹತೆ: ವೈದ್ಯರ ಹುದ್ದೆಗೆ ಬ್ಯಾಚುಲರ್ ಆಫ್ ಫಿಜಿಯೋಥೆರಪಿ ಅಥವಾ ಡಿಪ್ಲೋಮಾ ಆಫ್ ಫಿಜಿಯೋಥೆ–ರಪಿ ಆಗಿರಬೇಕು. ಮಹಿಳಾ ಸಹಾಯಕಿ ಹುದ್ದೆಗೆ 07 ತರಗತಿ ಉತ್ತೀರ್ಣರಾಗಿರಬೇಕು.

ಆಸಕ್ತ ಅಭ್ಯರ್ಥಿಗಳು ತಮ್ಮ ಅಗತ್ಯ ದಾಖಲೆಗಳೊಂದಿಗೆ ಕ್ಷೇತ್ರ ಸಮನ್ವಯಾಧಿಕಾರಿಗಳ ಕಚೇರಿ, ಬಿಆರ್‌ಸಿ ಕಚೇರಿ, ಬಳ್ಳಾರಿ ಪೂರ್ವ ವಲಯ, ಬಳ್ಳಾರಿ ಇಲ್ಲಿಗೆ ಅರ್ಜಿ ಸಲ್ಲಿಸಬೇಕಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಮೊ.9916356333,8217687490 ಗೆ ಸಂಪರ್ಕಿಸಬಹುದು ಎಂದು ಬಳ್ಳಾರಿ ಪೂರ್ವ ವಲಯ ಕ್ಷೇತ್ರ ಸಮನ್ವಯಾಧಿಕಾರಿಗಳು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಆದರ್ಶ ವಿದ್ಯಾಲಯ: ಖಾಲಿಯಿರುವ ಸೀಟ್‌ಗಳ ಭರ್ತಿಯ ಫಲಿತಾಂಶ ಪ್ರಕಟ

ಬಳ್ಳಾರಿ,ಜು.25–ನಗರದ ಈದ್ಗಾ ರಸ್ತೆಯ ಹಿರಾಳ್ ಕುಡಂನ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ ಪ್ರಸ್ತಕ ಸಾಲಿಗೆ 7, 8 ಮತ್ತು 9 ನೇ ತರಗತಿಯಲ್ಲಿ ಖಾಲಿಯಿರುವ ಸೀಟ್ ಗಳಿಗಾಗಿ ಡಯಟ್ ನಲ್ಲಿ ಇತ್ತೀಚೆಗೆ ಪ್ರವೇಶ ಪರೀಕ್ಷೆ ನಡೆಸಿದ್ದು, ಫಲಿತಾಂಶ ಪ್ರಕಟಿಸಲಾಗಿದೆ ಎಂದು ಶಾಲೆಯ ಮುಖ್ಯಗುರುಗಳು ತಿಳಿಸಿದ್ದಾರೆ.

ಪರೀಕ್ಷೆ ಬರೆದ ವಿದ್ಯಾರ್ಥಿಗಳು ಮತ್ತು ಪೋಷಕರು ಶಾಲೆಗೆ ಭೇಟಿ ನೀಡಿ ಫಲಿತಾಂಶವನ್ನು ಪರಿಶೀಲಿಸಿ ಅಗತ್ಯ ದಾಖಲೆಗಳೊಂದಿಗೆ ಜುಲೈ 29 ರೊಳಗಾಗಿ ದಾಖಲಾತಿ ಮಾಡಿಸಿಕೊಳ್ಳಬೇಕು.

**ಬೇಕಾದ ದಾಖಲೆ:**

ಪ್ರವೇಶಾತಿ ಅರ್ಜಿ, ವರ್ಗಾವಣೆ ಪ್ರಮಾಣ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಿದ್ಯಾರ್ಥಿಯ ಆಧಾರ್ ಕಾರ್ಡ್, ವಿದ್ಯಾರ್ಥಿಯ ಬ್ಯಾಂಕ್‌ಪಾಸ್ ಪುಸ್ತಕ, ತಂದೆ–ತಾಯಿಯ ಆಧಾರ್ ಕಾರ್ಡ್ ಪ್ರತಿ, ಅಂಗವಿಕಲ ವಿದ್ಯಾರ್ಥಿಯಾಗಿದ್ದಲ್ಲಿ ವೈದ್ಯಕೀಯ ಪ್ರಮಾಣ ಪತ್ರ, ವಿದ್ಯಾರ್ಥಿಯ 4 ಭಾವಚಿತ್ರ, ಬೇರೆ ತಾಲ್ಲೂಕಿನ ವಿದ್ಯಾರ್ಥಿಗಳಾಗಿದ್ದಲ್ಲಿ ತಹಶೀಲ್ದಾರರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ, 5ನೇ ತರಗತಿಯ ಮೂಲ ಅಂಕಪಟ್ಟಿಯ 2 ಜೆರಾ–ಕ್ಸ್, ಪ್ರವೇಶ ಪರೀಕ್ಷೆಯ ಹಾಲ್ ಟಿಕೆಟ್, ವಿದ್ಯಾರ್ಥಿಯ ಆರೋಗ್ಯ ಕಾರ್ಡ್, ಪಾಲಕರ ಮೊಬೈಲ್ ಸಂಖ್ಯೆ, ಪಡಿತರ ಪುಸ್ತಕದ ಜೆರಾಕ್ಸ್ ಪ್ರತಿ, ವಿದ್ಯಾರ್ಥಿನಿಯಾಗಿದ್ದಲ್ಲಿ ಭಾಗ್ಯಲಕ್ಷ್ಮೀ ಬಾಂಡ್ ಪ್ರತಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಗರದ ಈದ್ಗಾ ರಸ್ತೆಯ ಹೀರಾಳ್‌ಕುಡಂನ ಸರ್ಕಾರಿ ಆದರ್ಶ ವಿದ್ಯಾಲಯ ಅಥವಾ ಮೊ.9740738762 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗಯಾನ ದೇಶದಲ್ಲಿ ಮೃತಪಟ್ಟ ಅನಿವಾಸಿ

# ಭಾರತೀಯನ ಮೃತ ದೇಹ ಭಾರತಕ್ಕೆ ಕರೆತರಲು ರಾಜ್ಯ ಸರ್ಕಾರದಿಂದ ಆರ್ಥಿಕ ಸಹಾಯ

ಬಳ್ಳಾರಿ,ಜು.26–ದಕ್ಷಿಣ ಅಮೆರಿಕಾದ ಗಯಾನಾ ದೇಶದ ಶೆರಿಫ್ ಜನರಲ್ ಆಸ್ಪತ್ರೆಯಲ್ಲಿ ಸ್ಟಾಫ್ ನರ್ಸ್ ಆಗಿ ಕೆಲಸ ನಿರ್ವಹಿಸುತ್ತಿದ್ದ ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕಿನ ಮದೆನಾಡು ಗ್ರಾಮದ ನಿವಾಸಿಯಾದ ಪಿ.ಬಿ ಗಿರೀಶ ಬಾಬು ಪಾಲೆ ಅವರ ಪಾರ್ಥಿವ ಶರೀರವನ್ನು ಕರೆತರಲು ರಾಜ್ಯ ಸರ್ಕಾರವು ಆರ್ಥಿಕ ಸಹಾಯ ನೀಡಿದೆ.

ಪಿ.ಬಿ ಗಿರೀಶ ಬಾಬು ಪಾಲೆ ಅವರು, ಅನಾರೋಗ್ಯದ ಕಾರಣ ಅದೇ ಆಸ್ಪತ್ರೆಯಲ್ಲಿ ದಾಖಲಾಗಿದ್ದರು. ಬಹು ಅನಿಯಮಿತ ರಕ್ತಸ್ರಾವದ ಹೃದಯಘಾತದಿಂದ ಜು.14 ರಂದು ಸಾವನ್ನಪ್ಪಿದ್ದರು. ಅನಿವಾಸಿ ಭಾರತೀಯ ಸಮಿತಿಯು ಆಸ್ಪತ್ರೆ ಹಾಗು ಭಾರತೀಯ ರಾಯಭಾರಿ ಕಚೇರಿಯೊಂದಿಗೆ ನಿರಂತರ ಸಂಪರ್ಕದಲ್ಲಿತ್ತು.

ಮೃತನ ಕುಟುಂಬಸ್ಥರಿಗೆ ಪಾರ್ಥಿವ ಶರೀರ ಭಾರತ–ಕ್ಕೆ ತರಲು ಸುಮಾರು ರೂ.12,00,000 ಆಗಬಹುದು ಎಂದು ರಾಯಭಾರಿ ಕಚೇರಿ ತಿಳಿಸಿದೆ. ಪಿ.ಬಿ ಗಿರೀಶ ಬಾಬು ಪಾಲೆ ಅವರ ಪತ್ನಿ ಜಾನಕಿ ಕೆ.ಎನ್ ಅವರು ತಮಗೆ 2 ವರ್ಷದ ಒಬ್ಬ ಮಗನಿದ್ದು, ಕುಟುಂಬವು ಆರ್ಥಿಕವಾಗಿ ಹಿಂದುಳಿದಿದೆ. ರಾಜ್ಯ ಸರ್ಕಾರದದಿಂದ ಸಹಾಯಕ್ಕಾಗಿ ಅನಿವಾಸಿ ಭಾರತೀಯ ಸಮಿತಿ ಕಚೇರಿಗೆ ಮನವಿ ಸಲ್ಲಿಸಿದ್ದರು.

ಮೃತ ದೇಹವನ್ನು ಭಾರತಕ್ಕೆ ಕರೆತರಲು ತಗಲುವ ವೆಚ್ಚವನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ಧನ ಸಹಾಯ ಮಾಡಲು ಅನಿವಾಸಿ ಭಾರತೀಯ ಸಮಿತಿ ಕಚೇರಿಯಿಂದ ಮುಖ್ಯಮಂತ್ರಿಗಳಿಗೆ ಕೋರಲಾಗಿತ್ತು.

ಮುಖ್ಯಮಂತ್ರಿಯವರ ಕಾನೂನು ಸಲಹೆಗಾರರು ಹಾಗೂ ಶಾಸಕರಾದ ಎ.ಎಸ್ ಪೊನ್ನಣ್ಣ ಅವರು ಮುಖ್ಯಮಂತ್ರಿಯವರ ಜೊತೆ ಚರ್ಚಿಸಿದ್ದು, ಮನವಿಗೆ ಸ್ಪಂದಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯ ಸರ್ಕಾರದ ವತಿಯಿಂದ ರೂ 3,60,000/– ಮಂಜೂರು ಮಾಡಿದ್ದಾರೆ. ಉಳಿಕೆ ಹಣವನ್ನು ಪಿ.ಬಿ ಗಿರೀಶ ಬಾಬು ಪಾಲೆ ಕೆಲಸ ಮಾಡುತ್ತಿದ್ದ ಶೆರಿಫ್ ಜನರಲ್ ಆಸ್ಪತ್ರೆಯವರು ಭರಿಸುತ್ತಿದ್ದು, ಗಯಾನದಲ್ಲಿರುವ ಭಾರತೀಯ ರಾಯಭಾರಿ ಕಚೇರಿ ಹಾಗೂ ನವದೆಹಲಿಯಲ್ಲಿರುವ ನಿವಾಸಿ ಆಯುಕ್ತರು ಮೃತದೇಹವನ್ನು ಭಾರತಕ್ಕೆ ತರುವುದನ್ನು ಸಂಯೋಜಿಸುತ್ತಿದ್ದು ಶೀಘ್ರವೇ ತರಲಿದೆ ಎಂದು ಅನಿವಾಸಿ ಭಾರತೀಯ ಸಮಿತಿ ಕಚೇ–ರಿಯು ಪ್ರಕಟಣೆಯಲ್ಲಿ ತಿಳಿಸಿದೆ.

# “ಮಕ್ಕಳ ಕಲಾ ಪ್ರತಿಭೆ ಕಾರ್ಯಕ್ರಮ”ದಲ್ಲಿ ಕೆ.ಸುರೇಶ ಹೇಳಿಕೆ ಅವಕಾಶ ಸದ್ಬಳಕೆ ಮಾಡಿಕೊಳ್ಳಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.26–ಮಕ್ಕಳು ತಮ್ಮಲ್ಲಿರುವ ವಿವಿಧ ರೀತಿಯ ಕಲೆಯನ್ನು ಪ್ರದರ್ಶಿಸುವ ಅವಕಾಶ ಲಭಿಸಿದಲ್ಲಿ ಅದನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಪಟೇಲ್ ನಗರದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಶಾಲಾಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿಯ ಸದಸ್ಯ ಕೆ.ಸುರೇಶ ಅವರು ಹೇಳಿದರು.

ಬುಧವಾರ ನಗರದ ಪಟೇಲ್ ನಗರ ಬಡಾವಣೆಯ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಸಭಾಂಗಣದಲ್ಲಿ ರಾಜ್ಯ ಬಾಲಭವನ ಸೊಸೈಟಿ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲಭವನ ಸಮಿತಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಬಳ್ಳಾರಿ ನಗರ ತಾಲ್ಲೂಕು ಬಾಲಭವನ ಸಮಿತಿ, ಶಾಲಾ ಶಿಕ್ಷಣಾ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ 2025–26ನೇ ಸಾಲಿನ “ಮಕ್ಕಳ ಕಲಾ ಪ್ರತಿಭೆ ಕಾರ್ಯಕ್ರಮ” ಅಂಗವಾಗಿ ಏರ್ಪಡಿಸಿದ್ದ ಮಕ್ಕಳಿಗೆ ಚಿತ್ರಕಲೆ ಸ್ಪರ್ಧೆ ಹಾಗೂ ಸಮೂಹ ನೃತ್ಯ ಸ್ಪರ್ಧೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ಹೆಚ್ಚು ಭಾಗವಹಿಸುವುದರಿಂದ ಹೆಚ್ಚು ಅವಕಾಶಗಳು ದೊರೆಯುತ್ತವೆ ಎಂದು ತಿಳಿಸಿದರು.

ಶಾಲೆಯ ಮುಖ್ಯೋಪಾಧ್ಯಾಯರಾದ ಎಂ.ಜಯಶ್ರೀ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಮಕ್ಕಳು ಉತ್ಸಾಹದಿಂದ ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ಭಾಗವಹಿಸಿದಾಗ ಸಾಮಾಜಿಕ ಕೌಶಲ್ಯಗಳ ಮೂಲಕ ಸಹಕಾರ, ನಾಯಕತ್ವ ಮತ್ತು ಸಂವಹನ ಕೌಶಲ್ಯಗಳನ್ನು ಬೆಳೆಸಿಕೊಳ್ಳಬಹುದು. ತಾಲ್ಲೂಕು ಬಾಲಭವನದ ವತಿಯಿಂದ ಏರ್ಪಡಿಸುವ ಸ್ಪರ್ಧೆಗಳಲ್ಲಿ ಮಕ್ಕಳು ಹೆಚ್ಚಿನ ಮಟ್ಟದಲ್ಲಿ ಭಾಗವಹಿಸುವುದರಿಂದ ಮಕ್ಕಳಲ್ಲಿರುವ ಪ್ರತಿಭೆಯನ್ನು ಹೊರಹಾಕಲು ಸೂಕ್ತ ವೇದಿಕೆ ಎಂದರು.

ಜಿಲ್ಲಾ ಬಾಲಭವನ ಸಮಿತಿಯ ಕಚೇರಿ ಸಹಾಯಕ ಜೀರ್ ಮಲ್ಲಿಕಾರ್ಜುನ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳಲ್ಲಿನ ಪ್ರತಿಭೆಯನ್ನು ಹೊರಹಾಕವುದೇ ಬಾಲಭವನದ ಉದ್ದೇಶವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರಾದ ಸುಭದ್ರ.ಎಸ್., ಮರೀನಾ ಲಾರೆಟ್ಟಾ ಸೇರಿದಂತೆ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಚಿತ್ರಕಲೆ ಹಾಗೂ ಸಮೂಹ ನೃತ್ಯ ಸ್ಪರ್ಧೆ ಏರ್ಪಡಿಸಲಾಗಿತ್ತು. ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದರು. ಭಾಗವಹಿಸಿದ ಮಕ್ಕಳಿಗೆ ಪ್ರಮಾಣ ಪತ್ರ ಹಾಗೂ ಪೆನ್ ವಿತರಿಸಲಾಯಿತು.

ಚಿತ್ರಕಲೆ ಸ್ಪರ್ಧೆ: ಪ್ರಥಮ –ಅನುಶ್ರೀ (7ನೇ ತರಗತಿ) ಹಾಗೂ ವೈಷ್ಣವಿ (6ನೇ ತರಗತಿ) ದ್ವಿತೀಯ –ದ್ರಾಕ್ಷಾಯಣಿ (5ನೇ ತರಗತಿ) ಹಾಗೂ ನಸೀಮ್ ಬಾನು (5ನೇ ತರಗತಿ) ತೃತೀಯ –ಅಮೂಲ್ಯ (6ನೇ ತರಗತಿ). ಸಮೂಹ ನೃತ್ಯ ಸ್ಪರ್ಧೆ: ಪ್ರಥಮ –ನಾಗವೈಷ್ಣವಿ ತಂಡ (7ನೇ ತರಗತಿ) ದ್ವಿತೀಯ –ಕೆ.ಲಕ್ಷ್ಮೀ ತಂಡ (8ನೇ ತರಗತಿ) ತೃತೀಯ –ಪಲ್ಲವಿ ತಂಡ ಮತ್ತು ಹರಿಪ್ರಿಯಾ.

ಕರ್ಮಚಾರಿ ಆಯೋಗದ ಕಾರ್ಯದರ್ಶಿ ಚಂದ್ರಕಲಾ ಸೂಚನೆ

# ಸಫಾಯಿ ಕರ್ಮಚಾರಿಗಳು, ಪೌರ ಕಾರ್ಮಿಕರಿಗೆ ಅಗತ್ಯ ಸೌಕರ್ಯ ಕಲ್ಪಿಸಿ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 26: ಜಿಲ್ಲೆಯಲ್ಲಿರುವ ಸಫಾಯಿ ಕರ್ಮಚಾರಿಗಳಿಗೆ ವಸತಿ ಸೇರಿದಂತೆ ಪುನರ್ವಸತಿ ಸೌಲಭ್ಯ ಮತ್ತು ಪೌರ ಕಾರ್ಮಿಕರಿಗೆ ಅಗತ್ಯ ಸವಲತ್ತು ಒದಗಿಸಲು ಸ್ಥಳೀಯ ಸಂಸ್ಥೆಗಳು ಕ್ರಮವಹಿಸಬೇಕು ಎಂದು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಕಾರ್ಯದರ್ಶಿ ಚಂದ್ರಕಲಾ ಅವರು ಸೂಚನೆ ನೀಡಿದರು.

ಜುಲೈ 24ರ ಗುರುವಾರದಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಸಫಾಯಿ ಕರ್ಮಚಾರಿಗಳ ಜಾಗೃತಿ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ಅವರು ಮಾತನಾಡಿದರು. ಜಿಲ್ಲೆಯಲ್ಲಿನ ಸಫಾಯಿ ಕರ್ಮಚಾರಿಗಳಿಗೆ ಸೌಲಭ್ಯ ಕೊಡುವ ವಿಷಯದಲ್ಲಿ ನಿರ್ಲಕ್ಷ್ಯ ಸಲ್ಲದು. ಕರ್ಮಚಾರಿಗಳ ಸಂಖ್ಯೆಗೆ ಅನುಗುಣವಾಗಿ ವಸತಿ ಸೌಲಭ್ಯ ಕಲ್ಪಿಸಲು ತಮ್ಮ ವ್ಯಾಪ್ತಿಯಲ್ಲಿ ಜಾಗ ಗುರುತಿಸಿ ವರದಿ ನೀಡಬೇಕು. ಜೊತೆಗೆ ಪೌರ ಕಾರ್ಮಿಕರಿಗೂ ವಸತಿ ಕಲ್ಪಿಸಲು ಕ್ರಮ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸ್ಥಳೀಯ ಸಂಸ್ಥೆಗಳಲ್ಲಿ ಕೆಲಸ ಮಾಡುವ ಪೌರಕಾರ್ಮಿಕರಿಗೆ ಮೂಲಭೂತ ಸೌಕರ್ಯ ಸೇರಿದಂತೆ ಇನ್ಸೂರೆನ್ಸ್, ಸೇಫ್ಟಿಗಳನ್ನು ಧರಿಸುವಂತೆ ಅವರಿಗೆ ಮನವರಿಕೆ ಮಾಡಬೇಕು. ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಶೌಚಾಲಯದ ನೀರು ಚರಂಡಿಗೆ ಬಾರದಂತೆ ಸಂಬಂಧಿಸಿದ ಅಧಿಕಾರಿಗಳು ನೋಡಿಕೊಳ್ಳಬೇಕು. ಅಂತಹ ಘಟನೆ ನಡೆದಲ್ಲಿ ಸಂಬಂಧಿಸಿದ ಮಾಲೀಕರಿಗೆ ನೋಟಿಸ್ ನೀಡಬೇಕೆಂದರು.

ಪೌರಕಾರ್ಮಿಕರಿಗೆ ಕೌಶಲ್ಯಾಧಾರಿತ ತರಬೇತಿ ನೀಡಬೇಕು. ಬೇರೆ–ಬೇರೆ ಕೆಲಸಗಳತ್ತ ಅವರು ಗಮನಹರಿಸುವಂತೆ ಸಂಬಂಧಿಸಿದ ಅಧಿಕಾರಿಗಳು ರ‍್ಯಾಯ ವ್ಯವಸ್ಥೆ ರೂಪಿಸಬೇಕು. ಪೌರಕಾರ್ಮಿಕರಿಗೆ ಆಯುಷ್ಮಾನ ಭಾರತ ಕಾರ್ಡ್ ಒದಗಿಸಿ ಸರ್ಕಾರದ ನಿರ್ದೇಶನದಂತೆ ವಾರ್ಷಿಕ 5 ಲಕ್ಷ ರೂ.ಗಳ ಉಚಿತ ಚಿಕಿತ್ಸೆ ಪಡೆದುಕೊಳ್ಳಲು ಅನುಕೂಲ ಕಲ್ಪಿಸಬೇಕು.

ಕಡ್ಡಾಯವಾಗಿ ಶೇ. 24.10 ಅನುದಾನದಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಪೌರಕಾರ್ಮಿಕರಿಗೂ ಆರೋಗ್ಯ ಭತ್ಯೆ ನೀಡಲು ಕ್ರಮವಹಿಸಬೇಕು. ಹಾಗೂ ಅವರ ಮಕ್ಕಳ ವಿದ್ಯಾಭ್ಯಾಸಕ್ಕೆ ತಗಲುವ ವೆಚ್ಚವನ್ನು ನೀಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನೇರಪಾವತಿಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ವಾಸಿಸಲು ಮನೆಗಳನ್ನು ಕಲ್ಪಿಸಿಕೊಡಬೇಕು. ನೇರಪಾವತಿ ಹಾಗೂ ಹೊರಗುತ್ತಿಗೆ ಪೌರಕಾರ್ಮಿಕರಿಗೆ ಮತ್ತು ವಸತಿರಹಿತ ಕಾರ್ಮಿಕರಿಗೆ ಆಶ್ರಯ ಯೋಜನೆಯಡಿಯಲ್ಲಿ ನಿವೇಶನಗಳನ್ನು ಹಂಚಿಕೆ ಮಾಡಲು ಅಗತ್ಯ ಕ್ರಮವಹಿಸಬೇಕು ಎಂದು ಸೂಚನೆ ನೀಡಿದರು.

ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನೇರ ಪಾವತಿ ಮತ್ತು ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಸ್ವಚ್ಛತಾ, ಕನಿಷ್ಠ ವೇತನ, ಇ.ಎಸ್.ಐ, ಪಿ.ಎಫ್ ಮತ್ತು ವೇತನ ಚೀಟಿ, ಇನ್ಸುರೆನ್ಸ್ ಕಡ್ಡಾಯ ಮಾಡಬೇಕು. ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಪೌರಕಾರ್ಮಿಕರು, ಸ್ಕಾವೆಂಜರ್ ಮಕ್ಕಳಿಗೆ ಪ್ರವೇಶ ಪರೀಕ್ಷೆ ಇಲ್ಲದೆ ಪ್ರವೇಶಾತಿ ಕಲ್ಪಿಸಲು ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದರು

ಈ ವೇಳೆ ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬೀನ್ ಮೊಹಪಾತ್ರ ಅವರು ಮಾತನಾಡಿ, ಪೌರಕಾರ್ಮಿಕರಿಗೆ ಮೂಲಭೂತ ಸೌಕರ್ಯಗಳು ಸೇರಿದಂತೆ ಹಲವಾರು ಸೌಲಭ್ಯಗಳನ್ನು ಈಗಾಗಲೇ ಒದಗಿಸಲಾಗಿದ್ದು, ಅವುಗಳನ್ನು ಬಳಕೆ ಮಾಡುವಂತೆ ಜಾಗೃತಿ ಮೂಡಿಸಲಾಗುವುದು. ಪಾಲಿಕೆಯಿಂದ ಸಿಗುವ ಎಲ್ಲಾ ಸೌಲಭ್ಯಗಳನ್ನು ಒದಗಿಸಿಕೊಂಡಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಕುಟುಂಬದವರೊಂದಿಗೆ ನೇರ ಸಂವಾದ: ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬೆಳಿಗ್ಗೆ 10 ಗಂಟೆಗೆ ರಾಯಚೂರು ಮಹಾನಗರಪಾಲಿಕೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಚ್ಛತಾ ಕಾರ್ಮಿಕರು, ಪೌರ ಕಾರ್ಮಿಕರು ಮತ್ತು ಗುರುತಿಸಿದ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಮತ್ತು ಮೃತಪಟ್ಟ ಮಾನ್ಯುಯಲ್ ಸ್ಕ್ಯಾವೆಂಜರ್ ಕುಟುಂಬದವರೊಂದಿಗೆ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಕಾರ್ಯದರ್ಶಿ ಚಂದ್ರಕಲಾ ಅವರು ನೇರ ಸಂವಾದ ಕಾರ್ಯಕ್ರಮವನ್ನು ಹಮ್ಮಿಕೊಂಡು ಹತ್ತಾರು ಸಮಸ್ಯೆಗಳನ್ನು ಆಲಿಸಿದರು. ಸ್ಥಳದಲ್ಲೇ ಬಗ್ಗೆಹರಿಯುವಂತ ಸಮಸ್ಯೆಗಳನ್ನು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿ ಬಗೆಹರಿಸಿದರು. ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಆಯುಕ್ತರಾದ ಮಹಾದೇವಸ್ವಾಮಿ, ಜಿಲ್ಲಾ ಪಂಚಾಯತಿಯ ಸಹಾಯಕ ಕಾರ್ಯದರ್ಶಿಗಳಾದ ಬಿ.ವೈ. ವಾಲ್ಮೀಕಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಸಿಂಧೂರು, ರಾಯಚೂರು ನಗರಾಭೀವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಈರಣ್ಣ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ಚಂದ್ರಶೇಖರ ಎಂ.ಎಸ್, ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.

# ಡಾ.ಖಾಡೆ ಅವರಿಗೆ 'ಮಧುರಚೆನ್ನ ನುಡಿಸಿರಿ ಸಾಹಿತ್ಯ ಪ್ರಶಸ್ತಿ'



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.26-ನಗರದ ಸಾಹಿತಿ ಡಾ.ಪ್ರಕಾಶ ಖಾಡೆ ಅವರಿಗೆ ಚೇತನ ಫೌಂಡೇಶನ್ ಧಾರವಾಡ ಅವರು ಕೊಡಮಾಡುವ ರಾಜ್ಯಮಟ್ಟದ 'ಮಧುರಚೆನ್ನ ನುಡಿಸಿರಿ ಸಾಹಿತ್ಯ ಪ್ರಶಸ್ತಿ' ದೊರೆತಿದೆ.

ಜುಲೈ 27 ರವಿವಾರ ವಿಜಯಪುರದ ಕಂದಗಲ್ಲ ಹನಮಂತರಾಯ ರಂಗಮಂದಿರದಲ್ಲಿ ಜರುಗುವ ವಿಜಯಪುರ ನುಡಿಸಿರಿ ಕಾರ್ಯಕ್ರಮದಲ್ಲಿ ಡಾ.ಖಾಡೆ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದೆಂದು ಅಧ್ಯಕ್ಷ ಚಂದ್ರಶೇಖರ ಮಾಡಲಗೇರಿ ತಿಳಿಸಿದ್ದಾರೆ.

ಡಾ.ಪ್ರಕಾಶ ಖಾಡೆ ಈವರೆಗೆ ಕಾವ್ಯ, ಕಥೆ, ನಾಟಕ, ಜೀವನಚರಿತ್ರೆ, ಸಂಶೋಧನೆ, ಶಿಕ್ಷಣ, ಸಂಪಾದನೆ, ಜಾನಪದ ಹಾಗೂ ವಿಮರ್ಶೆಗಳು ಸೇರಿದಂತೆ 51 ಕೃತಿಗಳನ್ನು ರಚಿಸಿದ್ದಾರೆ. ವಿಶೇಷವಾಗಿ ವಿಜಯಪುರ ಜಿಲ್ಲೆಯ ಹಲಸಂಗಿ ಗೆಳೆಯರ ಸಾಹಿತ್ಯ ಸಾಧನೆ ಕುರಿತು ಅಧ್ಯಯನ, ಸಂಶೋಧನೆಯನ್ನು ಕಳೆದ ಎರಡು ದಶಕಗಳಿಂದ ಮಾಡಿಕೊಂಡು ಬಂದಿದ್ದಾರೆ.

ಹಂಪಿ ಕನ್ನಡ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪಡೆದಿರುವ ಪ್ರಕಾಶ ಖಾಡೆ, ಕನ್ನಡ ನವೋದಯ ಸಾಹಿತ್ಯದ ನಾಲ್ಕನೆಯ ಕೇಂದ್ರವಾಗಿ ಹಲಸಂಗಿಯನ್ನು ಘೋಷಿಸಬೇಕೆಂದು ಒತ್ತಾಯಿಸಿದ್ದರು. ಈಗ ಕರ್ನಾಟಕ ಸರಕಾರ ಹಲಸಂಗಿ ಪ್ರತಿಷ್ಠಾನ ಸ್ಥಾಪಿಸಿದ್ದು, ಅದರ ಕೆಲಸಗಳು ನಿರಂತರವಾಗಿ ಸಾಗಿವೆ.

ಹಲಸಂಗಿ ಗೆಳೆಯರಲ್ಲಿ ಮಧುರಚೆನ್ನರು ಆದ್ಯ ಕವಿಗಳು ಅವರ ಹೆಸರಿನಲ್ಲಿ ನನಗೆ ಪ್ರಶಸ್ತಿ ಲಭಿಸಿರುವುದು ಹೆಮ್ಮೆಯ ಸಂಗತಿ ಎಂದು ಡಾ.ಪ್ರಕಾಶ ಖಾಡೆ ತಿಳಿಸಿದ್ದಾರೆ.

# ಮುಧೋಳ ತಾಲೂಕಿನ ವಿವಿಧೆಡೆ ಭೇಟಿ ಬರಗಿ ನಿವಾಸಿಗಳ ಸಮಸ್ಯೆಗಳ ಆಲಿಸಿದ ಡಿಸಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.26-ಜಿಲ್ಲೆಯ ಮುಧೋಳ ತಾಲೂಕಿನ ಬರಗಿ ಗ್ರಾಮದ ಎಸ್.ಸಿ ಕಾಲೋನಿಗೆ ಜಿಲ್ಲಾಧಿಕಾರಿ ಸಂಗಪ್ಪ ಶನಿವಾರ ಭೇಟಿ ನೀಡಿ ಅಲ್ಲಿಯ ನಿವಾಸಿಗಳ ಸಮಸ್ಯೆಗಳನ್ನು ಆಲಿಸಿ, ಪರಿಹಾರಕ್ಕೆ ಕ್ರಮವಹಿಸುವುದಾಗಿ ತಿಳಿಸಿದರು.

ಗ್ರಾಮಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಸಮುದಾಯ ಶೌಚಾಲಯ, ಸಾರ್ವಜನಿಕ ಸ್ಮಶಾನದಲ್ಲಿ ಅಂತ್ಯ ಸಂಸ್ಕಾರಕ್ಕೆ ಅವಕಾಶ ಕಲ್ಪಿಸದೇ ಇರುವುದು, ಸ್ವಯಂ ಉದ್ಯೋಗ ಕೈಗೊಳ್ಳಲು ಬಿಡಿಸಿಸಿ ಬ್ಯಾಂಕ್‌ನಲ್ಲಿ ಸಾಲ ಸೌಲಭ್ಯ, ಜಲಜೀವನ ಮಿಷಯ ಯೋಜನೆಯಡಿ ಕೈಗೊಂಡ ಕಾಮಗಾರಿ ಪೂರ್ಣಗೊಂಡಿದ್ದು, ನೀರು ಸರಬರಾಜು ಆಗದೇ ಇರುವುದು ಸೇರಿದಂತೆ ಅನೇಕ ಸಮಸ್ಯೆಗಳನ್ನು ಜಿಲ್ಲಾಧಿಕಾರಿಗಳು ಮುಂದಿಟ್ಟರು. ಗ್ರಾಮಕ್ಕೆ ಬಸ್‌ಗಳು ಸರಿಯಾಗಿ ಬರುತ್ತಿಲ್ಲ. ಇದರಿಂದ ಮಕ್ಕಳು ಸರಿಯಾದ ವೇಳೆಯಲ್ಲಿ ಶಾಲೆಗೆ ಹೋಗಲು ತೊಂದರೆಯಾಗುತ್ತಿದೆ ಎಂದು ಹೇಳಿದರು.

ನಿವಾಸಿಗಳ ಸಮಸ್ಯೆ ಆಲಿಸಿದ ಜಿಲ್ಲಾಧಿಕಾರಿಗಳು, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಈ ಬಗ್ಗೆ ಕ್ರಮವಹಿಸುವಂತೆ ನಿರ್ದೇಶನ ನೀಡಲಾಗುವುದೆಂದು ತಿಳಿಸಿದರು. ಮಹಿಳೆಯರು ಮತ್ತು ಮಕ್ಕಳ ಆರೋಗ್ಯದ ಬಗ್ಗೆ ಕಾಳಜಿ ವಹಿಸುವದರ ಜೊತೆಗೆ ಹೆಣ್ಣು ಮಕ್ಕಳನ್ನು ತಪ್ಪದೇ ಶಾಲೆಗೆ ಕಳುಹಿಸಲು ಮುಂದಾಗಬೇಕು ಎಂದರು. ನಂತರ ಬರಗಿ ಗ್ರಾಮ ಚಾವಡಿಗೆ ಭೇಟಿ ನೀಡಿ, ಗ್ರಾಮ ಆಡಳಿತ ಅಧಿಕಾರಿಗಳ ದಪ್ತರ ತಪಾಸಣೆ ಮಾಡಿ ಸಾರ್ವಜನಿಕರಿಗೆ ಸರಕಾರದ ಯೋಜನೆ, ಸೌಲಭ್ಯಗಳನ್ನು ಸಕಾಲದಲ್ಲಿ ಒದಗಿಸುವಂತೆ ಸೂಚನೆ ನೀಡಿದರು. ಇ-ಪೌತಿ ಆಂದೋಲನದಲ್ಲಿ ವೇಗವಾಗಿ ಪ್ರಗತಿ ಸಾಧಿಸುವಂತೆ ಸೂಚನೆ ನೀಡಿದರು.

ಕುಳಲಿ ಗ್ರಾಮದ ಕಿತ್ತೂರರಾಣಿ ಚೆನ್ನಮ್ಮ, ಮುರಾರ್ಜಿ ವಸತಿ ಶಾಲೆಗೆ ಭೇಟಿ ನೀಡಿ ಅಲ್ಲಿಯ ಮಕ್ಕಳ ಜೊತೆ ಸಂವಾದ ನಡೆಸಿ, ಮಕ್ಕಳ ಆರೋಗ್ಯದ ಬಗ್ಗೆ ವಿಚಾರಿಸಿದರು. ಶಾಲಾ ಆಟದ ಮೈದಾನ, ಗಾರ್ಡನ್ ಹಾಗೂ ಶಾಲಾ ಕೊಠಡಿಗಳನ್ನು ವೀಕ್ಷಣೆ ಮಾಡಿದರು. ಶುಚಿತ್ವಕ್ಕೆ ಹೆಚ್ಚಿನ ಒತ್ತು ನೀಡಬೇಕು. ಊಟದ ಕೋಣೆ ಹಾಗೂ ದಾಸ್ತಾನು ಕೊಠಡಿಗೆ ತೆರಳಿ ಪರಿಶೀಲಿಸಿದಾಗ ತರಕಾರಿ ತಾಜಾ ಇಲ್ಲದಿರುವದನ್ನು ಗಮನಿಸಿ ಸಂಬಂಧಿಸಿದ ಟೆಂಡರ್‌ದಾರರಿಗೆ ನೋಟಿಸ್ ನೀಡಲು ಸೂಚಿಸಿದರು. ಇದಕ್ಕಾಗಿ ಸರಕಾರ ಸಾಕಷ್ಟು ಹಣ ಖರ್ಚು ಮಾಡುತ್ತಿದ್ದು, ಮಕ್ಕಳಿಗೆ ಗುಣಮಟ್ಟದ ಆಹಾರ ನೀಡುವ ಕೆಲಸವಾಗಬೇಕು ಎಂದರು.

ಜಮಖಂಡಿ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ, ಮುಧೋಳ ತಹಶೀಲ್ದಾರ ಮಹಾದೇವ ಸನಮೂರೆ, ರಬಕವಿ-ಬನಹಟ್ಟಿ ತಹಶೀಲ್ದಾರ ಗಿರೀಶ ಸ್ವಾದಿ ಸೇರಿದಂತೆ ಇತರೆ ಅಧಿಕಾರಿಗಳು ಇದ್ದರು.

# ದಿ.29 ರಿಂದ ಶಿವ ದೇಗುಲದಲ್ಲಿ ಪುರಾಣ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ : - ಜು 26 ಪವಿತ್ರ ಶ್ರಾವಣ ಮಾಸದ ನಿಮಿತ್ಯ ಐತಿಹಾಸಿಕ ನಾರಾಯಣಪೂರ ಗ್ರಾಮದ ಶಿವ ದೇವಸ್ಥಾನ ದಲ್ಲಿ ಪ್ರತಿ ವರ್ಷದಂತೆ ಈ ವರ್ಷ ಕೂಡ ಒಂದು ತಿಂಗಳ ಕಾಲ ಪುರಾಣ, ಪ್ರವಚನ ಜರುಗಲಿದೆ. ಇದೆ ದಿ.29 ರಂದು ಪೂಜ್ಯ ಮಾತೋಶ್ರೀ



ನಾಗಮಣಿ ತಾಯಿ ಅವರಿಂದ ಶಿವ ಶರಣೆ ಹೇಮರೆಡ್ಡಿ ಮಲ್ಲಮ್ಮ ತಾಯಿಯ ಜೀವನ ಚರಿತ್ರೆ ಕುರಿತು ಪುರಾಣ ರಾತ್ರಿ 8:30 ರಿಂದ 10:30 ರ ಜರುಗಲಿದೆ. ನಂತರ ಪ್ರಸಾದ ವ್ಯವಸ್ಥೆ ಇರಲಿದೆ. ಶಿವ ದೇಗುಲದಲ್ಲಿ ಶ್ರಾವಣ ಮಾಸದ ನಿಮಿತ್ತ ವಿಶೇಷ ಪೂಜೆ, ಅಭಿಷೇಕ, ಭಜನೆ, ಸೇರಿದಂತೆ ವಿವಿಧ ಧಾರ್ಮಿಕ ಚಟುವಟಿಕೆಗಳು ಜರುಗಲಿವೆ ಎಂದು ಶಿವದೇವಸ್ಥಾನದ ಆಡಳಿತ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೂಜ್ಯರನ್ನ ಸತ್ಕರಿಸಿ ಗೌರವಿಸಿದ ವೀರಶೈವ ನಿಗಮ ಮಂಡಳಿ ಅಧ್ಯಕ್ಷ ಕಾಶಪ್ಪನವರ್




ಮಲ್ಲಮ್ಮ ನುಡಿ ವಾರ್ತೆ

ಇಳಕಲ್ಲ :26- ವರ್ಷಗಳ ನಂತರ ಒಂದೇ ವೇದಿಕೆ ಮೇಲೆ ಸಮಾಗಮರಾದ ಪೂಜ್ಯ ಜಗದ್ಗುರುಗಳ ಡಾವಣಗೇರಯಲ್ಲಿ ಇತ್ತಿಚೇಗೆ 2 ದಿನಗಳ ಕಾಲ ನಡೆದ ಶ್ರೀ ಜಗದ್ಗುರು ಪಂಚಪೀಠಾಧೀಶ್ವರರ ದಿವ್ಯ ಸಾನಿಧ್ಯದಲ್ಲಿ ವೀರಶೈವ ಪೀಠಾಚಾರ್ಯರ ಹಾಗೂ ಶೃಂಗಸಮ್ಮೇಳನ ಕಾರ್ಯಕ್ರಮ ಮುಗಿಸಿ ಶ್ರೀಮಠಕ್ಕೆ ತೆರಳುತ್ತಿದ್ದ

ಪೂಜ್ಯ ಡಾ ಷ,ಬ್ರ, ಶಿವಕುಮಾರ್ ಶಿವಾಚಾರ್ಯ ಮಹಾಸ್ವಾಮಿಗಳು

ಚರಂತಿಮಠ ಕೆರೂರ ಪೂಜ್ಯ ಡಾ ಷ,ಬ್ರ,ನೀಲಕಂಠ ಮಹಾಸ್ವಾಮಿಗಳು ಅಮರೇಶ್ವರ ಶ್ರೀಮಠ ಗುಳೇದಗುಡ್ಡ ಇಳಕಲ್ಲ ಪೂಜ್ಯಶ್ರೀ ಷ,ಬ್ರ,ಶಿವಪೂಜಾ ಶಿವಾಚಾರ್ಯ ಮಹಾಸ್ವಾಮಿಗಳು ನವಗ್ರಹ ಹಿರೇಮಠ ಬದಾಮಿ ಪೂಜ್ಯ ಮಹಾಸ್ವಾಮಿಗಳು ಮಾರ್ಗ ಮಧ್ಯ ಇಳಕಲ್ಲ ನಗರದಲ್ಲಿ

ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹುನಗುಂದ ಮತಕ್ಷೇತ್ರದ ಶಾಸಕರಾದ ವಿಜಯಾನಂದ ಎಸ್ ಕಾಶಪ್ಪನವರ ಅಪೇಕ್ಷೆ ಮೇರೆಗೆ ನಿವಾಸಕ್ಕೆ ಭೇಟಿ ನೀಡಿ ಆರ್ಶಿವಾದ ನೀಡಿದರು.

ಇದೇ ಸಂದರ್ಭದಲ್ಲಿ ಪೂಜ್ಯ ಶಿವಾಚಾರ್ಯರ ಪೂಜ್ಯರಿಗೆ ಶಾಸಕ ವಿಜಯಾನಂದ ಕಾಶಪ್ಪನವರು ಸನ್ಮಾನಿಸಿ ಗೌರವಿಸಿದರು

ಹುನಗುಂದ ಮತಕ್ಷೇತ್ರ ಕೂಡಲಸಂಗಮದಲ್ಲಿ ಪಂಚಪೀಠಾಧೀಶ್ವರರ ಅಡ್ಡಪಲ್ಲಕ್ಕಿ ಮಹೋತ್ಸವ ಕಾರ್ಯಕ್ರಮ ಕುರಿತು ಚರ್ಚೆ ನಡೆಸಲಾಯಿತು.

ಇದೇ ಸಂದರ್ಭದಲ್ಲಿ ಇಲಕಲ್ಲ ತಾಲೂಕ ವೀರಶೈವ ಜಂಗಮ ಸಮಾಜದ ಪ್ರಧಾನ ಕಾರ್ಯದರ್ಶಿ ಶ್ರೀ ಜಗದ್ಗುರು ಪಂಚಾಚಾರ್ಯ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾದ ಸಂಗಮೇಶ ಜಾವುರಮಠ ಹಾಗೂ ನಿರ್ದೇಶಕರಾದ ಸಚಿನ ಸಾಲಿಮಠ ಇತರರು ಇದ್ದರು.

# ಯುವಕರು ದೇಶಾಭಿಮಾನ ಬೆಳೆಸಿಕೊಳ್ಳಬೇಕು-ನರಗುಂದ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.26-ವಿದ್ಯಾರ್ಥಿಗಳು ದೇಶಾಭಿಮಾನ ಬೆಳೆಸಿಕೊಂಡು ದೇಶ ರಕ್ಷಣೆಯಲ್ಲಿ ಮಹತ್ವದ ಪಾತ್ರವಹಿಸಬೇಕು ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಮತ್ತು ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಎನ್‌ಸಿಸಿ ಘಟಕ ಹಾಗೂ ಐಕ್ಯೂಎಸಿ ಶನಿವಾರ ಆಯೋಜಿಸಿದ್ದ ಕಾರ್ಗಿಲ್ ವಿಜಯ ದಿವಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಭಾರತೀಯರು ಹೆಮ್ಮೆ ಪಡುವಂತಹ ಈ ದಿವಸ ಶೌರ್ಯ ಮತ್ತು ಪರಾಕ್ರಮದ ಸಂಕೇತವಾಗಿದೆ. ವೀರಯೋಧರ ಕೆಚ್ಚೆದೆಯ ಹೋರಾಟದ ಫಲಶ್ರುತಿಯೇ ಈ ಕಾರ್ಗಿಲ್ ವಿಜಯವಾಗಿದೆ. ಪ್ರತಿಕೂಲಕರ ವಾತಾವರಣದಲ್ಲೂ ಹೋರಾಡಿ ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದ ಹೆಮ್ಮೆಯ ಸೈನಿಕರ ತ್ಯಾಗ-ಬಲಿದಾನವನ್ನು ವಿದ್ಯಾರ್ಥಿಗಳು ಕೃತಜ್ಞತೆಯಿಂದ ಸ್ಮರಿಸಬೇಕು ಎಂದರು.

ಹಲವು ಸವಾಲುಗಳ ಮಧ್ಯೆ ಭಾರತೀಯ ವೀರಯೋಧರು ಜೀವದ ಹಂಗು ತೊರೆದು ಹೋರಾಡಿ ಶತ್ರು ಸೈನ್ಯವನ್ನು ಬಗ್ಗು ಬಡಿದು ದೇಶಕ್ಕೆ ಜಯ ತಂದುಕೊಟ್ಟದ್ದನ್ನು ನಾವು ಮರೆಯಬಾರದು. ಜನತೆ ನೆಮ್ಮದಿಯಿಂದ ಬದುಕುತ್ತಿದ್ದಾರೆ ಎಂದರೆ ಅದಕ್ಕೆ ವೀರಯೋಧರೇ ಕಾರಣ. ವಿದ್ಯಾರ್ಥಿಗಳು ಯೋಧರ ಬಗ್ಗೆ ಗೌರವ ಬೆಳೆಸಿಕೊಳ್ಳಬೇಕು. ಅವರ ಹೋರಾಟದಿಂದ ಪ್ರೇರಣೆ ಪಡೆಯಬೇಕು ಎಂದರು.

ಮೊಂಬತ್ತಿಯನ್ನು ಬೆಳಗಿಸಿ ಕಾರ್ಗಿಲ್ ಹುತಾತ್ಮರಿಗೆ ಗೌರವ ನಮನ ಸಲ್ಲಿಸಲಾಯಿತು. ಇದಕ್ಕೂ ಮೊದಲು ಮಹಾವಿದ್ಯಾಲಯದ ಆವರಣದಲ್ಲಿ ನಡೆದ ಜಾಥಾದಲ್ಲಿ ಎನ್‌ಸಿಸಿ ಕೆಡೆಟ್ಸ್, ವಿದ್ಯಾರ್ಥಿ ಹಾಗೂ ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ ಪಾಲ್ಗೊಂಡರು. ಕೀರ್ತಿ ದಾಸರ ಪ್ರಾರ್ಥಿಸಿದರು. ಎನ್‌ಸಿಸಿ ಅಧಿಕಾರಿ ಲೆಫ್ಟಿನೆಂಟ ಮಂಜುನಾಥ ಕೋರವಾರ ಸ್ವಾಗತಿಸಿದರು. ಶ್ವೇತಾ ಕುಲಕರ್ಣಿ ನಿರೂಪಿಸಿದರು.

## ಕಾರ್ಗಿಲ್ ವಿಜಯೋತ್ಸವ-ವಿಶೇಷ ಉಪನ್ಯಾಸ:

# ಎಲ್ಲ ಧರ್ಮಗಳಿಗಿಂತ ರಾಷ್ಟ್ರಧರ್ಮ ಮುಖ್ಯ : ಸುಧಿಂದ್ರ ಇಟ್ನಾಳ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.26-ಎಲ್ಲ ಧರ್ಮಗಳಿಂತ ರಾಷ್ಟ್ರಧರ್ಮ ಮುಖ್ಯವಾಗಿದ್ದು, ದೇಶಕ್ಕಾಗಿ ವೀರ ಬಲಿದಾನಗೈದ ಅನೇಕ ವೀರರನ್ನು ಇಂದಿನ ಯುವ ಪೀಳಿಗೆಗೆ ಪರಿಚಯಿಸುವ ಮೂಲಕ ಅವರನ್ನು ಸ್ಮರಿಸುವುದು ನಮ್ಮೆಲ್ಲರ ಆದ್ಯಕರ್ತವ್ಯ ಎಂದು ಬ್ರಿಗೇಡಿಯರ ಸುಧಿಂದ್ರ ಇಟ್ನಾಳ ಹೇಳಿದರು.

ವಿದ್ಯಾಗಿರಿಯ ಬಸವೇಶ್ವರ ಇಂಜನಿಯರಿಂಗ್ ಕಾಲೇಜಿನ ನೂತನ ಸಭಾಭವನದಲ್ಲಿ ಶನಿವಾರ ಕಾರ್ಗಿಲ್ ವಿಜಯೋತ್ಸವ ನಿಮಿತ್ಯ ಕಾರ್ಗಿಲ್ ಕದನ-ಕಥನ ಹಾಗೂ ಆಪರೇಷನ್ ಸಿಂಧೂರ ಕುರಿತು ನಡೆದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಇತಿಹಾಸದ ಘಟನೆಗಳ ಅರಿವು ಮುಖ್ಯವಾಗಿದ್ದು, ಇಂದು ನಾವು ಇರುವ ಸ್ಥಿತಿ ನಮ್ಮಿಂದ ನಿರ್ಮಿತವಾದದ್ದು ಅಲ್ಲ, ಆದಿಕಾಲದಿಂದ ಅನೇಕ ಜನರು ದೇಶವನ್ನು ಸದೃಢ ಮಾಡಲು ದೇಶಕ್ಕಾಗಿ ತಮ್ಮನ್ನೇ ಸಮರ್ಪಿಸಿಕೊಂಡಿದ್ದಾರೆ. ಅಂತ ವೀರರನ್ನು ನೆನೆಯುವಂಥ ಕಥಾ ಕಥನಗಳನ್ನು ಇಂದಿನ ಯುವ ಪೀಳಿಗೆಗೆ ಪರಿಚಯಿಸಬೇಕಿದೆ ಎಂದ ಇಟ್ನಾಳ, ಎಲ್ಲ ಧರ್ಮಗಳಿಗಿಂತ ರಾಷ್ಟ್ರಧರ್ಮ ಮುಖ್ಯವಾಗಿದೆ ಎಂದು ಹೇಳಿದರು.

ಮುಖ್ಯ ಭಾಷಣಕಾರ ನಂದು ಗಾಯಕವಾಡ ಮಾತನಾಡಿ, ಕಾರ್ಗಿಲ್ ಯುದ್ಧದ ಘಟನಾವಳಿಗಳ ಮೂಲಕ ವೀರ ಮರಣವನ್ನಪ್ಪಿದ ಸೈನಿಕರ ಕುಟುಂಬಗಳ ದೇಶಭಕ್ತಿಯ ನೈತಿಕ ಸ್ಥೈರ್ಯದ ಬಗ್ಗೆ ಮನಮಿಡಿಯುವಂತೆ ಎಳೆ ಎಳೆಯಾಗಿ ಬಿಚ್ಚಿಟ್ಟರು.

ಬರುವಂತ ಗಣೇಶ ಉತ್ಸವದಲ್ಲಿ ಸೈನಿಕರ ಹಾಗೂ ಮಾಜಿ ಸೈನಿಕರ ತಂದೆ ತಾಯಿಗಳನ್ನು ಸನ್ಮಾನಿಸಿ ಗೌರವಿಸುವ ಮೂಲಕ ಸೈನಿಕರಿಗೆ ಕೃತಜ್ಞತೆಗಳನ್ನು ಸಲ್ಲಿಸೋಣ, ತಂದೆ ತಾಯಿಗೆ ಮಗನಾಗಿ ದೇಶ ಕಟ್ಟುವ ತರುಣ ತರುಣಿಯರು ಖಿನ್ನತೆಗೆ ಒಳಗಾಗದೆ, ದೇಶದ ಸೈನಿಕರ ಆತ್ಮಶಕ್ತಿಯನ್ನು ತುಂಬವು ತಂದೆ ತಾಯಿಗೆ ಉತ್ತಮ ಮಕ್ಕಳಾಗುವ ಸಂಕಲ್ಪ ಮಾಡೋಣ ಎಂದರು.

ಅಧ್ಯಕ್ಷತೆವಹಿಸಿದ್ದ ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಮಾತನಾಡಿ, ಸ್ವಾತಂತ್ರ್ಯ ಹೋರಾಟದಲ್ಲಿ ಲಕ್ಷ, ಲಕ್ಷ ಜನರ ಬಲಿದಾನ ಹಾಗೂ ಸ್ವಾತಂತ್ರ್ಯ ದೊರತ ಮೇಲೆ 70 ಸಾವಿರ ಸೈನಿಕರನ್ನು ಕಳೆದುಕೊಂಡಿದ್ದರ ಬಗ್ಗೆ ಹಾಗೂ ಯುದ್ಧದ ವಸ್ತುಸ್ಥಿತಿಗಳ ಬಗ್ಗೆ ಇಂದಿನ ಯುವ ಜನಾಂಗ ಮೆಲಕು ಹಾಕುವ ಮೂಲಕ ಹುತಾತ್ಮರನ್ನು ಸ್ಮರಣೆ ಮಾಡುವ ಕೆಲಸವಾಗಬೇಕು ಎಂದರು.

ಇದೇ ಸಂಧರ್ಭದಲ್ಲಿ ಮಾಜಿ ಸೈನಿಕರನ್ನು ಸನ್ಮಾನಿಸಿ, ಗೌರವಿಸಲಾಯಿತು. ಇದಕ್ಕೂ ಮುಂಚೆ ವಿದ್ಯಾಗಿರಿ ಬಸವೇಶ್ವರ ಇಂಜಿನೀಯರಿಂಗ ಕಾಲೇಜು ವೃತ್ತದಿಂದ ನೇತಾಜಿ ಹಾಸ್ಟೆಲ್ ಮಾರ್ಗವಾಗಿ ನೂತನ ಸಭಾಭವನದವರೆಗೆ ರಾಷ್ಟ್ರಧ್ವಜದ ಮೆರವಣಿಗೆ ಮಾಡಲಾಯಿತು.

ಸಮಾರಂಭದಲ್ಲಿ ಮಹಾಂತೇಶ ಶೆಟ್ಟರ, ರಾಜು ರೇವಣಕರ, ಬಸವರಾಜ ಯಂಕಂಚಿ, ಬಸವರಾಜ ಹುನಗುಂದ, ಉಮೇಶ ಹಂಚಿನಾಳ, ಶ್ರೀಧರ ನಾಗರಬೆಟ್ಟ, ಸವಿತಾ ಲೆಂಕೆನ್ನವರ, ಶೋಭಾ ರಾವ್, ಜ್ಯೋತಿ ಭಜಂತ್ರಿ, ಭಾಗ್ಯಶ್ರೀ ಹಂಡಿ, ಸುರೇಶ ಮಜ್ಜಗಿ, ಮಂಜುನಾಥ ಶಿರೂರ, ಮಾರುತಿ ಪಾಟೋಳಿ ಸೇರಿದಂತೆ ಅನೇಕರು ಭಾಗವಹಿಸಿದ್ದರು. ವಿಜಯಲಕ್ಷ್ಮೀ ಬಡಿಗೇರ, ರೇವಣ್ಣ ಬೆಣ್ಣೂರ ವಂದೇ ಮಾತರಂ ಹೇಳಿದರು.

# 9 ಕ್ವಿಂಟಾಲ್ ಪಡಿತರ ಅಕ್ಕಿ ಜಪ್ತಿ ಆರೋಪಿ ಬಂಧನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಸರ್ಕಾರದ ವಿವಿಧ ಯೋಜನೆಗಳ ಅಡ್ಡಿಯಲ್ಲಿ ಬಡವರಿಗೆ ನೀಡುವ ಪಡಿತರ ಅಕ್ಕಿಯನ್ನು ಕಡಿಮೆ ಬೆಲೆಗೆ ಖರೀದಿಸಿ ಹೆಚ್ಚಿನ ಬೆಲೆಗೆ ಕಾಳಸಂತೆಯಲ್ಲಿ ಮಾರಾಟ ಮಾಡಲು ಮನೆಯಲ್ಲಿ ಸಂಗ್ರಹಿಸಿಟ್ಟ 9 ಕ್ವಿಂಟಾಲ್ ಅಕ್ಕಿಯನ್ನು ಚಿಟಗುಪ್ಪ ತಹಶೀಲ್ದಾರರು ಹಾಗೂ ಸಿಪಿಐ ಇವರ ಮಾರ್ಗದರ್ಶನ ಮೇರೆಗೆ ಪಿಎಸ್‌ಐ ಬಸಲಿಂಗಪ್ಪ ಗೋಧಿಹಾಳ ಹಾಗೂ ಆಹಾರ ನಿರೀಕ್ಷಕ ರಾಜು ಪಂಚಾಳ ಮತ್ತು ಪೊಲೀಸ್ ಸಿಬ್ಬಂದಿ ವರ್ಗದವರು ದಾಳಿ ಮಾಡಿ ಓರ್ವ ವ್ಯಕ್ತಿಯನ್ನು ಶುಕ್ರವಾರ ಬಂಧಿಸಲಾಗಿದೆ. ಪಟ್ಟಣದ ದಸ್ತಗಿರಿ ಮೊಹಲ್ಲಾದ ಮದೀನಾ ಮಜ್ಜಿದ್ ಹತ್ತಿರ ಅಲಿ ಅಹ್ಮದ್ ಇಸ್ಮಾಯಿಲ್ ಝುಂಡವಾಲೆ ಎಂಬುವರ ಮನೆಯಲ್ಲಿ ಅಕ್ರಮವಾಗಿ ಸಂಗ್ರಹಿಸಿಟ್ಟ 9 ಕ್ವಿಂಟಾಲ್ ಅಂದಾಜು 19ಸಾವಿರ ರೂಪಾಯಿ ಮೌಲ್ಯದ ಪಡಿತರ ಅಕ್ಕಿಯನ್ನು ಪಂಚರ ಸಮ್ಮುಖದಲ್ಲಿ ಜಪ್ತಿ ಮಾಡಿಕೊಂಡು ಆರೋಪಿ ವಿರುದ್ಧ ಚಿಟಗುಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ತನಿಖೆ ಮುಂದುವರಿದಿದೆ.

## ವ್ಯಸನ ಮುಕ್ತ ದಿನಾಚರಣೆಯು ಅರ್ಥಪೂರ್ಣವಾಗಿ

# ನಡೆಯಲಿ: ಅಪರ ಜಿಲ್ಲಾಧಿಕಾರಿ ಶಿವಾನಂದ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 26- ಚಿತ್ತರಗಿ ಇಳಕಲ್ಲಿನ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನದ

ಪೂಜ್ಯ ಶ್ರೀ ಡಾ.ಮಹಾಂತ ಶಿವಯೋಗಿ ಸ್ವಾಮೀಜಿ ಅವರ ಜನ್ಮ ದಿನದ ಅಂಗವಾಗಿ ಆಗಸ್ಟ್ 1ರಂದು ಆಚರಿಸಲ್ಪಡುವ ವ್ಯಸನ ಮುಕ್ತ ದಿನಾಚರಣೆಯ ಕಾರ್ಯಕ್ರಮವನ್ನು ಜಿಲ್ಲಾ ಹಾಗೂ ತಾಲೂಕು ಕೇಂದ್ರಗಳಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸೂಚನೆ ನೀಡಿದರು.

ಜುಲೈ 22ರಂದು ನೂತನ ಜಿಲ್ಲಾಧಿಕಾರಿಗಳ ಆವರಣದಲ್ಲಿನ ತಮ್ಮ ಕಚೇರಿಯಲ್ಲಿ ನಡೆದ ವ್ಯಸನ ಮುಕ್ತ ದಿನಾಚರಣೆಯ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಅವರು ಮಾತನಾಡಿದರು.

ಡಾ.ಮಹಾಂತ ಶಿವಯೋಗಿಗಳ ಜನ್ಮದಿನಾಚರಣೆಯ ವ್ಯಸನಮುಕ್ತ ದಿನಾಚರಣೆಯ ಜಿಲ್ಲಾ ಕೇಂದ್ರದ ಕಾರ್ಯಕ್ರಮವನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕಾರಿಗಳು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ಇನ್ನಿತರ ಇಲಾಖೆಗಳು ಮತ್ತು ಜಿಲ್ಲೆಯ ವಿವಿಧ ಸಂಘ-ಸಂಸ್ಥೆಗಳ ಸಹಯೋಗದೊಂದಿಗೆ ಆಯೋಜನೆ ಮಾಡಬೇಕು. ವಿದ್ಯಾರ್ಥಿ ಯುವಜನರಿಗೆ ವಿಶೇಷ ಸಂದೇಶ ಹೋಗುವ ರೀತಿಯಲ್ಲಿ ಅರ್ಥಪೂರ್ಣವಾಗಿ ದಿನಾಚರಣೆ ನಡೆಸಲು ಈಗಿನಿಂದಲೇ ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಮದ್ಯ ಮತ್ತು ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜನರಲ್ಲಿ ಮತ್ತು ಶಾಲಾ ಕಾಲೇಜು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಆಗಸ್ಟ್ 1ರಂದು ವ್ಯಸನಮುಕ್ತ ದಿನಾಚರಣೆಯನ್ನು ಜಿಲ್ಲೆಯಾದ್ಯಂತ ಎಲ್ಲ ಶಾಲಾ-ಕಾಲೇಜುಗಳಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಆಯಾ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮತ್ತು ಸಂಬಂಧಿಸಿದ ಅಧಿಕಾರಿಗಳಿಗೆ ಪತ್ರ ಬರೆದು ಅಗತ್ಯ ಕ್ರಮ ವಹಿಸಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಆಗಸ್ಟ್ 1ರಂದು ಡಾ.ಮಹಾಂತ ಶಿವಯೋಗಿಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಕೆ, ಪ್ರತಿಜ್ಞಾವಿಧಿ ಬೋಧನೆ, ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಬೇಕು. ಮದ್ಯ ಮತ್ತು ಮಾದಕವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ವಿಷಯದ ಮೇಲೆ ಶಾಲೆಯೊಂದರ ಮಕ್ಕಳಿಗೆ ಪ್ರಬಂಧ ಸ್ಪರ್ಧೆ ಏರ್ಪಡಿಸಿ ಅರಿವು ಮೂಡಿಸಬೇಕು ಎಂದು ಬೇರೆ ಬೇರೆ ಇಲಾಖೆಯ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಜವಾಬ್ದಾರಿ ಹಂಚಿಕೆ ಮಾಡಿದರು. ವ್ಯಸನಮುಕ್ತ ದಿನಾಚರಣೆ ಹಿನ್ನೆಲೆಯಲ್ಲಿ ಮದ್ಯ ಮತ್ತು ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಜಿಲ್ಲೆಯ ಕವಿಗಳು, ಸಾಹಿತಿಗಳು, ಚಿಂತಕರಿಂದ ಲೇಖನ, ಕವಿತೆ, ಚುಟುಕು ಆಹ್ವಾನಿಸಿ ಅವುಗಳನ್ನು ದಿನಪತ್ರಿಕೆಗಳಿಗೆ ಕಳುಹಿಸಿ ಪ್ರಕಟಿಸಲು ಕ್ರಮವಹಿಸಬೇಕು ಎಂದು ಜಿಲ್ಲಾ ವಾರ್ತಾಧಿಕಾರಿಗಳಿಗೆ ಸೂಚನೆ ನೀಡಿದರು.

ತಹಸೀಲ್ದಾರರರಿಗೆ ಸೂಚನೆ: ವ್ಯಸನ ಮುಕ್ತ ದಿನಾಚರಣೆಯನ್ನು ಎಲ್ಲ ತಾಲೂಕು ಕೇಂದ್ರಗಳಲ್ಲಿ ತಹಸೀಲ್ದಾರಗಳ ನೇತೃತ್ವದಲ್ಲಿ ಆಯೋಜನೆ ಮಾಡಬೇಕು. ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಆಚರಣೆ ಮಾಡಲು ಈಗಿನಿಂದಲೇ ಸಿದ್ಧತೆ ಕೈಗೊಳ್ಳಬೇಕು ಎಂದು ರಾಯಚೂರ ಜಿಲ್ಲೆಯ ಸಿಂಧನೂರ, ಮಸ್ಕಿ, ಮಾನ್ವಿ, ಲಿಂಗಸಗೂರು, ಸಿರವಾರ, ದೇವದುರ್ಗ ಮತ್ತು ರಾಯಚೂರಿನ ತಹಸೀಲ್ದಾರಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸಹಾಯಕರಾದ ಗವಿಸಿದ್ದಪ್ಪ ಹೊಸಮನಿ ಅವರು ಮಾತನಾಡಿ, ಡಾ.ಮಹಾಂತ ಶಿವಯೋಗಿಗಳ ಜನ್ಮದಿನಾಚರಣೆ ಪ್ರಯುಕ್ತ ಆಗಸ್ಟ್ 1ರಂದು ಆಚರಿಸಲ್ಪಡುವ ವ್ಯಸನ ಮುಕ್ತ ದಿನಾಚರಣೆ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ, ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಒಳಗೊಂಡು ಸಮಿತಿ ರಚಿಸಲಾಗಿದೆ. ದಿನಾಚರಣೆಗಾಗಿ ವಿವಿಧ ಇಲಾಖೆಗಳು ಮತ್ತು ಸಂಘ ಸಂಸ್ಥೆಗಳ ಸಹಕಾರ, ಸಮನ್ವಯ ಪಡೆದುಕೊಳ್ಳಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ರಾಯಚೂರು ತಹಶೀಲ್ದಾರರಾದ ಸುರೇಶ ವರ್ಮಾ, ಶಾಲಾ ಶಿಕ್ಷಣ ಇಲಾಖೆಯ ದೈಹಿಕ ಶಿಕ್ಷಣ ಅಧಿಕಾರಿ ರಂಗಸ್ವಾಮಿ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಶಿವಪ್ಪ ಉಪ್ರಾಳ, ಜಿಲ್ಲಾ ಪೊಲೀಸ್ ಇಲಾಖೆಯ ತಿಮ್ಮಣ್ಣ ಚಾಮನೂರ, ವಾರ್ತಾ ಇಲಾಖೆಯ ಅಪ್ರೆಂಟಿಸ್ ತರಬೇತುದಾರರಾದ ನವೀನ್, ಲವ ಹಾಗೂ ಇನ್ನಿತರರು ಇದ್ದರು.

## ಅಂಕಪಟ್ಟಿ ದಾಖಲೆಗಳು ಕಳೆದಿವೆ

ನಾನು ಸೋಮನಾಥ ತಂದೆ ವೀರಭದ್ರಪ್ಪಾ ಸಾ.ಪರತಾಪೂರ ತಾ.ಬಸವಕಲ್ಯಾಣ. ನನ್ನ ಮೂಲ ವಿದ್ಯಾರ್ಹತೆಯ ದಾಖಲಾತಿಗಳಾದ 10ನೇ ಅಂಕಪಟ್ಟಿ, 12ನೇ ತರಗತಿ (ವಿಜ್ಞಾನ) ಅಂಕಪಟ್ಟಿ, ಡಿಪ್ಲೋಮಾ ಇನ್ ಫಾರ್ಮಸಿ ಅಂಕಪಟ್ಟಿಗಳನ್ನು ಕೆಲವು ದಿನಗಳ ಹಿಂದೆ ಬಸವಕಲ್ಯಾಣದ ಐ.ಬಿ ಹತ್ತಿರ ತೆಗೆದುಕೊಂಡು ಹೋಗಿರುತ್ತೇನೆ ಆಕಸ್ಮೀಕವಾಗಿ ನನ್ನ ಮೂಲ ಅಂಕಪಟ್ಟಿಗಳನ್ನು ಕಳೆದು ಹೋಗಿರುತ್ತವೆ. ಯಾರಿಗಾದರೂ ದೂರಕಿದರೆ ಸಂಪರ್ಕಿಸಿ:8050902040

# ಜೂಜಾಟ: 6 ಜನರ ಬಂಧನ

ಕಲಬುರಗಿ,ಜು.26-ನಗರದ ಆಳಂದ ಚೆಕ್‌ಪೋಸ್ಟ್ ಹತ್ತಿರವಿರುವ ಶಿವಲಿಂಗ ನಗರ ಕಾಲೋನಿಯ ಗಾ ರ್ಡ್ ನಲ್ಲಿರುವ ಅಂಗನವಾಡಿ ಹತ್ತಿರದ ಖುಲ್ಲಾ ಜಾಗದಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ದಿಲೀಪಕುಮಾರ ಬಿ.ಸಾಗರ, ಸಿಬ್ಬಂದಿಗಳಾದ ಅಶೋಕ, ರಾಜಕುಮಾರ, ನಾಗರಾಜ, ಸುನೀಲಕುಮಾರ ಅವರು ದಾಳಿ ನಡೆಸಿ 6 ಜನರನ್ನು ಬಂಧಿಸಿದ್ದಾರೆ. ಅಶೋಕ ಮುಲಗೆ, ನಾಗರಾಜ ಕಾಳೆ, ಶಿವಣ್ಣಗೌಡ ಪಾಟೀಲ, ಕಿರಣಕುಮಾರ ಹಟಗಾರ, ಸಂದೇಶ ಕಲಬುರಗಿ ಮತ್ತು ಸೂರ್ಯಕಾಂತ ಕೋಹಿನೂರ ಎಂಬುವವರನ್ನು ಬಂಧಿಸಿ 14,450 ರೂ.ನಗದು ಹಣ, 52 ಇಸ್ಪೀಟ್ ಎಲೆಗಳನ್ನು ಜಪ್ತಿ ಮಾಡಿದ್ದಾರೆ. ಆರ್.ಜಿ.ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸೈನಿಕ ಶಾಲೆಯಲ್ಲಿ ಕಾರ್ಗಿಲ್ ವಿಜಯ ದಿನ ಆಚರಣೆ : ಸೈನಿಕರ ಧೈರ್ಯ, ತ್ಯಾಗ ಮತ್ತು ಬಲಿದಾನದ ಸ್ಮರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 26 : ಭಾರತೀಯ ಸೈನಿಕರು 1999ರ ಕಾರ್ಗಿಲ್ ಯುದ್ಧದಲ್ಲಿ ತೋರಿದ ಶೌರ್ಯದ ಸ್ಮರಣಾರ್ಥವಾಗಿ ಇಂದು ಬಿದರ್‌ನ ಭೂಮರೆಡ್ಡಿ ಶಾಲಾ ಕಾಲೇಜಿನ ಆವರಣದಲ್ಲಿರುವ ಸೈನಿಕ್ ಶಾಲೆಯಲ್ಲಿ ಭಾರತೀಯ ಸೈನಿಕರಿಗೆ ಗೌರವ ನಮನ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ 100ಕ್ಕೂ ಹೆಚ್ಚು ನಿವೃತ್ತ ಯೋಧರು ಮತ್ತು 12 ಜನ ಕಾರ್ಗಿಲ್ ಯುದ್ಧದಲ್ಲಿ ಭಾಗಿಯಾದ ಯೋಧರು ಭಾಗಿಯಾಗಿ, ಕಾರ್ಗಿಲ್ ಯುದ್ಧದಲ್ಲಿ ತಾವು ಕಣ್ಣಾರೆ ಕಂಡ ಅನುಭವಗಳನ್ನ ಸೈನಿಕ ಶಾಲೆಯ ವಿದ್ಯಾರ್ಥಿಗಳೊಂದಿಗೆ ಹಂಚಿಕೊಂಡರು.

ಈ ವೇಳೆ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಮಾಜಿ ಸೈನಿಕ ಸಂಘದ ಜಿಲ್ಲಾ ಅಧ್ಯಕ್ಷ ರಾಜಕುಮಾರ್ ಲದ್ದೆ, ಸುಮಾರು 45 ದಿನಗಳ ಕಾಲ ನಡೆದ ಕಾರ್ಗಿಲ್




ಯುದ್ಧದ ಸಮಯದಲ್ಲಿ ನಡೆದ ಘಟನೆಗಳ ಬಗ್ಗೆ ಇಂದು ಸೈನಿಕ್ ಶಾಲೆಯ ಮಕ್ಕಳಿಗೆ ತಿಳಿಸುವ ಕೆಲಸವನ್ನ ನಾವು ಇಂದು ಮಾಡಿದ್ದೇವೆ.

ಮುಂಬರುವ ಪೀಳಿಗೆಗೆ ನಮ್ಮ ದೇಶದ ಸೈನ್ಯದ ಬಗ್ಗೆ ತಿಳಿಸುವುದು ನಮ್ಮೆಲ್ಲರ ಹೊಣೆ, ಅದ್ದರಿಂದ ಜಿಲ್ಲೆಯ ಮಾಜಿ ಸೈನಿಕರೆಲ್ಲರೂ ಇಲ್ಲಿಗೆ ಬಂದು ಮಕ್ಕಳಲ್ಲಿ ಭಾರತೀಯ ಸೇನೆಯ ಬಗ್ಗೆ ತಿಳಿಸುವ ಕೆಲಸವನ್ನು ಮಾಡಿದ್ದೇವೆ ಎಂದರು.

ಸೈನಿಕ ಶಾಲೆಯ ಪ್ರಾಂಶುಪಾಲರಾದ ಡಾ.ಶ್ರೀಲತಾ ಮಾತನಾಡಿ, ಬಿ.ವಿ.ಬಿ ಆವರಣದಲ್ಲಿರುವ ಸೈನಿಕ ಶಾಲೆಯಲ್ಲಿ ಇಂದು ಕಾರ್ಗಿಲ್ ವಿಜಯ ದಿನವನ್ನು ಆಚರಿಸಲಾಗಿದ್ದು, 100 ಕ್ಕೂ ಅಧಿಕ ಯೋಧರು ಈ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು. ಆರ್ಮಿ, ನೇವಿ, ಏರ್ ಫೋರ್ಸ್ ಸೇರಬೇಕೆಂಬ ಬಯಕೆಹೊತ್ತಿರುವ ನಮ್ಮ ಶಾಲೆಯ ಮಕ್ಕಳಿಗೆ ಹಿರಿಯ ಯೋಧರಿಂದ ಸಲಹೆ ಹಾಗೂ ಮಾರ್ಗದರ್ಶನ ದೊರೆತಂತಾಯಿತು ಎಂದು ಸೈನಿಕ ಶಾಲೆಯ ಪ್ರಾಂಶುಪಾಲರಾದ ಡಾ.ಶ್ರೀಲತಾ ಅವರು ತಿಳಿಸಿದರು.

ಈ ವೇಳೆ ಹೈದರಾಬಾದ್ ಕರ್ನಾಟಕ ಶಿಕ್ಷಣ ಮಂಡಳಿಯ ಆಡಳಿತ ಮಂಡಳಿ ಸದಸ್ಯರಾದ ಡಾ.ರಜನೀಶ್ ವಾಲಿ ಹಾಗೂ ಸೈನಿಕ ಶಾಲೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ರೈತಬಾಂಧವರು ನ್ಯಾನೋ ಯೂರಿಯಾ ಬಳಸಲು ಸಲಹೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.26: ಬೀದರ ಜಿಲ್ಲೆಯಲ್ಲಿ ಜುಲೈ.21ರಿಂದ ಉತ್ತಮ ಮಳೆಯಾಗುತ್ತಿದ್ದು ಯೂರಿಯಾ ಗೊಬ್ಬರ ಮುಂಗಾರು ಬೆಳೆಗಳಿಗೆ ಮೇಲಗೊಬ್ಬರಾಗಿ ರೈತರು ಉಪಯೋಗಿಸುತ್ತಿದ್ದು ಯೂ–ರಿಯಾ ಬೇಡಿಕೆ ಇರುತ್ತದೆ, ರೈತರಿಗೆ ಹರಳೂ ರೂಪದ ಯೂರಿಯಾ ಪರ್ಯಾಯವಾಗಿ (NANO-UREA) ನ್ಯಾನೋ ದ್ರವ ರೂಪದ ಯೂರಿಯಾ ಬಳಕೆಗೆ ರೈತರಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದು ಬೀದರ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಹಾಗೂ ಖಾಸಗಿ ಮಾರಾಟಗಾರರಲ್ಲಿ (NANO-UREA) ನ್ಯಾನೂ ದ್ರವ ರೂಪದ ಯೂರಿಯಾ ಲಭ್ಯವಿರುತ್ತದೆ ಹಾಗೂ ಖಈಈಅಔ ಸಂಸ್ಥೆಯವರಲ್ಲಿ 8654 ಃಠಣಣಟಛ ಗಳಷ್ಟು (NANO-UREA) ನ್ಯಾನೂ ದ್ರವ ರೂಪದ ಯೂರಿಯಾ ದಾಸ್ತಾನುಕರಿಸಿಲಾಗಿದೆ.

ಮುಂಗಾರು ಹಂಗಾಮಿಗೆ 13,727 ಒಖಿ ಯೂರಿಯಾ ರಸಗೊಬ್ಬರ ಬೇಡಿಕೆ ಇದ್ದು, 01.04.2025 ಅಂತ್ಯಕ್ಕೆ ಆರಂಭಿಕ ಶಿಲ್ಕು (OB) 4,927 ಒಖಿ ಯೂರಿಯಾ ಲಭ್ಯವಿರುತ್ತದೆ, ಎಪ್ರಿಲ್–2025 ರಿಂದ ಜುಲೈ–2025ರ ಅಂತ್ಯದವರೆಗೆ 8,365 ಒಖಿ ಯೂರಿಯಾ ಬೇಡಿಕೆ ಇದ್ದು 25 ಜುಲೈ–2025ರ ವರೆಗೆ 4953.95 ಒಖಿ ಸರಬರಾಜು ಆಗಿದ್ದು ಒಟ್ಟು 9880.95 ಒಖಿ ಯೂರಿಯಾ ದಾಸ್ತಾನು ಆಗಿದ್ದು, ಇದರಲ್ಲಿ 8139 ಒಖಿ ವಿತರಣೆಯಾಗಿರುತ್ತದೆ. ಜಿಲ್ಲೆಯಲ್ಲಿ 1363 ಒಖಿ ಯೂರಿಯಾ ದಾಸ್ತಾನು ಲಭ್ಯವಿರುತ್ತದೆ.

ಜಿಲ್ಲೆಯಲ್ಲಿ ರಸಗೊಬ್ಬರ ವೃತಕರು MRP ದರಕ್ಕಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡಿದಲ್ಲಿ ಹಾಗೂ ಅಧಿಕೃತ ಬಿಲ್ಲು ನೀಡದಿದ್ದಲ್ಲಿ ಅಂತವರ ವಿರುದ್ಧ ಕಾನೂನು ಕ್ರಮ ಕೈಗೋಳ್ಳಲಾಗುವುದು ಹಾಗೂ ಪರವಾನಗಿರದ್ದುಗೋಳಿಸಲಾಗುವುದು.

ನ್ಯಾನೋ ಯೂರಿಯ ಪ್ರಪಂಚದಲ್ಲೇ ಮೊಟ್ಟಮೊದಲು ವಿಶಿಷ್ಟವಾದ ಸಾರಜನಕವನ್ನು ಒದಗಿಸುವ ನ್ಯಾನೋ ತಂತ್ರಜ್ಞಾನದ ದ್ರವ ರೂಪದ ಗೊಬ್ಬರಾಗಿದ್ದು ಪರಿಸರಕ್ಕೆ ಪೂರಕವಾಗಿರುವ ಯೂರಿಯಾ ರಸಗೊಬ್ಬರ ಪ್ರಮಾಣ ಕಡಿತಗೊಳಿಸಲು ನ್ಯಾನೋ ಯೂರಿಯಾವನ್ನು ಅಭಿವೃದ್ಧಿಪಡಿಸಲಾಗಿದೆ. ಆದ–ರಿಂದ ಯೂರಿಯಾ ರಸಗೊಬ್ಬರ ಅಗತ್ಯವನ್ನು ಶೇಕಡಾ 50% ರಷ್ಟು ಕಡಿಮೆಗೊಳಿಸುತ್ತದೆ. ಸದರಿ ಗೊಬ್ಬರವು ಇದರ ಲಭ್ಯವು 500 ಮಿ.ಲಿ. ಬಾಟಲಿನಲ್ಲಿ ಲಭ್ಯವಿದ್ದು, ಮತ್ತು ಪ್ರತಿ ಬಾಟಲಿನಲ್ಲಿ 20 % ಸಾರಜನಕ ಹೊಂದಿರುತ್ತದೆ. ನ್ಯಾನೋ ಯೂರಿಯಾವು ಭಾರತ ಸರ್ಕಾರದ ರಸಗೊಬ್ಬರ ನಿಯಂತ್ರಣ ಕಾಯ್ದೆ 1985 ರಲ್ಲಿ ಸೇರ್ಪಡೆಯಾಗಿದ್ದು, ನ್ಯಾನೋ ಯೂರಿಯಾವನ್ನು ಮೊದಲ ಬಾರಿಗೆ 3ನೇ ನವಂಬರ 2019 ರಲ್ಲಿ ಸಂಶೋಧನೆಗೊಂಡಿದ್ದು, ನಂತರ ತುಂಬಾ ಸಂಶೋಧನೆಗಳಿಂದ ಧೃಡಪಟ್ಟು ಸದರಿ ದ್ರವರೂಪದ ನ್ಯಾನೋ ಗೊಬ್ಬರವನ್ನು ಜೂನ–15ನೇ 2021 ರಲ್ಲಿ ವಾಣಿಜ್ಯವಾಗಿ ತಯಾರಿಸಿ ಬಿಡುಗಡೆ ಮಾಡಲಾಗಿದೆ.

ನ್ಯಾನೋ ಯೂರಿಯಾದ ಉಪಯೋಗಗಳು: ನ್ಯಾನೋ ಯೂರಿಯಾ ಬಳಕೆಯಿಂದ ಯೂರಿಯಾ ರಸಗೊಬ್ಬರದ ಶೇಕಡಾ 10 ರಷ್ಟು ಪ್ರಮಾಣವನ್ನು ಕಡಿತಗೊಳಿಸುತ್ತದೆ. ಸಸ್ಯಸಾರಜನಕ ಪೊ?ಷಕಾಂಶ ಪೂರೈಸುವಲ್ಲಿ ನ್ಯಾನೋ ಯೂರಿಯಾವನ್ನು 45 ಕೆ.ಜಿ ಯೂರಿಯಾ ರಸಗೊಬ್ಬರ ಸಮವಾಗಿದೆ. ನ್ಯಾನೂ ಯೂ–ರಿಯಾ ಬಳಸುವುದರಿಂದ ಶೇ 5 ರಿಂದ 10 ರಷ್ಟು ಇಳುವರಿಯನ್ನು ಹೆಚ್ಚಿಸಬಹುದಾಗಿದೆ. ಇದರಿಂದ ಸಾರಜನಕ ರಸಗೊಬ್ಬರಗಳಿಗೆ ತಗಲುವ ಶೇಕಡ 10ರಷ್ಟು ವೆಚ್ಚ ಕಡಿಮೆಯಾಗಿ ಹೆಚ್ಚಿನ ಆದಾಯ ಪಡೆಯಬಹುದಾಗಿದೆ. ನ್ಯಾನೂ ಯೂರಿಯಾದಿಂದ ಶೇಕಡ 50ರಷ್ಟು ಸಾರಜನಕ ರಸಗೊಬ್ಬರದ ಉತ್ಪನ್ನೆಯನ್ನು ಕಡಿಮೆ ಮಾಡಬಹುದು. ಭಾರತ ಸರ್ಕಾರವು ನೀಡುವ 750–800 ಪ್ರತಿ ಕೆ.ಜಿಗೆ ಯೂರಿಯಾ ರಸಗೊಬ್ಬರ ಸಬ್ಸಿಡಿ ಹಣವನ್ನು ಉಳಿತಾಯ ಮಾಡಬಹುದು. ನ್ಯಾನೋ ಯೂರಿಯಾವನ್ನು ಕೀಟನಾಶಕ ಮತ್ತು ರೋಗ ನಾಶಕದ ಜೊತೆಗೆ ಮಿಶ್ರಣಮಾಡಿ ಬಳಸಬಹುದಾಗಿದ್ದು, ಹೀಗೆ ಮಾಡಿದರಿಂದ ಸಿಂಪರಣೆಗೆ ತಗಲುವ ವೆಚ್ಚವನ್ನು ಕಡಿಮೆ ಮಾಡಬಹುದಾಗಿದೆಂದು ಅವರು ತಿಳಿಸಿದ್ದಾರೆ.

ನ್ಯಾನೋ ಯೂರಿಯಾವನ್ನು ಬಳಸುವುದು ಹೇಗೆ?: ಸಿಂಪರಣೆಗೂ ಮುನ್ನ ನ್ಯಾನೂ ಯೂರಿಯಾ ಬಾಟಲನ್ನು ಚೆನ್ನಾಗಿ ಅಲ್ಲಾಡಿಸಬೇಕು. ಮುಂಜಾನೆ ಅಥವಾ ಸಾಯಂಕಾಲ ಸಿಂಪರಣೆ ಮಾಡಬೇಕು. ನ್ಯಾನೋ ಯೂರಿಯಾವನ್ನು ಕೀಟನಾಶಕ/ರೋಗನಾಶಕ ಜೊತೆಗೆ 2/4 ಮಿ.ಲಿಟರ ಪ್ರತಿ ಬಾಟಲ ನೀರಿಗೆ ಮಿಶ್ರಣಮಾಡಿ ಸ್ಪ್ರೇ ಪಂಪನಿಂದ 2ಹಂತದಲ್ಲಿ ಸಿಂಪರಣೆ ಮಾಡಬೇಕು. ಒಂದನೇ ಹಂತ ಬೆಳೆಗಳು ಬಿತ್ತಿದ 20 ದಿವಸಗಳ ನಂತರ ಎರಡನೇ ಹಂತ ಮೊದಲು ಸಿಂಪರಣೆಮಾಡಿದ 2/3 ವಾರಗಳ ನಂತರ ಅಥವಾ ಹೂ ಬಿಡುವ ಒಂದುವಾರದ ಮುಂಚೆ ಸಿಂಪರಣೆ ಮಾಡಬೇಕೆಂದು ರೈತಬಾಂಧವರು ಸಲಹೆಗಳನ್ನು ಅನುಸರಿಸಬೇಕೆಂದು ತಿಳಿಸಿದ್ದಾರೆ.


# ಮಲ್ಲಯ್ಯನ ಗುಡ್ಡ ಪ್ರವಾಸಿ ತಾಣ ಮಾಡಿ: ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ:ಜು.26: ನಗರದ ಹೊರವಲಯದ ಮಲ್ಲಯ್ಯನ ಗುಡ್ಡದ ಪ್ರದೇಶಕ್ಕೆ ಸೇತುವೆ ನಿರ್ಮಾಣ ಮಾಡಿ ಸುಗಮ ಪ್ರವೇಶದ ವ್ಯವಸ್ಥೆ ಕಲ್ಪಿಸುವ ಜೊತೆಗೆ ಅದನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿ ಪಡಿಸುವಂತೆ ಬಾಗಲಕೋಟೆ ನಗರದ ವ್ಯಾಪಾರಸ್ಥರು ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ ಅವರಿಗೆ ಮನವಿ ಮಾಡಿದರು.

ವಿಧಾನ ಪರಿಷತ್ ಸದಸ್ಯ ಪಿ.ಎಚ್. ಪೂಜಾರ ಹಾಗೂ ಬಾಗಲಕೋಟೆ ಯುನಿಯನ್ ಆಫ್ ಮರ್ಚಂಟ್ಸ್ ಮತ್ತು ಎಂಟರ್ ಪ್ರೈನರ್ಸ್ ಅಸೋಸಿಯೇಷನ್ಸ್‌ದವರು ಶನಿವಾರ ಬೀಳಗಿ ತಾಲೂಕಿನ ಬಾಡಗಂಡಿ ಗ್ರಾಮಕ್ಕೆ ಆಗಮಿಸಿದ್ದ ಸಚಿವ ಎಚ್.ಕೆ. ಪಾಟೀಲರನ್ನು ಭೇಟಿ ಮಾಡಿ ಈ ಕುರಿತು ಮನವಿ ಸಲ್ಲಿಸಿದರು.

ಮಲ್ಲಯ್ಯನಗುಡ್ಡದ ವಿಶಾಲ ಸ್ಥಳದಲ್ಲಿ ಉದ್ಯಾನವನ, ವೀಕ್ಷಣಾ ಗೋಪುರ ಹಾಗೂ ಶಿವನ ಮಹಾಮೂರ್ತಿ




ಸ್ಥಾಪನೆ ಮಾಡಬೇಕು. ಹಿನ್ನೀರಿನಲ್ಲಿ ಜಲಸಾಹಸ ಚಟುವಟಿಕೆಗಳು, ವಿಹಾರ ಇತ್ಯಾದಿಗಳನ್ನು ಪ್ರಾರಂಭಿಸಬೇಕು. ಮಲ್ಲಯ್ಯನ ಗುಡ್ಡದಿಂದ ಹೆರಕಲ್ ಅಣೆಕಟ್ಟೆವರೆಗೆ ಬೋಟಿಂಗ್ ವ್ಯವಸ್ಥೆ ಕಲ್ಪಿಸಬೇಕು. ನದಿತಟದಲ್ಲಿ ಆಂಧ್ರಪ್ರದೇಶದ ಶ್ರೀಶೈಲಂ ಮಾದರಿಯಂತೆ ಫೋಟಿಂಗ್ ರೆಸಾರ್ಟ್ ನಿರ್ಮಿಸಬೇಕು ಹಾಗೂ ಬಾಗಲಕೋಟೆ ಪಟ್ಟಣದ ಯುನಿಟ್ 3 ರಲ್ಲಿ ಅಂದಾಜು 5 ಎಕರೆ ಜಮೀನಿನಲ್ಲಿ ಸುಸಜ್ಜಿತ ಪ್ರವಾಸಿ ಹೋಟೆಲ್ ನಿರ್ಮಿಸಬೇಕು ಎಂಬ ವಿಷಯವುಳ್ಳ ಮಾಹಿತಿಯನ್ನು ಮನವಿ ಪತ್ರದಲ್ಲಿ ನೀಡಲಾಗಿದೆ. ಈ ಮೂಲಕ ಬಾಗಲಕೋಟೆ ಒಂದು ಪ್ರಮುಖ ಮಧ್ಯವರ್ತಿಯ ಪ್ರವಾಸಿ ತಾಣವಾಗಿ ರೂಪುಗೊಳ್ಳಲಿದೆ. ಐಹೊಳೆ, ಪಟ್ಟದಕಲ್ಲು, ಬಾದಾಮಿ, ಬನಶಂಕರಿ, ಕೂಡಲಸಂಗಮ, ಹಂಪಿ ಹಾಗೂ ಗೋವಾ ಪ್ರವಾಸಿಗರಿಗೆ ಬಾಗಲಕೋಟೆ ಸಂಚಾರಿ ಕೇಂದ್ರ ಬಿಂದು ಆಗಿ ಬೆಳೆಯಲು ಸಾಧ್ಯವಾಗಲಿದೆ. ಗೋವಾದಿಂದ ಹಂಪಿಗೆ ಬರುವ ವಿದೇಶಿ ಪ್ರವಾಸಿಗರು ಹಾಗೂ ಆಂಧ್ರ–ತೆಲಂಗಾಣದಿಂದ ಗೋವಾಕ್ಕೆ ತೆರಳುವ ಪ್ರವಾಸಿಗರಿಗೂ ಬಾಗಲಕೋಟೆ ಅನುಕೂಲಕರ ತಾಣವಾಗಲಿದೆ.

ಆಲಮಟ್ಟಿ ಹಿನ್ನೀರಿನಿಂದ ಮುಳುಗಡೆಯಾದ ಬಾಗಲಕೋಟೆಯ ವ್ಯಾಪಾರಕ್ಕೆ ಇದು ಹೊಸ ಚೈತನ್ಯ ನೀಡಬಲ್ಲದು. ಪ್ರವಾಸೋದ್ಯಮದ ಅಭಿವೃದ್ಧಿಯಿಂದ ಸ್ಥಳೀಯ ವ್ಯಾಪಾರಕ್ಕೆ ಉತ್ತೇಜನ, ಉದ್ಯೋಗಾವಕಾಶಗಳ ಸೃಷ್ಟಿ ಹಾಗೂ ಆರ್ಥಿಕ ಚಟುವಟಿಕೆಗಳ ಬಲವರ್ಧನೆಗೆ ಸಹಕಾರಿ ಆಗಲಿದೆ ಎಂದು ಅವರು ಮನವಿಯಲ್ಲಿ ತಿಳಿಸಿದ್ದಾರೆ.

ಈ ಕುರಿತು ಪಿ.ಎಚ್.ಪೂಜಾರ ಅವರು ಸಚಿವ ಏಚ್.ಕೆ.ಪಾಟೀಲ ಅವರಿಗೆ ವಿವರಣೆ ನೀಡಿ, ಮಲ್ಲಯ್ಯನ ಗುಡ್ಡವನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸುವಂತೆ ಕೋರಿದರು.

ಅಸೋಸಿಯೇಷನ್ಸ್ ಅಧ್ಯಕ್ಷ ರವಿ ಕುಮಟಗಿ, ಪ್ರಧಾನ ಕಾರ್ಯದರ್ಶಿ ವಿರುಪಾಕ್ಷ ಅಮೃತಕರ, ಉಪಾಧ್ಯಕ್ಷ ಶೇಖರ ಮಾನೆ, ಶ್ರೀನಿವಾಸ ಬಳ್ಳಾರಿ, ಆನಂದ ಜಿಗಜಿನ್ನಿ, ರಾಮು ಮುಂದಡಾ, ಸದಸ್ಯರಾದ ಪುಕರಾಜ್ ಬೇತಾಳ, ಬಾಳು ಉಳ್ಳಾಗಡ್ಡಿ ಮತ್ತಿತರರು ಇದ್ದರು.

# ಮಾನಸಿಕ ಆರೋಗ್ಯ ಕ್ಷೇತ್ರಕ್ಕೆ ಸಿ.ಆರ್. ಚಂದ್ರಶೇಖರ ಕೊಡುಗೆ ಅಪಾರ: ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಜು.26: ವಿದ್ಯಾರ್ಥಿಗಳ, ಸಾರ್ವಜನಿಕರ ಮಾನಸಿಕ ಆರೋಗ್ಯ ಕಾಪಾಡುವಲ್ಲಿ ಮಾನಸಿಕ ಆರೋಗ್ಯ ತಜ್ಞ ಸಿ.ಆರ್.ಚಂದ್ರಶೇಖರ ಅವರ ಪುಸ್ತಕಗಳು, ಅವರ ಆಪ್ತ ಸಮಾಲೋಚನೆಯ ಕೊಡುಗೆ ಅಪಾರವಾಗಿದೆ ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು ಹೇಳಿದರು. ಡಾ. ಸಿ.ಆರ್. ಚಂದ್ರಶೇಖರ್ ಅವರು ನಿಮ್ಹಾನ್ಸ್‌ನಲ್ಲಿ ವೈದ್ಯರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಮಾನಸಿಕ ಆರೋಗ್ಯಕ್ಕೆ ಸಂಬಂಧಿಸಿದಂತೆ ಹಲವಾರು ಪುಸ್ತಕಗಳನ್ನು ಬರೆದಿದ್ದಾರೆ.

ಅವರು ಬರೆದಿರುವ ಮಾನಸಿಕ ಆರೋಗ್ಯ, ಸಾಮಾನ್ಯ ಆರೋಗ್ಯ, ವೈಚಾರಿಕ ಸಾಹಿತ್ಯ, ಕಾದಂಬರಿ, ಸಣ್ಣ ಕತೆ, ಅನುವಾದ ಸಾಹಿತ್ಯ ಮುಂತಾದ ಪ್ರಕಾರಗಳಲ್ಲಿ ಅನೇಕ ಉಪಯುಕ್ತ ಪುಸ್ತಕಗಳು ಮತ್ತು ಲೇಖನಗಳನ್ನು ಬರೆದಿದ್ದಾರೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಅವರು ಬರೆದಿರುವ ಮೌಲಿಕ ಪುಸ್ತಕಗಳನ್ನು ಓದಿ ಉತ್ತಮ ಮಾನಸಿಕ, ದೈಹಿಕ ಆರೋಗ್ಯ ಕಾಪಾಡಿಕೊಂಡು ಶೈಕ್ಷಣಿಕ ಕ್ಷೇತ್ರದಲ್ಲಿ ಮಹೋನ್ನತ ಸಾಧನೆ ಮಾಡಬೇಕು ಎಂದು ಹೇಳಿದರು.

ಬಸವಲಿಂಗ ದೇವರು, ಮಾನಸಿಕ ಆರೋಗ್ಯ ತಜ್ಞ ಸಿ.ಆರ್.ಚಂದ್ರಶೇಖರ, ಕಲಬುರಗಿಯ ಎಸ್.ಎಸ್.ಹಿರೇಮಠ, ಆಡಳಿತಾಧಿಕಾರಿ ಮೋಹನರೆಡ್ಡಿ ಸೇರಿದಂತೆ ಇತರರು ಇದ್ದರು.

# ಆಲೂರು ಗ್ರಾ.ಪಂ ಅಧ್ಯಕ್ಷರು ಮತ್ತು ಪಿಡಿಓ ಮೇಲೆ ಶಿಸ್ತು ಕ್ರಮ ಜರುಗಿಸಲು ಕೋರಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ಮನವಿ ಸಲ್ಲಿಕೆ

ಮಲ್ಲಮ್ಮ ನುಡಿ ವಾರ್ತೆ

ದಾವಣಗೆರೆ: ಸರ್ಕಾರದ ಆದೇಶದ ಪ್ರಕಾರ ಜಿಲ್ಲಾ ಮಟ್ಟದ 02 ಮತ್ತು ಪ್ರಾದೇಶಿಕ ಪತ್ರಿಕೆವೊಂದಕ್ಕೆ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರ ಕಚೇರಿ ಮೂಲಕ ಬಿಡುಗಡೆ ಮಾಡಬೇಕಾದ ಅಲ್ಪಾವಧಿ ಟೆಂಡರ್ ಪ್ರಕಟಣೆಯನ್ನು ರಾಜ್ಯ ಮಟ್ಟದ ಕನ್ನಡ ದಿನಪತ್ರಿಕೆಗೆ ನೇರವಾಗಿ ಪ್ರಕಟಣೆ ಮಾಡಲು ಕೊಟ್ಟಿರುವ ದಾವಣಗೆರೆ ತಾಲ್ಲೂಕಿನ ಆಲೂರು ಗ್ರಾಮ ಪಂಚಾಯತಿ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಕರ್ತವ್ಯ ಲೋಪದ ವಿರುದ್ದ ತನಿಖೆ ಮಾಡಿ ಶಿಸ್ತುಕ್ರಮ ಜರುಗಿಸುವಂತೆ ಕೋರಿ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯಾಧ್ಯಕ್ಷ ಎ.ಸಿ.ತಿಪ್ಪೇಸ್ವಾಮಿ ಅವರ ನೇತೃತ್ವದಲ್ಲಿ ಜಿಲ್ಲಾ ಘಟಕದ ಪದಾಧಿಕಾರಿಗಳ ನಿಯೋಗ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ್ ವಿಠಲ್ ರಾವ್ ಅವರಿಗೆ ಜುಲೈ 25 ರ ಶುಕ್ರವಾರ ಸಂಜೆ ಮನವಿಪತ್ರ ಸಲ್ಲಿಸಿತು.

ಸರ್ಕಾರದ ದಿನಾಂಕ : 19–01–2017 ರ ತಿದ್ದುಪಡಿ ಆದೇಶದ ಪ್ರಕಾರ 1 ಲಕ್ಷ ರೂಪಾಯಿಗಳಿಂದ 10 ಲಕ್ಷ ರೂಪಾಯಿಗಳವರೆಗಿನ ಕಾಮಗಾರಿ ಟೆಂಡರ್ ಜಾಹೀರಾತನ್ನು ಕಾಮಗಾರಿ ವ್ಯಾಪ್ತಿ ಪ್ರದೇಶದಲ್ಲಿನ 02 ಜಿಲ್ಲಾ ದಿನ ಪತ್ರಿಕೆಗಳು ಮತ್ತು ಮೂಲ ಜಿಲ್ಲೆಯಲ್ಲಿ ಮುದ್ರಣವಾಗಿ ಪ್ರಕಟಗೊಳ್ಳುವ ಒಂದು ಪ್ರಾದೇಶಿಕ ಪತ್ರಿಕೆಗೆ ಸರದಿ ಅನುಸಾರ ಬಿಡುಗಡೆ ಮಾಡಬೇಕು. ಅಲ್ಲದೇ ಜಾಹೀರಾತು ನೀತಿ 2013 ಅನುಷ್ಠಾನ ನಿಯಮಗಳು 2014 ಮತ್ತು ತಿದ್ದುಪಡಿಗಳು ಆದೇಶ ಸಂ:ಕಸಂವಾಪ್ರ/69/ವಾಪ್ರಜಾ/2013



ದಿನಾಂಕ:10–09–2014ರ ಅಧ್ಯಾಯ–1ರ ಪ್ರಸ್ತಾವನೆ ಪ್ರಕಾರ ಸರ್ಕಾರದ ವ್ಯಾಪ್ತಿಗೆ ಒಳಪಡುವ ಎಲ್ಲಾ ಇಲಾಖೆಗಳು, ಪಂಚಾಯತ್ ರಾಜ್ಯ ಸಂಸ್ಥೆಗಳು, ನಗರಪಾಲಿಕೆಗಳು, ಸ್ಥಳೀಯ ಸಂಸ್ಥೆಗಳು, ಪ್ರಾಧಿಕಾರ, ನಿಗಮ, ಮಂಡಳಿಗಳಿಗೆ ಸಂಬಂಧಿಸಿದ ಜಾಹೀರಾತುಗಳನ್ನು ಕಡ್ಡಾಯವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮೂಲಕವೇ ಬಿಡುಗಡೆ ಮಾಡಬೇಕು ಎನ್ನುವ ಮಾಹಿತಿಯನ್ನು ರಾಜ್ಯಾಧ್ಯಕ್ಷರು ಜಿಲ್ಲಾ ಪಂಚಾಯತ್ ಸಿಇಒ ಅವರ ಗಮನಕ್ಕೆ ದಾಖಲೆಗಳ ಸಮೇತ ಮನವರಿಕೆ ಮಾಡಿಕೊಟ್ಟರು.

ದಾವಣಗೆರೆ ಜಿಲ್ಲಾ ಪಂಚಾಯತ್ ಮತ್ತು ದಾವಣಗೆರೆ ತಾಲ್ಲೂಕು ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಆಲೂರು ಗ್ರಾಮ ಪಂಚಾಯತಿ ವತಿಯಿಂದ " 2024–2025 ನೇ ಸಾಲಿನ 15 ನೇ ಹಣಕಾಸು ಯೋಜನೆ ಅಡಿ ರೂ. 3.39 ಲಕ್ಷದ "ದಾವಣಗೆರೆ ತಾಲ್ಲೂಕು ಆಲೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಆಲೂರು ಗ್ರಾಮದಲ್ಲಿ ಕುಡಿಯುವ ನೀರಿನ ಪೈಪ್ ಲೈನ್ ನಿರ್ಮಾಣ ಕಾಮಗಾರಿ ಕುರಿತ ಅಲ್ಪಾವಧಿ ಟೆಂಡರ್ ಪ್ರಕಟಣೆ ( ಕೆಪಿಪಿಪಿ–ಪ್ರೊಕ್ಯೂರ್ ಮೆಂಟ್ ಮೂಲಕ ) " ಯನ್ನು ದಾವಣಗೆರೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರ ಕಛೇರಿ ಮೂಲಕ ಸರ್ಕಾರದ ತಿದ್ದುಪಡಿ ಆದೇಶದಂತೆ ಅನ್ವಯವಾಗುವ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ಬಿಡುಗಡೆ ಮಾಡದೇ, ಈ ಹಿಂದೆ ಜಿಲ್ಲಾ ಪಂಚಾಯತ್ ಕಛೇರಿಯಿಂದ ನೀಡಿದ ಸೂಚನೆಯನ್ನು ಸಹ ಪಾಲಿಸದೇ ಆಲೂರು ಗ್ರಾಮ ಪಂಚಾಯತಿ ಅಧ್ಯಕ್ಷರು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ರಾಜ್ಯ ಮಟ್ಟದ ಕನ್ನಡ ದಿನ ಪತ್ರಿಕೆವೊಂದಕ್ಕೆ ನೇರವಾಗಿ ಬಿಡುಗಡೆ ಮಾಡಿದ್ದಾರೆ. ಈ ಟೆಂಡರ್ ಪ್ರಕಟಣೆ ರಾಜ್ಯ ಮಟ್ಟದ ಪತ್ರಿಕೆಯ ದಿನಾಂಕ:24–07–2025 ರ ಸಂಚಿಕೆಯ ಪುಟ ಸಂಖ್ಯೆ 06 ರಲ್ಲಿ ಪ್ರಕಟವಾಗಿದೆ ಎಂದು ಪತ್ರಿಕೆಯ ಸಂಚಿಕೆಯನ್ನು ಸಿಇಒ ಅವರಿಗೆ ನಿಯೋಗ ತೆ–ೂರಿಸಿ ಕೊಟ್ಟಿತು.

ಟೆಂಡರ್ ಬಿಡುಗಡೆಯ ವಿಷಯದಲ್ಲಿ ಸರ್ಕಾರದ ತಿದ್ದುಪಡಿ ಆದೇಶ ಮತ್ತು ಜಿಲ್ಲಾ ಪಂಚಾಯತ್ ಕಛೇರಿಯ ಸೂಚನೆಯನ್ನು ಪಾಲಿಸದೇ ಆಲೂರು ಗ್ರಾಮ ಪಂಚಾಯತಿ ಅಧ್ಯಕ್ಷರು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ರಾಜ್ಯ ಮಟ್ಟದ ಕನ್ನಡ ದಿನ ಪತ್ರಿಕೆಗೆ ನೇರವಾಗಿ ಬಿಡುಗಡೆ ಮಾಡಿರುವುದು ಕರ್ತವ್ಯ ಲೋಪವಾಗಿರುತ್ತದೆ. ಇವರನಡೆಯಿಂದ ಸದರಿ ಟೆಂಡರ್ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ಬಿಡುಗಡೆ–ಯಾಗದೇ ಇರುವುದು ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ಅನ್ಯಾಯ ಮಾಡಿದಂತಾಗಿದೆ ಎಂದು ನಿಯೋಗ ತಿಳಿಸಿತು.

ಆದ್ದರಿಂದ ಟೆಂಡರ್ ಬಿಡುಗಡೆಯ ವಿಷಯದಲ್ಲಿ ಸರ್ಕಾರದ ತಿದ್ದುಪಡಿ ಆದೇಶ ಮತ್ತು ಜಿಲ್ಲಾ ಪಂಚಾಯತ್ ಕಛೇರಿಯ ಸೂಚನೆಯನ್ನು ಪಾಲಿಸದೇ ಆಲೂರು ಗ್ರಾಮ ಪಂಚಾಯತಿ ಅಧ್ಯಕ್ಷರು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ರಾಜ್ಯ ಮಟ್ಟದ ಕನ್ನಡ ದಿನ ಪತ್ರಿಕೆಗೆ ಅಲ್ಪಾವಧಿ ಟೆಂಡರ್ ಪ್ರಕಟಣೆಯನ್ನು ಬಿಡುಗಡೆ ಮಾಡಿರುವುದಕ್ಕೆ ತನಿಖೆ ಮಾಡಿ ಅವರುಗಳ ವಿರುದ್ದ ನಿಯಮಗಳನ್ವಯ ಶಿಸ್ತು ಕ್ರಮ ತೆಗೆದುಕೊಳ್ಳುವಂತೆ ನಿಯೋಗ ಸಿಇಒ ಅವರಿಗೆ ಮನವಿ ಮಾಡಿತು.

ನಿಯೋಗದಲ್ಲಿ ರಾಜ್ಯಾಧ್ಯಕ್ಷ ಎ.ಸಿ.ತಿಪ್ಪೇಸ್ವಾಮಿ, ರಾಜ್ಯ ಸಮಿತಿಯ ನಾಮನಿರ್ದೇಶನ ಸದಸ್ಯ ಡಾ.ಕೆ. ಜೈಮುನಿ, ಜಿಲ್ಲಾಧ್ಯಕ್ಷ ಸುರೇಶ್ ಕುಣಿಬೆಳಕೆರೆ, ಜಿಲ್ಲಾ ಉಪಾಧ್ಯಕ್ಷ ಕೆ.ಆರ್.ಗಂಗರಾಜು, ಜಿಲ್ಲಾ ಖಜಾಂಚಿ ಟಿ.ಜಿ.ಶಿವಮೂರ್ತಿ, ವರದಿಗಾರ ಎಸ್.ಆರೋಕ್ಯ ಸ್ವಾಮಿ ಇದ್ದರು.

ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು ಹಾಗೂ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಸರ್ಕಾರದ ತಿದ್ದುಪಡಿ ಆದೇಶದ ಪ್ರಕಾರ ಮತ್ತು ಜಾಹೀರಾತು ನೀತಿ ನಿಯಮಗಳ ಪ್ರಕಾರ ತಮ್ಮ ಕಚೇರಿಗಳಿಗೆ ಸಂಬಂಧಿಸಿದ ಎಲ್ಲಾ ಬಗೆಯ ಟೆಂಡರ್ ಪ್ರಕಟಣೆಗಳನ್ನು ಕಡ್ಡಾಯವಾಗಿ ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದೇವರಾಜ ಅರಸ್ ಬಡಾವಣೆ, ದಾವಣಗೆರೆ ಇವರ ಕಛೇರಿ ಮೂಲಕವೇ ಬಿಡುಗಡೆ ಮಾಡುವಂತೆ ಸೂಚನೆ ನೀಡಿ, ಮತ್ತೊಮ್ಮೆ ಕಟ್ಟುನಿಟ್ಟಿನ ಸುತ್ತೋಲೆ ಹೊರಡಿಸುವಂತೆ ಸಂಘದ ನಿಯೋಗ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ಮನವಿ ಮೂಲಕ ವಿನಂತಿಸಿತು.

ಮನವಿಗೆ ಸ್ಪಂದಿಸಿದ ಸಿಇಒ ಅವರು ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಇಒಗಳಿಗೆ , ಗ್ರಾಮ ಪಂಚಾಯತಿ ಪಿಡಿಒ/ಕಾರ್ಯದರ್ಶಿಗಳಿಗೆ ಸರ್ಕಾರದ ತಿದ್ದುಪಡಿ ಆದೇಶದ ಪ್ರಕಾರ ಟೆಂಡರ್ ಜಾಹೀರಾತುಗಳನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಮೂಲಕವೇ ಬಿಡುಗಡೆ ಮಾಡುವಂತೆ ಸುತ್ತೋಲೆ ಹೊರಡಿಸಲಾಗುತ್ತದೆ ಎಂದು ಭರವಸೆ ನೀಡಿದರು.

# ಗಾಂಜಾ ಸೇವನೆ-ಐವರ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.26–ಮಾದಕ ವಸ್ತು ಗಾಂಜಾ ಸೇವನೆ ಮಾಡುತ್ತಿದ್ದ ಐವರನ್ನು ನವನಗರದ ಹೆಲಿಪ್ಯಾಡ್ ಬಳಿ ಪೊಲೀಸರು ಶುಕ್ರವಾರ ತಡರಾತ್ರಿ ಬಂಧಿಸಿದ್ದಾರೆ. ರಾಹುಲ್ ಕಾಂಬಳೆ, ಶಿವಪ್ರಸನ್ನ ಪೂಜಾರಿ, ಕೃಷ್ಣ ಠಾ–ಕೂರ್, ವಿಕಾಸ ಹುನಗುಂದ ಮತ್ತು ದರ್ಶನಕುಮಾರ ಜಗಲಿ ಬಂಧಿತರು. ಇವರು ಗಾಂಜಾ ಸೇವಿಸಿ ಸಾರ್ವಜನಿಕರಿಗೆ ತೊಂದರೆ ನೀಡುತ್ತಿದ್ದರು ಎಂದು ಹೇಳಲಾಗಿದ್ದು, ಬಂಧಿತರಲ್ಲಿ ನಾಲ್ಕು ಜನರು ವಿದ್ಯಾರ್ಥಿಗಳಿದ್ದು, ಓರ್ವ ಗುತ್ತಿಗೆದಾರ ಇದ್ದಾನೆನ್ನಲಾಗಿದೆ.

ಡಿವಾಯ್ಎಸ್‌ಪಿ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ನಡೆದಿದ್ದು, ಈ ಕುರಿತು ನವನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಾರ್ವಜನಿಕರಿಗೆ ಸ್ಪಂದಿಸಲು ಶಾಸಕ ಪ್ರಭು ಚವ್ಹಾಣ ಸೂಚನೆ

ಔರಾದ(ಬಿ) :ಜು.26:ಕಳೆದ ಮೂರುದಿನಗಳಿಂದ ಸುರಿಯುತ್ತಿರುವ ನಿರಂತರ ಮಳೆಯಿಂದ ಜನತೆಗೆ ತೊಂದರೆಗಳಾಗುತ್ತಿದ್ದು, ಅಧಿಕಾರಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಸೂಚಿಸಿದ್ದಾರೆ. ಔರಾದ (ಬಿ) ಹಾಗೂ ಕಮಲನಗರ ತಹಸೀಲ್ದಾರರಿಗೆ ದೂರವಾಣಿ ಮುಖಾಂತರ ಮಾತನಾಡಿರುವ ಶಾಸಕರು, ನಿರಂತರ ಮಳೆಯಿಂದಾಗಿ ಈಗಾಗಲೇ ಕೆಲವೆಡೆ ಮನೆ ಹಾನಿಯಾಗಿರುವ ಬಗ್ಗೆ ವರದಿಗಳಾಗಿವೆ. ತಮ್ಮ ಅಧೀನದಲ್ಲಿ ಬರುವ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಜಬಾಬ್ದಾರಿಯಿಂದ ಕೆಲಸ ಮಾಡುವಂತೆ ನೋಡಿಕೊಳ್ಳಬೇಕೆಂದು ತಿಳಿಸಿದ್ದಾರೆ. ಇನ್ನು ಮಳೆಯಾಗುವ



ಸಾಧ್ಯತೆಗಳಿರುವುದರಿಂದ ಇಲಾಖೆಯ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಕಡ್ಡಾಯವಾಗಿ ಕೇಂದ್ರ ಸ್ಥಾನದಲ್ಲಿದ್ದು ಕೆಲಸ ಮಾಡಬೇಕು. ಮೊಬೈಲ್ ಫೋನ್‌ಗಳನ್ನು ಚಾಲ್ತಿಯಲ್ಲಿ ಇಟ್ಟುಕೊಂಡಿರಬೇಕು. ಸಾರ್ವಜನಿಕರಿಂದ ಬರುವ ಎಲ್ಲ ಕರೆಗಳಿಗೆ ಸ್ಪಂದಿಸಬೇಕೆಂದು ಕಟ್ಟುನಿಟ್ಟಾಗಿ ತಿಳಿಸಿದ್ದಾರೆ. ಗ್ರಾಮ ಲೆಕ್ಕಾಧಿಕಾರಿಗಳು ಹಾಗೂ ಗ್ರಾಮ ಸೇವಕರು ಕಡ್ಡಾಯವಾಗಿ ಗ್ರಾಮಗಳಲ್ಲಿ ಕೆಲಸ ಮಾಡಬೇಕು. ಮನೆ ಹಾನಿಯಂತಹ ಘಟನೆಗಳು ನಡೆದಲ್ಲಿ ಸಂಬಂಧಿಸಿದ ಅಧಿಕಾರಿಗಳು ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಸರ್ಕಾರಕ್ಕೆ ನಿಖರವಾದ ವರದಿ ಸಲ್ಲಿಸಬೇಕು. ಸಾರ್ವಜನಿಕರಿಗೆ ಯಾವುದೇ ರೀತಿಯ ಸಮಸ್ಯೆಗಳು ಅಗದಂತೆ ನೋಡಿಕೊಳ್ಳಬೇಕು ಮಳೆಯಿಂದಾಗಿ ಮನೆಗಳ ಹಾನಿ, ಮನೆಗಳಿಗೆ ನೀರು ನುಗ್ಗುವುದು ಸೇರಿದಂತೆ ಯಾವುದೇ ರೀತಿಯ ಅವಘಡಗಳು ಆದಲ್ಲಿ ತಹಸೀಲ್ದಾರರ ಗಮನಕ್ಕೆ ತರಬೇಕು. ಲಿಖಿತವಾಗಿ ಪತ್ರ ನೀಡಿದಲ್ಲಿ ಅದರ ಒಂದು ಪ್ರತಿಯನ್ನು ನನ್ನ ಕಛೇರಿಗೆ ಸಲ್ಲಿಸಬೇಕೆಂದು ಶಾಸಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.